VOLUME: 16 | 07 MAY 2026 | ಗುರುವಾರ | RS: 2 | PAGE: 06 ISSUE: 90 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ವಿಜಯ್ ತಿರುಚಿ ಪೂರ್ವ ಮತ್ತು ಪೆರಂಬೂರು ಎಂಬ ಎರಡು ಕ್ಷೇತ್ರಗಳಿಂದ ಸ್ಪರ್ಧಿಸಿದ್ದರು. ಈ ಪೈಕಿ ಒಂದು ಸ್ಥಾನಕ್ಕೆ ವಿಜಯ್ ರಾಜೀನಾಮೆ ನೀಡಿದ್ದಾರೆ. ಟಿವಿಕೆ ಮೂಲಗಳ ಪ್ರಕಾರ, ವಿಜಯ್ ಅವರಿಂದ ತೆರವಾದ ಸ್ಥಾನದಲ್ಲಿ ತ್ರಿಷಾ ಸ್ಪರ್ಧಿಸುವ ನಿರೀಕ್ಷೆಯಿದೆ. ಅಲ್ಲಿ ಗೆದ್ದ ನಂತರ ಅವರಿಗೆ ಸರ್ಕಾರದಲ್ಲಿ ಪ್ರಮುಖ ಜವಾಬ್ದಾರಿಗಳನ್ನು ನೀಡಲಾಗುವುದು ಎಂಬ ವದಂತಿ ಇದೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಸಿಎಂ ಸ್ಥಾನದ ಗೊಂದಲ..!: ಪರಂಗೆ ಸಿಎಂ ಪಟ್ಟ ಫಿಕ್ಸ್..?

ತುಮಕೂರು : ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರಕಾರಕ್ಕೆ ಮೇ 20ರಂದು 3 ವರ್ಷ ತುಂಬಲಿದ್ದು ತುಮಕೂರಿನಲ್ಲಿ ಬೃಹತ್ ಸಮಾವೇಶ ನಡೆಸಲು ಸಿಎಂ ಸಿದ್ದರಾಮಯ್ಯ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಳ್ಳುವಂತೆ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಸೂಚಿಸಿದ್ದಾರೆ.

ಹೈಕಮಾಂಡ್ ಮುಖ್ಯಮಂತ್ರಿಯನ್ನು ಬದಲಾಯಿಸಲು ನಿರ್ಧರಿಸಿದರೆ, ಮುಖ್ಯಮಂತ್ರಿ ಸ್ಥಾನಕ್ಕೆ ಪರಮೇಶ್ವರ ಅವರನ್ನು ಆಯ್ಕೆ ಮಾಡಲು ಸಿದ್ದರಾಮಯ್ಯ ಬಣ ಪ್ರಯತ್ನಿಸುತ್ತಿದೆ ಎಂದು ಅರ್ಥೈಸಲಾಗುತ್ತಿದೆ.

ಹೈಕಮಾಂಡ್ ಮುಖ್ಯಮಂತ್ರಿ ಹುದ್ದೆಯನ್ನು ತಮಗೆ ಹಸ್ತಾಂತರಿಸಲಿದೆ ಎಂಬ ಭರವಸೆ ಹೊಂದಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಎದುರಿಸುವುದು ಕೂಡ ಪ್ರಮುಖ ತಂತ್ರವಾಗಿದೆ.



ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗಾಗಿ ಸಿದ್ದರಾಮಯ್ಯ ತಮ್ಮ ಹುದ್ದೆಯನ್ನು ತ್ಯಾಗ ಮಾಡಲು ಸಿದ್ಧರಿದ್ದಾರೆ, ಆದರೆ ಸಿಎಂ ಹುದ್ದೆ ಅಲಂಕರಿಸಲು ಖರ್ಗೆ ಹಿಂಜರಿಯುತ್ತಿದ್ದಾರೆ. ಅದಕ್ಕಾಗಿಯೇ ಅವರು ಪರಮೇಶ್ವರ ಅವರನ್ನು ಈ ಹುದ್ದೆಗೆ ಬಿಂಬಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಇತ್ತೀಚೆಗೆ, ಹಿರಿಯ ಶಾಸಕ ಮತ್ತು ಮುಖ್ಯಮಂತ್ರಿಯ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಅವರು, ಸಿಎಂ ಬದಲಾವಣೆ ಅನಿವಾರ್ಯವಾದರೆ,

ಇತ್ತೀಚೆಗೆ, ಹಿರಿಯ ಶಾಸಕ ಮತ್ತು ಮುಖ್ಯಮಂತ್ರಿಯ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಅವರು, ಸಿಎಂ ಬದಲಾವಣೆ ಅನಿವಾರ್ಯವಾದರೆ, ಖರ್ಗೆ ಮುಖ್ಯಮಂತ್ರಿಯಾಗಬೇಕು ಎಂದು ಹೇಳಿದ್ದಾರೆ. “ದೆಹಲಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕರ್ನಾಟಕದ ರಾಜಕೀಯ ಪರಿಸ್ಥಿತಿ ಕುರಿತು ಚರ್ಚಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ಥಾನ ಬದಲಾವಣೆಯಾದರೆ, ಖರ್ಗೆ ಅವರೇ ಮುಖ್ಯಮಂತ್ರಿಯಾಗಬೇಕು ಎಂದು ರಾಯರೆಡ್ಡಿ ಖರ್ಗೆ ಅವರಿಗೆ ಸೂಚಿಸಿದ್ದಾರೆ.

ಖರ್ಗೆ ಮುಖ್ಯಮಂತ್ರಿಯಾಗಬೇಕು ಎಂದು ಹೇಳಿದ್ದಾರೆ. "ದೆಹಲಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕರ್ನಾಟಕದ ರಾಜಕೀಯ ಪರಿಸ್ಥಿತಿ ಕುರಿತು ಚರ್ಚಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ಥಾನ ಬದಲಾವಣೆಯಾದರೆ, ಖರ್ಗೆ ಅವರೇ ಮುಖ್ಯಮಂತ್ರಿಯಾಗಬೇಕು ಎಂದು ರಾಯರೆಡ್ಡಿ ಖರ್ಗೆ ಅವರಿಗೆ ಸೂಚಿಸಿದ್ದಾರೆ. ಅಲ್ಲದೆ, ಖರ್ಗೆ ಅವರಿಗೆ ಆಹ್ವಾನ ನೀಡಲಾಗಿದೆ ಎಂದು ರಾಯರೆಡ್ಡಿ ಬಹಿರಂಗಪಡಿಸಿದ್ದಾರೆ.

ಸಿದ್ದರಾಮಯ್ಯ ಸ್ಥಾನಕ್ಕೆ ಸಮರ್ಥ ನಾಯಕರನ್ನು ಆಯ್ಕೆ ಮಾಡಬೇಕು, ಇಲ್ಲದಿದ್ದರೆ ಅದು ತಪ್ಪು ಸಂಕೇತವನ್ನು ರವಾನಿಸುತ್ತದೆ ಎಂದು ತಿಳಿಸಿದ್ದೆ. ಆದರೆ ಎಐಸಿಸಿ ಅಧ್ಯಕ್ಷರಾಗಿರುವುದರಿಂದ ಸಿಎಂ ಆಗುವ ಆಯ್ಕೆ ಅವರ ಮನಸ್ಸಿನಲ್ಲಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಮುಖ್ಯಮಂತ್ರಿ ಬದಲಾವಣೆ ಮಾಡಬೇಕಾದರೆ, ಕಾಂಗ್ರೆಸ್ ಶಾಸಕಾಂಗ ಪಕ್ಷವು 2023 ರಲ್ಲಿ ಪಕ್ಷ ಅಧಿಕಾರಕ್ಕೆ ಬಂದಾಗ ಸಿದ್ದರಾಮಯ್ಯ ಅವರಂತೆಯೇ ಕಾಂಗ್ರೆಸ್ ಹೈಕಮಾಂಡ್ ನಾಯಕನನ್ನು ಆಯ್ಕೆ ಮಾಡುತ್ತದೆ" ಎಂದು ಅವರು ಹೇಳಿದರು.

ಮಂಗಳವಾರ ಇಲ್ಲಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ರ್‍ಯಾಲಿಯ ಸಿದ್ಧತೆಗಳನ್ನು ಪರಿಶೀಲಿಸಿದ ಪರಮೇಶ್ವರ್ ಶಿಷ್ಟಾಚಾರದ ಪ್ರಕಾರ ಎಲ್ಲಾ ಪಕ್ಷಗಳ ಶಾಸಕರನ್ನು ಆಹ್ವಾನಿಸಲಾಗುವುದರಿಂದ ಇದು ರಾಜಕೀಯೇತರ ಕಾರ್ಯಕ್ರಮವಾಗಿರುತ್ತದೆ ಎಂದು ಸ್ಪಷ್ಟಪಡಿಸಿದರು.

ಇದು ರಾಜ್ಯ ಸರ್ಕಾರದ ಪಕ್ಷಾತೀತ ಸಮಾವೇಶ. ತುಮಕೂರಿನಲ್ಲಿ ನಡೆಸಲಾಗುವ ಅಭಿವೃದ್ಧಿ ಕಾರ್ಯಗಳ ಪ್ರಮಾಣವು ಯಾವುದೇ ಜಿಲ್ಲೆಗೆ ಹೊಂದಿಕೆಯಾಗದ ಕಾರಣ, ಇಲ್ಲಿ ಸಮಾವೇಶವನ್ನು ನಡೆಸಲಾಗುತ್ತಿದೆ" ಎಂದು ಅವರು ಹೇಳಿದರು.

## ಶೃಂಗೇರಿ ಮತ ಎಣಿಗೆ: ಸಿಬಿಐ ತನಿಖೆಗೆ ಆಗ್ರಹ

ಬೆಂಗಳೂರು: ಡಿ.ಎನ್.ಜೀವರಾಜ್ ಅವರ ಶಾಸಕ ಸ್ಥಾನದ ಫಲಿತಾಂಶ ಬಂದ ನಂತರವೂ ಚುನಾವಣಾಧಿಕಾರಿಗಳು ಫಲಿತಾಂಶ ಘೋಷಿಸಲು ಒಂದು ದಿನ ತಡ ಮಾಡಿದ್ದಾರೆ. ಅಧಿಕಾರಿಗಳ ಮೇಲೆ ಒತ್ತಡ ಹಾಕಿದವರು ಯಾರೆಂದು ತಿಳಿಯಲು ಸಿಬಿಐ ತನಿಖೆ ಮಾಡಬೇಕಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು.

ಶೃಂಗೇರಿ ಕ್ಷೇತ್ರದ ಮರು ಮತ ಎಣಿಕೆ ಬಳಿಕ ಶಾಸಕರಾಗಿ ಆಯ್ಕೆಯಾದ ಡಿ.ಎನ್.ಜೀವರಾಜ್ ಅವರಿಗೆ ಸ್ಪೀಕರ್ ಯು.ಟಿ.ಖಾದರ್ ವಿಧಾನಸೌಧದಲ್ಲಿ ಪ್ರಮಾಣವಚನ ಬೋಧಿಸಿದರು. ಕಾರ್ಯಕ್ರಮದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಆರ್.ಅಶೋಕ, ಶೃಂಗೇರಿ ಶಾಸಕರಾದ ಡಿ.ಎನ್.ಜೀವರಾಜ್ ಅಧಿಕೃತವಾಗಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಕಾಂಗ್ರೆಸ್ ನಾಯಕರು ವೋಟ್ ಚೋರಿ ಬಗ್ಗೆ ಮಾತಾಡುತ್ತಾರೆ. ಶೃಂಗೇರಿಯಲ್ಲಿ ಕೊನೆಯಲ್ಲಿ ಅಂಚೆ ಮತಗಳನ್ನು ಎಣಿಸಲಾಗಿದೆ. ಇಲ್ಲಿ ಚುನಾವಣಾಧಿಕಾರಿಗಳಿಗೆ ಫೋನ್ ಕರೆ ಮಾಡಿ ಒತ್ತಡ ಹಾಕಿದವರು ಯಾರು ಎಂಬುದು ಸಿಬಿಐ ತನಿಖೆಯಿಂದ ಬಯಲಾಗಬೇಕಿದೆ. ಮರು ಎಣಿಕೆಯಲ್ಲಿ ಫಲಿತಾಂಶ ಗೊತ್ತಾದ ಕೂಡಲೇ ಚುನಾವಣಾ ಆಯೋಗದಿಂದ ಪ್ರಮಾಣಪತ್ರ ನೀಡಬೇಕೆಂದು ಕೋರ್ಟ್ ಆದೇಶದಲ್ಲಿ ತಿಳಿಸಲಾಗಿದೆ. ಆದರೂ ಒಂದು ದಿನ ತಡವಾಗಿ ಪ್ರಮಾಣಪತ್ರ ನೀಡಲಾಗಿದೆ. ಇಲ್ಲಿ ಅಧಿಕಾರಿಗಳ ಮೇಲೆ ಒತ್ತಡ ಹಾಕಿದವರು ಯಾರೆಂದು ಗೊತ್ತಾಗಬೇಕಿದೆ ಎಂದರು.

ಕಳೆದ ಮೂರು ವರ್ಷದಲ್ಲಿ ಎರಡು ಕ್ಷೇತ್ರಗಳಲ್ಲಿ ವೋಟ್ ಚೋರಿ ಆಗಿರುವುದು ತಿಳಿದುಬಂದಿದೆ. ಅದನ್ನು ಒಪ್ಪಿಕೊಳ್ಳದೆ ಕಾಂಗ್ರೆಸ್ ಆರೋಪಗಳನ್ನು ಮಾಡುತ್ತಿದೆ. ಸ್ಟ್ರಾಂಗ್ ರೂಮ್‌ನಲ್ಲಿ ಸಿಸಿಟಿವಿ ಕ್ಯಾಮರಾ ಇದ್ದು, ಅಲ್ಲಿ ಪೊಲೀಸರು ಕೂಡ ಇರುತ್ತಾರೆ. ಅವರ ಕಣ್ಣು ತಪ್ಪಿಸಿ ತಿದ್ದುಪಡಿ ಮಾಡಲು ಬಿಜೆಪಿಗೆ ಸಾಧ್ಯವಿಲ್ಲ. ಈ ರೀತಿ ಆರೋಪ ಮಾಡುವುದು ಕಾಂಗ್ರೆಸ್‌ನ ಹೇಡಿತನದ ಪರಮಾವಧಿ. ಜೀವರಾಜ್ ಅವರು ಪ್ರಕರಣದ ದಾಖಲಿಸಿ ವರ್ಷ ಕಳೆದಿದೆ. ಕೋರ್ಟ್ ನೀಡುವ ಆದೇಶವನ್ನು ನಾವು ಒಪ್ಪುತ್ತೇವೆಯೇ ಹೊರತು ವಿರೋಧ ಮಾಡುವುದಿಲ್ಲ ಎಂದರು.

ದಾವಣಗೆರೆ ಹಾಗೂ ಬಾಗಲಕೋಟೆ ಉಪಚುನಾವಣೆಯಲ್ಲಿ ಸೋತ ಬಗ್ಗೆ ಪರಾಮರ್ಶೆ ಮಾಡುತ್ತೇವೆ. ಹಿಂದೆ ನಮ್ಮ ಸರ್ಕಾರ ಇದ್ದಾಗಲೂ ಉಪಚುನಾವಣೆ ಗೆದ್ದಿದ್ದೆವು.

## ಬದಲಾವಣೆಗೆ ಸಿದ್ಧ ಎಂದ ಸಿದ್ದು



ಮೈಸೂರು: ಆರ್ಥಿಕ ಹಾಗೂ ಸಾಮಾಜಿಕ ಶಕ್ತಿಗಾಗಿ ಶಿಕ್ಷಣ ಅಗತ್ಯವಾಗಿದ್ದು, ಭೋವಿ ಜನಾಂಗದವರು ಶಿಕ್ಷಣಕ್ಕೆ ಒತ್ತು ನೀಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಜಿಲ್ಲಾಡಳಿತದ ವತಿಯಿಂದ ಮೈಸೂರಿನ ಕಲಾಮಂದಿರದಲ್ಲಿ ಆಯೋಜಿಸಿದ್ದ ಸಿದ್ದರಾಮೇಶ್ವರ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು.

ಶ್ರೀ ಸಿದ್ದರಾಮೇಶ್ವರ ಜಯಂತಿಯ ಶುಭ ಕೋರಿದ ಮುಖ್ಯಮಂತ್ರಿಗಳು, ರಾಜ್ಯದಲ್ಲಿ ಸಮಸಮಾಜ ನಿರ್ಮಿಸುವ ಸಂಕಲ್ಪವನ್ನು ಸರ್ಕಾರ ಹೊಂದಿದೆ. ಉತ್ಪಾದಿಸಿದ ಸಂಪತ್ತು ಸಮಾನವಾಗಿ ಹಂಚಿಕೆಯಾಗಿಬೇಕು. ರಾಜ್ಯದ ಸರ್ವರಿಗೂ ಸಮಪಾಲು, ಸಮಬಾಳು ಸಿಗಬೇಕೆಂಬುದೇ ಸರ್ಕಾರದ ಉದ್ದೇಶ. ಸಿದ್ದರಾಮೇಶ್ವವರೂ ಸೇರಿದಂತೆ ಸಂತಮಹಾಶಯರು, ಸಮಾಜದಲ್ಲಿ ಜಾತಿವರ್ಗಗಳ ವ್ಯವಸ್ಥೆಗಳು ತೊಲಗಬೇಕು ಎಂದು ಬಯಸಿದ್ದರು. ಬಸವಾದಿ ಶರಣರು 12 ನೇ ಶತಮಾನದಲ್ಲಿ ಸಮಾನತೆಯ ಸಿದ್ಧಾಂತವನ್ನು ಬೋಧಿಸಿದ್ದರು. ಶೋಷಣೆಗೊಳಗಾದ ಹಾಗೂ ಅವಕಾಶವಂಚಿತ ಸಮುದಾಯಗಳು ಸಂಘಟಿತರಾಗುವ ಸಮ್ಮೇಳನಗಳು ಉತ್ತಮ ಕಾರ್ಯಗಳಾಗಿವೆ ಎಂದರು. ಬಸವಜಯಂತಿಯಂದು ನಾನು 2013 ಮೇ 13 ರಂದು ನಾನು ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡಿದೆ. ಬಸವಣ್ಣನವರು ಬೋಧಿಸಿದಂತೆ ನಾನು ಸಾಮಾಜಿಕ ನ್ಯಾಯದಲ್ಲಿ ನಂಬಿಕೆಯಿರಿಸಿದ್ದೇನೆ. ರಾಜಕೀಯ ಸ್ವಾತಂತ್ರ್ಯವು, ಆರ್ಥಿಕ ಹಾಗೂ ಸಾಮಾಜಿಕ ಸ್ವಾತಂತ್ರ್ಯದ ತಳಹದಿಯ ಮೇಲೆ ನಿಂತಿದೆ. ಶಿಕ್ಷಣ ಪಡೆದಾಗ ಮಾತ್ರ ಸಾಮಾಜಿಕ ಆರ್ಥಿಕ ಶಕ್ತಿ ದೊರಕಲು ಸಾಧ್ಯ ಎಂದರು.

ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ರಾಜ್ಯದ ಜನರು ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಮೆಚ್ಚಿಕೊಂಡಿರುವುದನ್ನು ಸೂಚಿಸುತ್ತದೆ .ವಿಪಕ್ಷಗಳ ಯಾವುದೇ ತಂತ್ರಗಾರಿಕೆ ನಡೆಯುವುದಿಲ್ಲ. ಅವರು ಕೇವಲ ಕುತಂತ್ರಗಳನ್ನಷ್ಟೇ ಮಾಡುತ್ತಾರೆ ಎಂದರು.

### ಸಿಎಂ ಬದಲಾವಣೆ-ವರಿಷ್ಠರ ತೀರ್ಮಾನಕ್ಕೆ ಬದ್ಧ

ಮುಖ್ಯಮಂತ್ರಿ ಬದಲಾವಣೆ ವಿಷಯದ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಕಾಂಗ್ರೆಸ್ ಸರ್ಕಾರ ತನ್ನ ಐದು ವರ್ಷದ ಅವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಿದೆ. ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಪಕ್ಷದ ವರಿಷ್ಠರು ತೀರ್ಮಾನಕ್ಕೆ ಬದ್ಧವಾಗಿರುತ್ತೇನೆ. ಸಿಎಂ ಬದಲಾವಣೆ ಮಾಡುವ ಬಗ್ಗೆ ನನಗೆ ಯಾವುದೇ ಮಾಹಿತಿಯಿಲ್ಲ. ವರಿಷ್ಠರ ಭೇಟಿಗೆ ಕರೆ ಬಂದರೆ ನವದೆಹಲಿಗೆ ತೆರಳುವುದಾಗಿ ತಿಳಿಸಿದರು.

ಆರ್ಥಿಕವಾಗಿ ಶಕ್ತಿಯಿಲ್ಲದವರಿಗೆ ಗ್ಯಾರಂಟಿ ಯೋಜನೆಗಳನ್ನು ಸಮಾನವಾಗಿ ನೀಡಲಾಗಿದೆ. ಮಹಿಳೆಯರಿಗೆ ಶಕ್ತಿ ಹಾಗೂ ಗೃಹಲಕ್ಷ್ಮಿ ಯೋಜನೆಯನ್ನು ಯಾವುದೇ ತಾರತಮ್ಯವಿಲ್ಲದೇ ನೀಡಲಾಗುತ್ತಿದೆ. ನಮ್ಮ ಸರ್ಕಾರ ಭೋವಿ ನಿಗಮವೂ ಸೇರಿದಂತೆ ವಿವಿಧ ಸಮುದಾಯಗಳ ಅಭಿವೃದ್ಧಿ ನಿಗಮಗಳ ಸಾಲವನ್ನು ಮನ್ನಾ ಮಾಡಲಾಗಿದೆ.

ಪರಿಶಿಷ್ಟ ಜಾತಿಯ ಸಮುದಾಯಗಳಲ್ಲಿನ ಅಸಮಾನತೆ ಹೋಗಲಾಡಿಸಲು ಐತಿಹಾಸಿಕ ಒಳ ಮೀಸಲಾತಿಯನ್ನು ಜಾರಿಗೊಳಿಸಿದೆ ಎಡಗೈಗೆ 5.25%, ಬಲಗೈಗೆ 5.25%, ಹಾಗೂ ಇತರ ಉಪಜಾತಿಗಳಿಗೆ 4.5% ಹಂಚಿಕೆ ಮಾಡಲಾಗಿದೆ ಎಂದರು.

ಈಗ ಜಾತಿ ಸಮೀಕ್ಷೆ ನಡೆಯುತ್ತಿದ್ದು, ಜಾತಿ ಸಮೀಕ್ಷೆ ವರದಿ ಬಂದ ನಂತರ ಚರ್ಚೆ ಮಾಡೋಣ ಎಂದರು. ನಮ್ಮ ಸರ್ಕಾರ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆ. ಯಾರಿಗೂ ಅನ್ಯಾಯವಾಗಬಾರದು, ನೂರಕ್ಕೆ ನೂರು ಅಲ್ಲದಿದ್ದರೂ 99% ನ್ಯಾಯ ಒದಗಿಸಲು ಪ್ರಯತ್ನಿಸಲಾಗುವುದು ಎಂದರು.

ಸಮುದಾಯದವರು ಇಟ್ಟಿರುವ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ಭರವಸೆ ನೀಡಿದ ಮುಖ್ಯಮಂತ್ರಿಗಳು ಸಮುದಾಯದವರಿಗೆ ಕುಲಪತಿ, ವಿಧಾನ ಪರಿಷತ್ ಸದಸ್ಯ ಸ್ಥಾನ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದರು. ಏಳು ಕೋಟಿ ಜನರಿಗೂ ನ್ಯಾಯ ಸಿಗಬೇಕು ಹಾಗೂ ಯಾರೂ ಅವಕಾಶಗಳಿಂದ ವಂಚಿತರಾಗಬಾರದು ಎಂದರು.



ಚಿತ್ರದುರ್ಗದಲ್ಲಿ ನಡೆಯುವ ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮದ ಸಿದ್ಧತೆಗಳನ್ನು ಬಿ.ವೈ.ವಿಜಯೇಂದ್ರ ಪರಿಶೀಲಿಸಿದರು.

## ವಿಜಯ್ ಪ್ರಮಾಣವಚನಕ್ಕೆ ಹೊಸ ವಿಘ್ನ



ಚೆನ್ನೈ: ಟಿವಿಕೆ ಮುಖ್ಯಸ್ಥ ವಿಜಯ್ ತಮಿಳುನಾಡಿನ ಲೋಕಭವನದಲ್ಲಿ ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ಅವರನ್ನು ಭೇಟಿ ಮಾಡಿ, ಸರ್ಕಾರ ರಚಿಸಲು ಹಕ್ಕು ಮಂಡಿಸಿದರು. ಟಿವಿಕೆ ರಾಜ್ಯದ ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದರೂ ಬಹುಮತ ಇಲ್ಲದ ಕಾರಣದಿಂದ ಸರ್ಕಾರ ರಚನೆಗೆ ಹಕ್ಕು ಮಂಡಿಸಲು ಟಿವಿಕೆಗೆ ಸಾಧ್ಯವಾಗಿರಲಿಲ್ಲ. ಇದೀಗ ಕಾಂಗ್ರೆಸ್ ಬೆಂಬಲ ನೀಡಿರುವುದರಿಂದ ವಿಜಯ್ ತಮ್ಮ ಪಕ್ಷ ಸರ್ಕಾರ ರಚಿಸಲು ಅವಕಾಶ ನೀಡಲು ರಾಜ್ಯಪಾಲರಿಗೆ ಮನವಿ ಮಾಡಿದ್ದಾರೆ.

234 ಸದಸ್ಯರನ್ನು ಹೊಂದಿರುವ ತಮಿಳುನಾಡು ವಿಧಾನಸಭೆಯಲ್ಲಿ 108 ಸ್ಥಾನಗಳನ್ನು ಗೆಲ್ಲುವ ಮೂಲಕ ಟಿವಿಕೆ ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಆದರೆ, ಸರ್ಕಾರ ರಚಿಸಲು 118 ಸ್ಥಾನಗಳ ಬಹುಮತದ ಅಗತ್ಯವಿತ್ತು. ಆ ಬಹುಮತ ಲಭಿಸದ ಹಿನ್ನೆಲೆಯಲ್ಲಿ ವಿಜಯ್ ಇತರೆ ಪಕ್ಷಗಳ ಬೆಂಬಲ ಕೋರಿದ್ದರು.

ಕಾಂಗ್ರೆಸ್ ಪಕ್ಷವು ಟಿವಿಕೆಗೆ ತನ್ನ ಬೆಂಬಲವನ್ನು ಸಾರ್ವಜನಿಕವಾಗಿ ಘೋಷಿಸಿದ್ದರೂ ವಿಜಯ್ ಅವರ ಪಕ್ಷಕ್ಕೆ ಯಾರೆಲ್ಲಾ ಬೆಂಬಲ ನೀಡಿದ್ದಾರೆ ಎಂಬುದು ತಕ್ಷಣಕ್ಕೆ ತಿಳಿದುಬಂದಿಲ್ಲ.

ಡಿಎಂಕೆಯ ದೀರ್ಘಕಾಲದ ಮಿತ್ರ ಪಕ್ಷವಾಗಿರುವ ಕಾಂಗ್ರೆಸ್ ಪಕ್ಷವು ಇಂದು ನಟ-ರಾಜಕಾರಣಿ ವಿಜಯ್ ಅವರ ಟಿವಿಕೆ ಪಕ್ಷಕ್ಕೆ ಬೆಂಬಲ ನೀಡುವುದಾಗಿ ಘೋಷಿಸಿತು. ಈ ಮೂಲಕ 55 ವರ್ಷದ ಡಿಎಂಕೆ ಜೊತೆಗಿನ ಸಂಬಂಧವನ್ನು ಕಡಿದುಕೊಂಡಿತು.

ಇದರ ಜೊತೆಗೆ ಭಾರತದ ಸಂವಿಧಾನದಲ್ಲಿ ನಂಬಿಕೆಯಿಲ್ಲದ ಕೋಮುವಾದಿ ಶಕ್ತಿಗಳನ್ನು ಮೈತ್ರಿಕೂಟದಿಂದ ಹೊರಗಿಡುವಂತೆ ಟಿವಿಕೆಗೆ ಕಾಂಗ್ರೆಸ್ ಷರತ್ತು ಹಾಕಿದೆ.

ವಿಜಯ್ ಗುರುವಾರ ಬೆಳಿಗ್ಗೆ (ಮೇ 7) ತಮಿಳುನಾಡಿನ ಹೊಸ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಶುಭ ಮುಹೂರ್ತದ ಪ್ರಕಾರ ಬೆಳಿಗ್ಗೆ 10ರಿಂದ 11.15ರ ನಡುವೆ ಪ್ರಮಾಣವಚನ ಸಮಾರಂಭವನ್ನು ನಿಗದಿಪಡಿಸಲಾಗಿದೆ.

## ಅಮೃತ್‌ಸರ್ ಮತ್ತು ಜಲಂಧರ್‌ನಲ್ಲಿ ಸ್ಫೋಟ

ಅಮೃತ್‌ಸರ(ಪಂಜಾಬ್): ಪಂಜಾಬ್‌ನ ಅಮೃತ್‌ಸರ್ ಮತ್ತು ಜಲಂಧರ್‌ನ ಹೈ ಸೆಕ್ಯೂರಿಟಿ ವಲಯಗಳ ಬಳಿ ಮಂಗಳವಾರ ಕೆಲವೇ ಗಂಟೆಗಳ ಅಂತರದಲ್ಲಿ ಸ್ಫೋಟ ಸಂಭವಿಸಿದ್ದು, ರಾಜ್ಯಾದ್ಯಂತ ಕಟ್ಟೆಚ್ಚರ ವಹಿಸಲಾಗಿದೆ.

ಮೊದಲ ಬಾಂಬ್ ಸ್ಫೋಟ ಜಲಂಧರ್‌ನ ಗಡಿ ಭದ್ರತಾ ಪಡೆ (ಬಿಎಸ್‌ಎಫ್)ಯ ಮುಖ್ಯ ಕ್ವಾರ್ಟರ್ಸ್ ಬಳಿ ರಾತ್ರಿ 8ಕ್ಕೆ ನಡೆದಿದೆ. ಇದಾದ ಮೂರು ಗಂಟೆಗಳ ಬಳಿಕ ಅಮೃತಸರದ ಖಾಸಾದಲ್ಲಿರುವ ಸೇನಾ ಕಂಟೋನ್ಮೆಂಟ್ ಪ್ರದೇಶದ ಬಳಿ ಸ್ಫೋಟ ಸಂಭವಿಸಿದೆ.

ಅಮೃತಸರದಲ್ಲಿ ಮಧ್ಯರಾತ್ರಿಯ ಸುಮಾರಿಗೆ ಸ್ಫೋಟ ಸಂಭವಿಸಿದ್ದು, ಭಯಭೀತರಾದ ನಿವಾಸಿಗಳು ತಮ್ಮ ಮನೆಗಳಿಂದ ಹೊರಗೆ ಓಡಿದ್ದಾರೆ. ಈ ಕುರಿತು ಮಾಹಿತಿ ಲಭ್ಯವಾಗುತ್ತಿದ್ದಂತೆ ಅಮೃತಸರ ಗ್ರಾಮೀಣ ಪೊಲೀಸರು, ನಗರ ಪೊಲೀಸರು, ಸೇನೆ, ಬಾಂಬ್ ನಿಷ್ಕ್ರಿಯ ದಳ ಮತ್ತು ವಿಧಿವಿಜ್ಞಾನ ಪ್ರಯೋಗಾಲಯದ ತಂಡಗಳು ಸ್ಥಳಕ್ಕೆ ಧಾವಿಸಿವೆ.

ಎರಡೂ ಸ್ಫೋಟಗಳಲ್ಲಿ ಯಾವುದೇ ಸಾವು-ನೋವುಗಳು ಅಥವಾ ಗಾಯಗಳಾದ ಬಗ್ಗೆ ವರದಿಯಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೊದಲ ಸ್ಫೋಟ ಜಲಂಧರ್‌ನಲ್ಲಿ ಬಿಎಸ್‌ಎಫ್ ಚೌಕದಲ್ಲಿ ಸಂಭವಿಸಿದ್ದು, ಸ್ಕೂಟರ್ ಬೆಂಕಿ ಹೊತ್ತಿಕೊಂಡು ಸ್ಫೋಟಿಸಿದೆ. ಸಿಸಿಟಿವಿಯಲ್ಲಿ ದೃಶ್ಯಗಳು ಸೆರೆಯಾಗಿವೆ. ಈ ಸ್ಕೂಟರ್ ಮಾಲೀಕ ಕೊರಿಯರ್ ಕಂಪನಿಯಲ್ಲಿ ಕೆಲಸ ಮಾಡುವ ಗುರುಪ್ರೀತ್ ಸಿಂಗ್ ಎಂದು ಪೊಲೀಸರು ಪತ್ತೆ ಹಚ್ಚಿದ್ದು, ಅವರನ್ನು ವಿಚಾರಣೆಗೆ ಒಳಪಡಿಸಲಾಗಿದೆ.

## ‘ಜಾತ್ಯಾತೀತ ತತ್ವ ಉಳಿಸಲು ಟಿವಿಕೆಗೆ ಬೆಂಬಲ’

ಬೆಂಗಳೂರು: "ಅಹಮದಾಬಾದ್ ನಲ್ಲಿ ದೊಡ್ಡ ಕ್ರೀಡಾಂಗಣವಿದೆ, ಹೆಚ್ಚು ಜನ ಸೇರುತ್ತಾರೆ ಎಂಬ ಉದ್ದೇಶದಿಂದ ಐಪಿಎಲ್ ಫೈನಲ್ ಪಂದ್ಯವನ್ನು ಸ್ಥಳಾಂತರ ಮಾಡಿರಬೇಕು. ಶಾಸಕರಿಗೆ ಟಿಕೆಟ್ ವಿತರಣೆಗೂ ಅಂತಿಮ ಪಂದ್ಯ ಸ್ಥಳಾಂತರಕ್ಕೂ ಸಂಬಂಧವಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಬುಧವಾರ ಪ್ರತಿಕ್ರಿಯೆ ನೀಡಿದರು.

ಶಾಸಕರಿಗೆ ಐಪಿಎಲ್ ಟಿಕೆಟ್ ಬೇಡಿಕೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ನಡೆಯಬೇಕಿದ್ದ ಐಪಿಎಲ್ ಫೈನಲ್ ಪಂದ್ಯವನ್ನು ಅಹಮದಾಬಾದಿಗೆ ಸ್ಥಳಾಂತರಿಸಲಾಗಿದೆ ಎಂಬ ವಿಚಾರವಾಗಿ ಕೇಳಿದಾಗ, “ಬೇರೆ ಕಡೆ ಶೇ 50 ರಷ್ಟು ಮೀಸಲಿರುತ್ತದೆ" ಎಂದರು.

ಬಿಸಿಸಿಐ ಟಿಕೆಟ್ ವಿಚಾರಕ್ಕೆ ಸ್ಥಳಾಂತರ ನಿರ್ಧಾರ ಮಾಡಿದ್ದೇವೆ ಎಂದು ಹೇಳಿಕೆ ನೀಡಿರುವ ಬಗ್ಗೆ ಕೇಳಿದಾಗ, "ಅವರು ಈ ರೀತಿ ಹೇಳಿಕೆ ನೀಡಲಿ, ನಾನು ಅದಕ್ಕೆ ಸರಿಯಾದ ಉತ್ತರ ಕೊಡುತ್ತೇನೆ" ಎಂದರು.

ದಾವಣಗೆರೆಯಲ್ಲಿ ಮುಸ್ಲಿಂ ನಾಯಕರ ಅಮಾನತನ್ನು ವಾಪಸ್ ಪಡೆಯುವ ಸಾಧ್ಯತೆ ಇದೆಯೇ ಎಂದು ಕೇಳಿದಾಗ, "ನಾನು ಈ ಬಗ್ಗೆ ಏನೂ ಮಾತನಾಡುವುದಿಲ್ಲ. ಪಕ್ಷ ಈ ತೀರ್ಮಾನ ಮಾಡಿದೆ. ಸಿಎಂ ರಾಜಕೀ ಯ ಕಾರ್ಯದರ್ಶಿಯವರನ್ನು ಕೈಬಿಡಬೇಕಾದರೆ, ಆ ಬಗ್ಗೆ ಮುಖ್ಯಮಂತ್ರಿಯವರು ಮಾತನಾಡಿದ್ದರು. ಮುಖ್ಯಮಂತ್ರಿಗಳಿಗೆ ತಮ್ಮದೇ ಆದ ಮಾಹಿತಿ ಇರುತ್ತದೆ. ಪಕ್ಷದ ಪದಾಧಿಕಾರಿಗಳು ಮಾರ್ಗದರ್ಶನ ಮಾಡಿದ್ದಾರೆ. ಪಕ್ಷ ಅವರಿಗೆ ಕೆಲವು ಜವಾಬ್ದಾರಿಗಳನ್ನು ನೀಡಿತ್ತು. ಅದನ್ನು ಅವರು ಸರಿಯಾಗಿ ನಿಭಾಯಿಸಲಿಲ್ಲ ಅದಕ್ಕೆ ಅವರನ್ನು ಆ ಸ್ಥಾನದಿಂದ ಇಳಿಸಲಾಯಿತು. ಜಬ್ಬಾರ್ ಅವರು ತಾವಾಗಿಯೇ ರಾಜೀನಾಮೆ ನೀಡಿದ್ದರು. ಅದನ್ನು ಸ್ವೀಕಾರ ಮಾಡಿದ್ದೇವೆ ಅಷ್ಟೇ" ಎಂದರು.



ಸಿಎಂ, ಡಿಸಿಎಂ ದೆಹಲಿ ಭೇಟಿ ವಿಚಾರ ಕೇಳಿದಾಗ, "ಅವರು (ಹೈಕಮಾಂಡ್) ಕರೆದಾಗ ನಾವು ಹೋಗುತ್ತೇವೆ. ಕರೆಯದೇ ಹೋಗುವುದು ಸರಿಯಲ್ಲ. ಕರೆಯುತ್ತಾರೆ, ಕರೆದಾಗ ನಾವು ಹೋಗುತ್ತೇವೆ" ಎಂದರು.

ತಮಿಳುನಾಡಿನಲ್ಲಿ ಟಿವಿಕೆಗೆ ಕಾಂಗ್ರೆಸ್ ಬೆಂಬಲ ನೀಡಿರುವ ಬಗ್ಗೆ ಕೇಳಿದಾಗ, "ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಬೇಕು. ಜಾತ್ಯಾತೀತ ಶಕ್ತಿಗಳು ಒಂದಾಗಿ ಇರಬೇಕು ಎಂದು ಈ ತೀರ್ಮಾನ ಮಾಡಲಾಗಿದೆ. ಎಐಡಿಎಂಕೆ, ಬಿಜೆಪಿಯವರು ಎಷ್ಟೇ ಒತ್ತಡ ಹಾಕಿದರು ಟಿವಿಕೆಯವರು ಮೈತ್ರಿ ಮಾಡಿಕೊಳ್ಳಲಿಲ್ಲ. ಜಾತ್ಯಾತೀತ ಶಕ್ತಿ ಉಳಿಯಲು, ತಮಿಳುನಾಡಿನ ಹಿತಕ್ಕಾಗಿ ನಮ್ಮ ಪಕ್ಷ ತೀರ್ಮಾನ ಮಾಡಿದೆ" ಎಂದರು.

07/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 2026ನೇ ಹಣಕಾಸು ವರ್ಷದ ಹಣಕಾಸು ಫಲಿತಾಂಶ ಪ್ರಕಟ

ಬೆಂಗಳೂರು

ಭಾರತದ ಪ್ರಮುಖ ಇಂಟಿಗ್ರೇಟೆಡ್ ಸೋಲಾರ್ ಫೋಟೋವೋಲ್ಟಾಯಿಕ್ ಮಾಡ್ಯೂಲ್ ಮತ್ತು ಸೆಲ್ ತಯಾರಿಕಾ ಸಂಸ್ಥೆ ಎಮ್‌ವಿ ಫೋಟೋವೋಲ್ಟಾಯಿಕ್ ಪವರ್ ಲಿಮಿಟೆಡ್ 2026ನೇ ಹಣಕಾಸು ವರ್ಷದ ಹಣಕಾಸು ಫಲಿತಾಂಶಗಳನ್ನು ಪ್ರಕಟಿಸಿದ್ದು, ಕಂಪನಿಯ ಸಾಧನೆ ಗಮನಾರ್ಹ ಏರಿಕೆಯನ್ನು ದಾಖಲಿಸಿದೆ.

ಮಾರ್ಚ್ 31, 2026ಕ್ಕೆ ಕೊನೆಗೊಂಡ ಹಣಕಾಸು ವರ್ಷದಲ್ಲಿ ಕಂಪನಿಯ ಕಾರ್ಯಾಚರಣಾ ಆದಾಯ ರೂ.5,050 ಕೋಟಿಗೆ ಏರಿಕೆಯಾಗಿದ್ದು, ಇದು ಕಳೆದ ವರ್ಷದಿಗಿಂತ ಶೇ. 116ರಷ್ಟು ಬೆಳವಣಿಗೆಯನ್ನು ಸೂಚಿಸುತ್ತದೆ. ಇಬಿಐಟಿಡಿಎ ರೂ.1,734.4 ಕೋಟಿಗೆ ತಲುಪಿದ್ದು, ಶೇ. 140ರಷ್ಟು ಏರಿಕೆಯಾಗಿದೆ. ತೆರಿಗೆ ನಂತರದ ಲಾಭ ರೂ.1,081.6 ಕೋಟಿಗಳಾಗಿದ್ದು, ಶೇ. 193ರಷ್ಟು ಭರ್ಜರಿ ವೃದ್ಧಿಯನ್ನು ಕಂಡಿದೆ.

ಕಂಪನಿಯ ಇಬಿಐಟಿಡಿಎ ಮಾರ್ಜಿನ್ 2025ರಲ್ಲಿ ಶೇ. 31 ಇತ್ತಿದ್ದು, 2026ರಲ್ಲಿ ಶೇ. 34ಕ್ಕೆ ಸುಧಾರಿಸಿದೆ. ಇದೇ ವೇಳೆ, ತೆರಿಗೆ ನಂತರದ ಲಾಭದ ಮಾರ್ಜಿನ್ ಶೇ. 16ರಿಂದ ಶೇ. 21ಕ್ಕೆ ಏರಿಕೆಯಾಗಿದೆ. ಈ ಸಾಧನೆ ಕಂಪನಿಯ ಬಲವಾದ ಕಾರ್ಯಾಚರಣೆ, ದಕ್ಷತೆ ಹೆಚ್ಚಳ ಮತ್ತು ಸಾಲಮುಕ್ತ ಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ.

# ರಾಮನಗರಂ ನಿಲ್ದಾಣದಲ್ಲಿ ಒಡೆಯರ್ ಎಕ್ಸ್‌ಪ್ರೆಸ್ ಹೆಚ್ಚುವರಿ ನಿಲುಗಡೆಗೆ ಚಾಲನೆ

ಬೆಂಗಳೂರು/ರಾಮನಗರ

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ ಸೋಮಣ್ಣ ಅವರು ಕೆಎಸ್‌ಆರ್ ಬೆಂಗಳೂರು–ಮೈಸೂರು ಒಡೆಯರ್ ಎಕ್ಸ್‌ಪ್ರೆಸ್ ರೈಲಿಗೆ ರಾಮನಗರಂ ರೈಲು ನಿಲ್ದಾಣದಲ್ಲಿ ಹೆಚ್ಚುವರಿ ನಿಲುಗಡೆಗೆ ಹಸಿರು ನಿಶಾನೆ ನೀಡಿದರು. ರಾಮನಗರಂ ರೈಲು ನಿಲ್ದಾಣದಲ್ಲಿ ನಡೆದ ಸಮಾರಂಭದಲ್ಲಿ ರೈಲು ಸಂಖ್ಯೆ ಒಂದು ಎರಡು ಆರು ಒಂದು ನಾಲ್ಕು ಕೆಎಸ್‌ಆರ್ ಬೆಂಗಳೂರು–ಮೈಸೂರು ಒಡೆಯರ್ ಎಕ್ಸ್‌ಪ್ರೆಸ್‌ಗೆ ಅಧಿಕೃತ ಚಾಲನೆ ನೀಡಲಾಯಿತು.



ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಇಕ್ಬಾಲ್ ಹುಸೇನ್ ಅವರು ಈ ಹೆಚ್ಚುವರಿ ನಿಲುಗಡೆ ವ್ಯವಸ್ಥೆಗೆ ಸಚಿವರಿಗೆ ಧನ್ಯವಾದ ತಿಳಿಸಿ, ರಾಮನಗರ ಪ್ರದೇಶದ ಜನರ ಅಗತ್ಯಕ್ಕಾಗಿ ಎರಡುರಿಂದ ಮೂರು ಅಂಡರ್‌ಪಾಸ್‌ಗಳನ್ನು ನಿರ್ಮಿಸುವಂತೆ ಮನವಿ ಮಾಡಿದರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾಕ್ಟರ್ ಸಿ ಎನ್ ಮಂಜುನಾಥ್ ಅವರು, ಬೆಂಗಳೂರು–ಮೈಸೂರು ನಡುವಿನ ದಟ್ಟ ಸಂಚಾರದ ರೈಲು ಮಾರ್ಗದಲ್ಲಿ ರಾಮನಗರಂ ನಿಲ್ದಾಣಕ್ಕೆ ಸೂಪರ್‌ಫಾಸ್ಟ್ ರೈಲು ನಿಲುಗಡೆ ಒದಗಿಸಿರುವುದನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ವಿ ಸೋಮಣ್ಣ, ಈ ನಿಲುಗಡೆ ವ್ಯವಸ್ಥೆ ರಾಮನಗರ ಜನರ ಬಹುಕಾಲದ ಬೇಡಿಕೆಯನ್ನು ಈಡೇರಿಸಿದ್ದು, ಬೆಂಗಳೂರು ಮತ್ತು ಮೈಸೂರು ನಡುವಿನ ಸಂಪರ್ಕವನ್ನು ಮತ್ತಷ್ಟು ಸುಗಮಗೊಳಿಸುತ್ತದೆ. ಇದರಿಂದ ವ್ಯಾಪಾರ, ಪ್ರವಾಸೋದ್ಯಮ ಹಾಗೂ ಸ್ಥಳೀಯ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ಸಿಗಲಿದೆ ಎಂದು ಹೇಳಿದರು.

ರೈಲು ಸಂಖ್ಯೆ ಒಂದು ಎರಡು ಆರು ಒಂದು ಮೂರು ಮೈಸೂರುಕೆಎಸ್‌ಆರ್ ಬೆಂಗಳೂರು ಒಡೆಯರ್ ಎಕ್ಸ್‌ಪ್ರೆಸ್ ಮಧ್ಯಾಹ್ನ ಹನ್ನೆರಡು ಗಂಟೆ ನಾಲ್ವತ್ತೊಂದು ನಿಮಿಷಕ್ಕೆ ರಾಮನಗರಂ ನಿಲ್ದಾಣಕ್ಕೆ ಆಗಮಿಸಿ ಹನ್ನೆರಡು ಗಂಟೆ ನಾಲ್ವತ್ತೆರಡು ನಿಮಿಷಕ್ಕೆ ನಿರ್ಗಮಿಸುತ್ತದೆ. ಅದೇ ರೀತಿ ರೈಲು ಸಂಖ್ಯೆ ಒಂದು ಎರಡು ಆರು ಒಂದು ನಾಲ್ಕು ಕೆಎಸ್‌ಆರ್ ಬೆಂಗಳೂರುಮೈಸೂರು ಒಡೆಯರ್ ಎಕ್ಸ್‌ಪ್ರೆಸ್ ಸಂಜೆ ನಾಲ್ಕು ಗಂಟೆ ಒಂದು ನಿಮಿಷಕ್ಕೆ ಆಗಮಿಸಿ ನಾಲ್ಕು ಗಂಟೆ ಎರಡು ನಿಮಿಷಕ್ಕೆ ಹೊರಡುತ್ತದೆ.

ಈ ನಿಲುಗಡೆಯಿಂದ ವಿದ್ಯಾರ್ಥಿಗಳು, ವ್ಯಾಪಾರಿಗಳು ಮತ್ತು ಉದ್ಯಮಿಗಳಿಗೆ ಬೆಂಗಳೂರು ಹಾಗೂ ಮೈಸೂರು ನಗರಗಳಿಗೆ ಸುಲಭವಾಗಿ ಪ್ರಯಾಣಿಸುವ ಅವಕಾಶ ದೊರೆಯುವುದಲ್ಲದೆ, ಶಿಕ್ಷಣ, ಆರೋಗ್ಯ ಮತ್ತು ಇತರೆ ಅಗತ್ಯ ಸೇವೆಗಳಿಗೂ ಹೆಚ್ಚಿನ ಅನುಕೂಲ ಸಿಗಲಿದೆ.

ಈ ಕಾರ್ಯಕ್ರಮದಲ್ಲಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ, ಸಂಸದ ಡಾಕ್ಟರ್ ಸಿ ಎನ್ ಮಂಜುನಾಥ್, ಶಾಸಕ ಇಕ್ಬಾಲ್ ಹುಸೇನ್, ನಗರಸಭೆ ಅಧ್ಯಕ್ಷ ಕೆ ಶೇಷಾದ್ರಿ, ಜಿಲ್ಲಾಧಿಕಾರಿ ಯಶವಂತ ಬಿ ಗುರುಕರ್ ಹಾಗೂ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮುಂದಿನ ದಿನಗಳಲ್ಲಿ ಬಿಜೆಪಿ–ಜೆಡಿಎಸ್‌ಗೆ ಅಧಿಕಾರ ನೀಡಿ: ಎಚ್‌ಡಿಕೆ

ತುಮಕೂರು

ರಾಜ್ಯದ ಈಗಿನ ಸರ್ಕಾರದ ಆಡಳಿತಕ್ಕೆ ಜನ ಬೇಸತ್ತಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ಜನಪರವಾದ, ಜನರಿಗೆ ಗೌರವ ತರುವಂತಹ ಸರ್ಕಾರ ತರಲು ರಾಜ್ಯದ ಜನರು ಆಶೀರ್ವಾದ ಮಾಡಬೇಕು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮನವಿ ಮಾಡಿದರು.

ತುಮಕೂರು ತಾಲೂಕು ಮುಳಕುಂಟೆ ಗ್ರಾಮದಲ್ಲಿ ಮಂಗಳವಾರ ನಡೆದ ವಿಜಯ ಚೌಡೇಶ್ವರಿ ದೇವಿ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ ಕೇಂದ್ರ ಸಚಿವ ಕುಮಾರಸ್ವಾಮಿ, ದೇವಸ್ಥಾನದಲ್ಲಿ ದೇವಿಯ ದರ್ಶನ ಮಾಡಿ ಪೂಜೆ ಸಲ್ಲಿಸಿ, ನಂತರ ನಡೆದ ಸಮಾರಂಭದಲ್ಲಿ ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಎನ್‌ಡಿಎ ಮೈತ್ರಿ ಕೂಟ ಈ ಬಾರಿಯ ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದೆ. ಈ ಗೆಲುವು ದೇಶದ ಮುಂದಿನ ಚುನಾವಣೆಗಳಿಗೆ ದಿಕ್ಸೂಚಿಯಾಗಿದೆ. ಈ ಸಂಬಂಧ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸಲು ತುರ್ತಾಗಿ ದೆಹಲಿಗೆ ಹೋಗಬೇಕಾಗಿದೆ ಎಂದರು.



ಕಳೆದ ಲೋಕಸಭಾ ಚುನಾವಣೆಯಲ್ಲಿ ತುಮಕೂರು ಕ್ಷೇತ್ರದಿಂದ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಅಭ್ಯರ್ಥಿಯಾದ ವಿ. ಸೋಮಣ್ಣ ಅವರನ್ನು ನೀವೆಲ್ಲಾ ದಾಖಲೆ ಮತಗಳ ಅಂತರದಿಂದ ಗೆಲ್ಲಿಸಿದ ಪರಿಣಾಮ ಅವರು ಹಾಗೂ ತಾವು ಕೇಂದ್ರ ಮಂತ್ರಿಯಾಗಲು ಅವಕಾಶವಾಯಿತು. ಮುಂಬರುವ ಚುನಾವಣೆಗಳಲ್ಲೂ ಇದೇ ರೀತಿಯಲ್ಲಿ ಆಶೀರ್ವಾದ ಮಾಡಬೇಕು ಎಂದು ಮನವಿ ಮಾಡಿದರು.

ರಾಜ್ಯದಲ್ಲಿರುವ ಸರ್ಕಾರದ ಆಡಳಿತದಿಂದ ಜನ ಬೇಸತ್ತಿದ್ದಾರೆ, ಬದಲಾವಣೆ ಬಯಸಿದ್ದಾರೆ. ಜನಪರವಾದ, ಜನರ ಸಮಸ್ಯೆಗಳಿಗೆ ಸ್ಪಂದಿಸುವ ಸರ್ಕಾರ ಅಸ್ತಿತ್ವಕ್ಕೆ ಬರಬೇಕು.'

ಮುಂದಿನ ಚುನಾವಣೆಯಲ್ಲಿ ಜನರಿಗೆ ಗೌರವ ತರುವಂತಹ ಜೆಡಿಎಸ್–ಬಿಜೆಪಿಯ ಮೈತ್ರಿ ಸರ್ಕಾರವನ್ನು ಅಧಿಕಾರಕ್ಕೆ ತರಬೇಕು ಎಂದು ವಿನಂತಿಸಿದರು.

# ತುಮಕೂರು ರಸ್ತೆ ಫ್ಲೈಓವರ್ ಬಂದ್

ಬೆಂಗಳೂರು

ಬರೋಬ್ಬರಿ 22 ಜಿಲ್ಲೆಗಳ ಸಂಚಾರ ರಹದಾರಿ ಪೀಣ್ಯ ಫ್ಲೈಓವರ್ ಇಂದಿನಿಂದ (ಮೇ 5) 3 ದಿನಗಳ ಕಾಲ ಬಂದ್ ಆಗಿರಲಿದೆ. ಕೇಬಲ್ ಅಳವಡಿಕೆ ಮತ್ತು ಲೋಡ್ ಟೆಸ್ಟಿಂಗ್‌ಗಾಗಿ ಎನ್‌ಹೆಚ್‌ಐನಿಂದ ದುರಸ್ಥಿ ಕಾರ್ಯ ನಡೆಯುತ್ತಿದ್ದು, ಈ ಹಿನ್ನೆಲೆ ಸಂಚಾರಿ ಪೊಲೀಸರು ಇಂದಿನಿಂದ ಫ್ಲೈಓವರ್ ಕ್ಲೋಸ್ ಮಾಡಿದ್ದಾರೆ. ಫ್ಲೈಓವರ್ ಬಂದ್‌ನಿಂದಾಗಿ ಮುಂದಿನ ಮೂರು ದಿನ ತುಮಕೂರು ರಸ್ತೆಯ ಸವಾರರಿಗೆ ಭಾರೀ ಟ್ರಾಫಿಕ್ ಬಿಸಿ ತಟ್ಟಲಿದೆ.

ಸದ್ಯ ಫ್ಲೈಓವರ್ ಮೇಲೆ ಎಲ್ಲಾ ಬಗೆಯ ವಾಹನಗಳ ಓಡಾಟ ಬಂದ್ ಆಗಿದ್ದು, ಮೇ 8ರಂದು ಬೆಳಿಗ್ಗೆ 11 ಗಂಟೆ ಬಳಿಕ ಫ್ಲೈಓವರ್ ವಾಹನ ಸಂಚಾರಕ್ಕೆ ಮುಕ್ತವಾಗಲಿದೆ.

# ‘2028ಕ್ಕೆ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವ ವಿಶ್ವಾಸ ಇದೆ’

ದಾವಣಗೆರೆ

ಬಿಜೆಪಿಯ ಗತವೈಭವದ ದಿನಗಳು ದಾವಣಗೆರೆಯಲ್ಲಿ ಮರುಕಳಿಸಲಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸೋಲಿನ ಪರಾಮರ್ಶೆ ಹಾಗೂ ಆತ್ಮಸ್ಥೈರ್ಯ ತುಂಬುವ ನಿಟ್ಟಿನಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಮನೆಗೆ ಭೇಟಿ ನೀಡಿದ ವಿಜಯೇಂದ್ರ ಅವರು, ಜಿಲ್ಲಾ ಬಿಜೆಪಿ ನಾಯಕರ ಜೊತೆ ದಾವಣಗೆರೆಯಲ್ಲಿ ಪಕ್ಷ ಸಂಘಟನೆ ಚರ್ಚೆ ನಡೆಸಿದರು.

63000 ಮತ ನೀಡಿದ ಮತದಾರರಿಗೆ ಹಾಗೂ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸಿದರು. ವಿಜಯೇಂದ್ರರನ್ನು ಬಿಜೆಪಿ ಕಾರ್ಯಕರ್ತರು ಆತ್ಮೀಯವಾಗಿ ಸ್ವಾಗತಿಸಿದರು. ವಿಜಯೇಂದ್ರರ ಜೊತೆ ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಸೇರಿದಂತೆ ಹಲವು ನಾಯಕರು ಆಗಮಿಸಿದ್ದರು.



ಸಾಮಾನ್ಯ ಕಾರ್ಯಕರ್ತ ಇಷ್ಟೊಂದು ಮತ ಪಡೆದಿರುವುದು ಸುಲಭ ಅಲ್ಲ. ಆಗುವುದೆಲ್ಲ ಒಳ್ಳೆಯದಕ್ಕೆ ಎಂದು ಆತ್ಮವಿಶ್ವಾಸ ತುಂಬಿದರು. ವಿಜಯೇಂದ್ರರು ಸಮಾಧಾನ ಪಡಿಸುವ ವೇಳೆ ಶ್ರೀನಿವಾಸ್ ದಾಸಕರಿಯಪ್ಪ ಭಾವುಕರಾದರು. ಅವರನ್ನು ರಾಜ್ಯಾಧ್ಯಕ್ಷರು ಸಮಾಧಾನಪಡಿಸಿದರು.

ಶ್ರೀನಿವಾಸ್ ಅವರ ಮನೆಯಲ್ಲಿ ವಿಜಯೇಂದ್ರರು ದೋಸೆ ಸವಿದರು. ಉಪಚುನಾವಣೆಯ ಫಲಿತಾಂಶ ನಮ್ಮ ಕಣ್ಣ ಮುಂದೆ ಇದೆ. ಸಾಕಷ್ಟು ನಿರೀಕ್ಷೆಗಳನ್ನು ನಾವು ಇಟ್ಟುಕೊಂಡಿದ್ದೆವು. ಉಪಚುನಾವಣೆ ಎಂದರೆ ಅಡಳಿತ ಪಕ್ಷದ ಪರವಾಗಿ ಇರುತ್ತದೆ. ಸಿಎಂ ಹಾಗೂ ಸಚಿವರು ಬಾಗಲಕೋಟೆ ಯಲ್ಲಿ 15 ದಿನ ಅಲ್ಲೇ ಇದ್ದರು. ನಮ್ಮ ಪಕ್ಷ ಅಧಿಕಾರದಲ್ಲಿ ಇದ್ದಾಗಲೂ ಅದೇ ಆಗಿದೆ ಎಂದು ನುಡಿದರು. ಎರಡು ಕ್ಷೇತ್ರದ ಕಾರ್ಯಕರ್ತರು ಬಿಜೆಪಿ ಗೆಲ್ಲಿಸಲು ಶ್ರಮ ವಹಿಸಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

ದಾವಣಗೆರೆ ದಕ್ಷಿಣದ ನಮ್ಮ ಅಭ್ಯರ್ಥಿ ಉತ್ತಮವಾದ ಮತಗಳನ್ನು ಪಡೆದಿದ್ದಾರೆ. ನಾವು 70 ಸಾವಿರಕ್ಕೂ ಹೆಚ್ಚು ಮತಗಳು ಬೀಳುತ್ತವೆ ಎನ್ನುವ ನಿರೀಕ್ಷೆ ಇಟ್ಟುಕೊಂಡಿದ್ದೆವು. ನಮಗೆ ಈ ಬಾರಿ ಅದೃಷ್ಟ ಕೈ ಹಿಡಿಯಲಿಲ್ಲ. ಆದರೆ ಕಾಂಗ್ರೆಸ್ ಹಣದ ಹೊಳೆ ಹರಿಸಿದ ಬಗ್ಗೆ ನಾನೇನು ಮಾತಾಡೋದಿಲ್ಲ. ಅಭ್ಯರ್ಥಿ ಜೊತೆ ಅಕಾಂಕ್ಷಿಗಳು ಕೂಡ ಉತ್ತಮ ಕೆಲಸ ಮಾಡಿದ್ದಾರೆ ಎಂದು ನುಡಿದರು.

ಯಡಿಯೂರಪ್ಪ ನವರು ಇಂತಹ ಸಾಕಷ್ಟು ಸಮಸ್ಯೆಗಳನ್ನು ದಿಟ್ಟತನದಿಂದ ಎದುರಿಸಿದ್ದಾರೆ. ಅಂತವರ ಮಗನಾಗಿ ಅದೇ ದಿಟ್ಟತನವನ್ನು ಪ್ರದರ್ಶನ ಮಾಡುತ್ತೇನೆ. ಮತ್ತೆ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮ ವಹಿಸುತ್ತೇವೆ.

ಉಪಚುನಾವಣೆಯಲ್ಲಿ ನಮ್ಮ ನಾಯಕರು ಕೂಡ ಉತ್ತಮ ಶ್ರಮವಹಿಸಿದ್ದಾರೆ. ಈ ಗೃಹಲಕ್ಷ್ಮಿ ಚುನಾವಣಾ ಲಕ್ಷ್ಮೀಯಾಗಿದ್ದಾಳೆ. ನಾಲ್ಕೈದು ತಿಂಗಳ ಕಂತು ಉಪಚುನಾವಣೆ ಸಂದರ್ಭದಲ್ಲಿ ಬಿಡುಗಡೆ ಮಾಡುತ್ತಾರೆ. ಈಗ ಮುಂದೆ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣಾ ಸಂದರ್ಭದಲ್ಲಿ ಬಿಡುಗಡೆ ಮಾಡುತ್ತಾರೆ. ಕಾಂಗ್ರೆಸ್ ನವರು ಅಧಿಕಾರದಲ್ಲಿ ಇದ್ದಾರೆ. ನಾವೇನು ಮಾಡೋಕೆ ಅಗೋಲ್ಲ ಎಂದು ತಿಳಿಸಿದರು.

# ವನ್ಯಜೀವಿ ಸಂರಕ್ಷಣೆ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ

ಬೆಂಗಳೂರು

ಅಂತಾರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಪಡೆದಿರುವ ಸಂಶೋಧಕ ಕಾರಂತ್ ಅವರು ವನ್ಯಜೀವಿ ಸಂರಕ್ಷಣೆ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿ ಜಾಗತಿಕ ಮನ್ನಣೆ ಗಳಿಸಿದ್ದಾರೆ. ಅವರು 2019ರಲ್ಲಿ ರೋಲೆಕ್ಸ್ ಪ್ರಶಸ್ತಿ, 2025ರಲ್ಲಿ ಮೆಕ್‌ನಲ್ಟಿ ಪ್ರಶಸ್ತಿ ಹಾಗೂ 2026ರಲ್ಲಿ ಎಸ್ಮಂಡ್ ಬಿ ಮಾರ್ಟಿನ್ ರಾಯಲ್ ಜಿಯಾಗ್ರಫಿಕಲ್ ಸೊಸೈಟಿ ಪ್ರಶಸ್ತಿಗಳನ್ನು ಪಡೆದು ತಮ್ಮ ಸಾಧನೆಯನ್ನು ಮತ್ತಷ್ಟು ಉನ್ನತಿಗೇರಿಸಿದ್ದಾರೆ.

“ನ್ಯಾಷನಲ್ ಜಿಯಾಗ್ರಫಿಕ್ ಸೊಸೈಟಿ ಮತ್ತು ರೋಲೆಕ್ಸ್ ವತಿಯಿಂದ ‘ವರ್ಷದ ಪರಿಶೋಧಕ’ ಎಂದು ಹೆಸರಿಸಲ್ಪಟ್ಟಿರುವುದು ಮಹತ್ವದ ಮೈಲಿಗಲ್ಲು” ಎಂದು ಕಾರಂತ್ ಅವರು ತಿಳಿಸಿದ್ದಾರೆ. ವನ್ಯಜೀವಿ ಅಧ್ಯಯನ ಕೇಂದ್ರದ ಮೂಲಕ ವನ್ಯಜೀವಿಗಳು ಮತ್ತು ಮಾನವರ ಯೋಗಕ್ಷೇಮಕ್ಕಾಗಿ ತಮ್ಮ ತಂಡ ನಿರಂತರವಾಗಿ ಶ್ರಮಿಸುತ್ತಿದ್ದು, ವಿಜ್ಞಾನ ಆಧಾರಿತ ಸಂರಕ್ಷಣಾ ಕ್ರಮಗಳಿಗೆ ಬದ್ಧವಾಗಿದೆ ಎಂದು ಅವರು ಹೇಳಿದ್ದಾರೆ. ಈ ಮನ್ನಣೆ ನವೀನ ಮತ್ತು ಪರಿಣಾಮಕಾರಿ ಸಂರಕ್ಷಣಾ ಕಾರ್ಯಕ್ರಮಗಳನ್ನು ಜಾಗತಿಕ ಮಟ್ಟದಲ್ಲಿ ವಿಸ್ತರಿಸಲು ಅವಕಾಶ ಒದಗಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.




2026ರ ರೋಲೆಕ್ಸ್ ನ್ಯಾಷನಲ್ ಜಿಯಾಗ್ರಫಿಕ್ ‘ಎಕ್ಸ್‌ಪ್ಲೋರರ್ ಆಫ್ ದಿ ಇಯರ್’ ಗೌರವಕ್ಕೆ ಪಾತ್ರರಾಗಿರುವ ಕಾರಂತ್ ಅವರು, ಭವಿಷ್ಯವನ್ನು ರೂಪಿಸುವ ವಿಜ್ಞಾನಿಗಳು, ಶಿಕ್ಷಣತಜ್ಞರು ಮತ್ತು ಕಥೆಗಾರರ ಶ್ರೇಷ್ಠ ಪರಂಪರೆಯಲ್ಲಿ ಸ್ಥಾನ ಪಡೆದಿದ್ದಾರೆ.

ನ್ಯಾಷನಲ್ ಜಿಯಾಗ್ರಫಿಕ್ ಸೊಸೈಟಿ ಜಾಗತಿಕ ಲಾಭರಹಿತ ಸಂಸ್ಥೆಯಾಗಿದ್ದು, ವಿಜ್ಞಾನ, ಪರಿಶೋಧನೆ, ಶಿಕ್ಷಣ ಮತ್ತು ಕಥೆ ಹೇಳುವಿಕೆಯ ಮೂಲಕ ಪ್ರಪಂಚದ ಅದ್ಭುತಗಳನ್ನು ಬೆಳಗಿಸಿ ಸಂರಕ್ಷಿಸುವ ಕಾರ್ಯದಲ್ಲಿ ತೊಡಗಿದೆ.

1888ರಿಂದಲೇ ಪರಿಶೋಧನೆಯ ಗಡಿಗಳನ್ನು ವಿಸ್ತರಿಸುತ್ತಿರುವ ಈ ಸಂಸ್ಥೆ, ಏಳು ಖಂಡಗಳಾದ್ಯಂತ 15,000ಕ್ಕೂ ಹೆಚ್ಚು ಅನುದಾನಗಳನ್ನು ನೀಡಿದ್ದು, ಪ್ರತಿವರ್ಷ ಸುಮಾರು 3 ಮಿಲಿಯನ್ ವಿದ್ಯಾರ್ಥಿಗಳನ್ನು ಶಿಕ್ಷಣ ಕಾರ್ಯಕ್ರಮಗಳ ಮೂಲಕ ತಲುಪುತ್ತಿದೆ.

# 1,455.14 ಕೋಟಿ ರೂ. ನಿವ್ವಳ ಲಾಭ

ಬೆಂಗಳೂರು

ಸೌತ್ ಇಂಡಿಯನ್ ಬ್ಯಾಂಕ್ 2025–26ನೇ ಹಣಕಾಸು ವರ್ಷದಲ್ಲಿ ದಾಖಲೆ ಸಾಧನೆ ಮಾಡಿದ್ದು, ಬ್ಯಾಂಕಿನ ಇತಿಹಾಸದಲ್ಲೇ ಅತ್ಯಧಿಕವಾದ ರೂ.1,455.14 ಕೋಟಿ ನಿವ್ವಳ ಲಾಭ ಗಳಿಸಿರುವುದಾಗಿ ಪ್ರಕಟಿಸಿದೆ. ಕಳೆದ ಹಣಕಾಸು ವರ್ಷದಲ್ಲಿ ದಾಖಲಾದ ರೂ.1,302.88 ಕೋಟಿಗೆ ಹೋಲಿಸಿದರೆ ಲಾಭದಲ್ಲಿ ಶೇ. 11.69ರಷ್ಟು ಏರಿಕೆ ಕಂಡಿದೆ. ಈ ಹಿನ್ನೆಲೆಯಲ್ಲಿ ಬ್ಯಾಂಕಿನ ಆಡಳಿತ ಮಂಡಳಿಯು ಷೇರುದಾರರಿಗೆ ಶೇ. 45ರಷ್ಟು ಲಾಭಾಂಶ ಘೋಷಣೆ ಮಾಡಲು ಶಿಫಾರಸು ಮಾಡಿದೆ.

2025–26ನೇ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕದಲ್ಲೂ ಬ್ಯಾಂಕ್ ಉತ್ತಮ ಪ್ರದರ್ಶನ ನೀಡಿದ್ದು, ನಿವ್ವಳ ಲಾಭವು ಶೇ. 19ರಷ್ಟು ಏರಿಕೆಯಾಗಿ ರೂ.408 ಕೋಟಿಗೆ ತಲುಪಿದೆ. ಬ್ಯಾಂಕ್ ತನ್ನ ಇತಿಹಾಸದಲ್ಲೇ ಗರಿಷ್ಠವಾದ ರೂ.2,23,620 ಕೋಟಿಗಳ ಒಟ್ಟು ವ್ಯವಹಾರ ಹಾಗೂ ರೂ.2,373 ಕೋಟಿಗಳ ಕಾರ್ಯಾಚರಣೆ ಲಾಭವನ್ನು ದಾಖಲಿಸಿ ಹೊಸ ಮೈಲಿಗಲ್ಲು ಸಾಧಿಸಿದೆ. ಬಡ್ಡಿಯೇತರ ಆದಾಯವು ರೂ.2,009 ಕೋಟಿಗೆ ಏರಿಕೆಯಾಗಿದೆ.

ವಸೂಲಾಗದ ಸಾಲಗಳ ಪ್ರಮಾಣದಲ್ಲೂ ಗಣನೀಯ ಇಳಿಕೆ ಕಂಡುಬಂದಿದ್ದು, ಒಟ್ಟು ಎನ್‌ಪಿಎ ಶೇ. 3.20ರಿಂದ ಶೇ. 1.43ಕ್ಕೆ ಇಳಿದಿದೆ. ನಿವ್ವಳ ಎನ್‌ಪಿಎ ಶೇ. 0.92ರಿಂದ ಶೇ. 0.29ಕ್ಕೆ ಕುಸಿದಿದೆ. ರಿಟೇಲ್ ಠೇವಣಿಗಳು ಶೇ. 14.67ರಷ್ಟು ಏರಿಕೆಯಾಗಿದ್ದು ರೂ.1,20,116 ಕೋಟಿಗೆ ತಲುಪಿದೆ. ಎನ್‌ಆರ್‌ಐ ಠೇವಣಿಗಳಲ್ಲಿ ಶೇ. 11.92ರಷ್ಟು ಬೆಳವಣಿಗೆ ಕಂಡಿದೆ. ಬ್ಯಾಂಕಿನ ಚಿನ್ನದ ಸಾಲ ಪೋರ್ಟ್‌ಫೋಲಿಯೋ ಶೇ. 45.62ರಷ್ಟು ಏರಿಕೆಯಾಗಿ ರೂ.24,729 ಕೋಟಿಗೆ ತಲುಪಿದೆ. ವಾಹನ ಸಾಲದಲ್ಲಿ ಶೇ. 21.39 ಹಾಗೂ ಗೃಹ ಅಡಮಾನ ಸಾಲದಲ್ಲಿ ಶೇ. 42.50ರಷ್ಟು ವೃದ್ಧಿಯಾಗಿದೆ.

# ‘ಮುಂಗಾರು ಎದುರಿಸಲು ಪೂರ್ವಸಿದ್ಧತೆ ಅಗತ್ಯ’



ಬೆಂಗಳೂರು

ಮುಂಬರುವ ಮಳೆಗಾಲದಲ್ಲಿ ಸಂಭವಿಸ ಬಹುದಾದ ಅವಘಡಗಳನ್ನು ತಡೆಯುವ ನಿಟ್ಟಿನಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಪೂರ್ವಸಿದ್ಧತೆ, ಸಮರ್ಪಕ ಯೋಜನೆ ಹಾಗೂ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ.ರಾಜೇಂದ್ರ.ಕೆ.ವಿ ಸೂಚನೆ ನೀಡಿದರು.

ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಳೆಗಾಲ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪೂರ್ವ ಮುಂಗಾರು ಈಗಾಗಲೇ ಪ್ರಾರಂಭಗೊಂಡಿದ್ದು, ಶೀಘ್ರದಲ್ಲೇ ಮುಂಗಾರು ಮಳೆಗಾಲ ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ನೂರ ಹನ್ನೆರಡು ವಾರ್ಡ್‌ಗಳಲ್ಲಿ ಯಾವುದೇ ಅವಘಡಗಳು ಸಂಭವಿಸದಂತೆ ತಂಡಗಳು ಸಕ್ರಿಯವಾಗಿ ಕೆಲಸ ಮಾಡಬೇಕು. ನಿರ್ಲಕ್ಷ್ಯ ತೋರಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರಮುಖ ರಸ್ತೆಗಳಾದ ಆರ್ಟೀರಿಯಲ್, ಸಬ್ ಆರ್ಟೀರಿಯಲ್ ಹಾಗೂ ಹೆಚ್ಚು ಸಂಚಾರವಿರುವ ಮಾರ್ಗಗಳ ಬದಿ ಚರಂಡಿಗಳು ಮತ್ತು ಶೋಲ್ಡರ್ ಡ್ರೇನ್‌ಗಳಲ್ಲಿ ಹೂಳೆತ್ತುವ ಕಾರ್ಯ ಕೈಗೊಂಡು, ನೀರು ಸರಾಗವಾಗಿ ಹರಿಯುವಂತೆ ಸ್ವಚ್ಛತೆ ಕಾಪಾಡಬೇಕು. ಈ ಸಂಬಂಧ ಸ್ಥಳ ಪರಿಶೀಲನೆ ನಡೆಸಿ, ಕಾರ್ಯ ಸಮರ್ಪಕವಾಗಿ ನಡೆಯುತ್ತಿರುವುದನ್ನು ಖಚಿತಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳು, ಕಾಂಪೌಂಡ್ ಗೋಡೆಗಳು, ಶೆಲ್ಟರ್ ಪಾಯಿಂಟ್‌ಗಳು, ಮ್ಯಾನ್‌ಹೋಲ್‌ಗಳು ಹಾಗೂ ಬೀಳುವ ಅಪಾಯ ಇರುವ ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ತೆರವುಗೊಳಿಸುವ ಕಾರ್ಯವನ್ನು ವೇಗಗೊಳಿಸಬೇಕು. ಅಪಾಯಕಾರಿ ಕಟ್ಟಡಗಳನ್ನು ಗುರುತಿಸಿ, ಅವುಗಳನ್ನು ತೆರವುಗೊಳಿಸಲು ನೋಟಿಸ್ ನೀಡುವಂತೆ ಸೂಚಿಸಿದರು.

ಸಭೆಯಲ್ಲಿ ಮಳೆಗಾಲದ ಸಮಯದಲ್ಲಿ ಧರೆಗುರುಳಿದ ಮರಗಳನ್ನು ತೆರವುಗೊಳಿಸಲು ಅಗತ್ಯ ಸಲಕರಣೆಗಳನ್ನು ಸಿದ್ಧವಾಗಿರಿಸುವುದು, ರಾಜಕಾಲುವೆಗಳಲ್ಲಿ ಹೂಳೆತ್ತುವುದು, ರಸ್ತೆ ಗುಂಡಿಗಳನ್ನು ಮುಚ್ಚುವುದು, ಅನಧಿಕೃತ ಕೇಬಲ್‌ಗಳನ್ನು ತೆರವುಗೊಳಿಸುವುದು ಹಾಗೂ ಅಂಡರ್‌ಪಾಸ್‌ಗಳಲ್ಲಿ ನೀರು ನಿಲ್ಲದಂತೆ ಕ್ರಮ ಕೈಗೊಳ್ಳುವುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚಿಸಿ ನಿರ್ದೇಶನ ನೀಡಲಾಯಿತು.

ಸಭೆಯಲ್ಲಿ ಜಂಟಿ ಆಯುಕ್ತ ಸಂಗಪ್ಪ, ಉಪ ಆಯುಕ್ತರಾದ ಶಂಕರೆಪ್ಪ ವಣಿಕ್ಯಾಳ್ ಹಾಗೂ ಮಂಜುನಾಥ್ ಸ್ವಾಮಿ, ಮುಖ್ಯ ಅಭಿಯಂತರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ‘ನಿಮ್ಮ ವೈದ್ಯರ ಬಗ್ಗೆ ತಿಳಿಯಿರಿ’ ಕಾರ್ಯಕ್ರಮ



ಮೈಸೂರು

ಮೈಸೂರಿನ ಮಣಿಪಾಲ್ ಆಸ್ಪತ್ರೆಯು ‘ಮಣಿಪಾಲ್ ಹೆಲ್ತ್ ಸಮಿತ್’ನ ಭಾಗವಾಗಿ, ವಿಶ್ವ ಲಿವರ್ ದಿನದ ಅಂಗವಾಗಿ ‘ನಿಮ್ಮ ವೈದ್ಯರ ಬಗ್ಗೆ ತಿಳಿಯಿರಿ’ ಎಂಬ ಕಾರ್ಯಕ್ರಮವನ್ನು ಆಯೋಜಿಸಿತ್ತು. ವೈದ್ಯಕೀಯ ಜ್ಞಾನವನ್ನು ಜನಸಾಮಾನ್ಯರಿಗೆ ಸರಳವಾಗಿ ವಿವರಿಸುವ ಮೂಲಕ, ರೋಗಿಗಳಿಗೆ ಉಪಯುಕ್ತ ಮಾಹಿತಿ ನೀಡಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಇದು ಸಾರ್ವಜನಿಕರು ತಜ್ಞ ವೈದ್ಯರನ್ನು ನೇರವಾಗಿ ಭೇಟಿ ಮಾಡಿ, ಯಾವುದೇ ಹಿಂಜರಿಕೆಯಿಲ್ಲದೆ ಪ್ರಶ್ನೆಗಳನ್ನು ಕೇಳಿ, ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬಹುದಾದ ಸ್ಪಷ್ಟ ಮಾಹಿತಿಯನ್ನು ಪಡೆಯಲು ಈ ಕಾರ್ಯಕ್ರಮ ಉತ್ತಮ ಅವಕಾಶ ಕಲ್ಪಿಸಿಕೊಟ್ಟಿತು. ಒಟ್ಟು 125 ಮಂದಿ ಸಾರ್ವಜನಿಕರು ಈ ಸಭೆಯಲ್ಲಿ ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಡಾ. ಸತೀಶ್ ರಾವ್ ಎ.ಕೆ., ಸೀನಿಯರ್ ಕನ್ಸಲ್ಟೆಂಟ್ – ಮೆಡಿಕಲ್ ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ, ಡಾ. ವಾಸುದೇವ್ ಪೈ ಹೊಸದುರ್ಗ, ಸೀನಿಯರ್ ಕನ್ಸಲ್ಟೆಂಟ್ – ಸರ್ಜಿಕಲ್ ಗ್ಯಾಸ್ಟ್ರೋಎಂಟರಾಲಜಿ, ಗ್ಯಾಸ್ಟ್ರೋಇಂಟೆಸ್ಟೈನಲ್ ಆಂಕೋಸರ್ಜನ್ ಮತ್ತು ಹೆಚ್.ಪಿ.ಬಿ ಸರ್ಜನ್, ಡಾ. ನಿಶ್ಚಯ್ ಆರ್. ಕನ್ಸಲ್ಟೆಂಟ್ – ಮೆಡಿಕಲ್ ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ಹಾಗೂ ಮೈಸೂರಿನ ಮಣಿಪಾಲ್ ಆಸ್ಪತ್ರೆಯ ನಿರ್ದೇಶಕರಾದ ಸಂದೀಪ್ ಪಟೇಲ್ ಬಿ. ಜೆ. ಅವರು ಭಾಗವಹಿಸಿದ್ದರು.

# ಭಾರತದಲ್ಲಿ ವಾಚ್-3 ಪ್ರೊ ಬಿಡುಗಡೆ

ನವದೆಹಲಿ

ಭಾರತದಲ್ಲಿ ಪ್ರಧಾನ ಕಚೇರಿ ಹೊಂದಿರುವ ಗ್ರಾಹಕ ತಂತ್ರಜ್ಞಾನ ಬ್ರಾಂಡ್ ಆಗಿರುವ ಸಿಎಂಎಫ್, ಇಂದು ತನ್ನ ಅತ್ಯಂತ ಬುದ್ಧಿವಂತ ಸ್ಮಾರ್ಟ್ ವಾಚ್ ಸಿಎಂಎಫ್ ವಾಚ್ 3 ಪ್ರೊ ಅನ್ನು ಭಾರತದಲ್ಲಿ ಬಿಡುಗಡೆ ಮಾಡಿದೆ.

ದೈನಂದಿನ ಬಳಕೆದಾರರು ಮತ್ತು ಫಿಟ್ ನೆಸ್ ಆಸಕ್ತರಿಗಾಗಿ ವಿನ್ಯಾಸಗೊಳಿಸಲಾದ ಈ ವಾಚ್ ಪ್ರೊ 3 ಸ್ಮಾರ್ಟ್ ವಾಚ್, ನಿಖರವಾದ ಹೆಲ್ತ್ ಟ್ರ್ಯಾಕಿಂಗ್, ಎಐ ಚಾಲಿತ ಕೋಚಿಂಗ್ ಮತ್ತು ಆಕರ್ಷಕ ವಿನ್ಯಾಸವನ್ನು ಒಳಗೊಂಡಿದೆ. ವಾಚ್ 3 ಪ್ರೊ 1.43 ಇಂಚಿನ ಪ್ರಕಾಶಮಾನವಾದ ಅಮೋಲ್ಡ್ ಡಿಸ್‌ಪ್ಲೇ ಹೊಂದಿದ್ದು, ಸುಂದರವಾದ ಹಾಗೂ ಬಾಳಿಕೆ ಬರುವ ಮೆಟಲ್ ಬಾಡಿಯನ್ನು ಹೊಂದಿದೆ.




ಈ ಸಾಧನವು ವೇಗವಾದ ಮತ್ತು ಹೆಚ್ಚು ನಿಖರವಾದ ಟ್ರ್ಯಾಕಿಂಗ್ ಸೌಲಭ್ಯ ಒದಗಿಸಲು ಡ್ಯುಯಲ್– ಬ್ಯಾಂಡ್ ಮಲ್ಟಿ– ಸಿಸ್ಟಮ್ ಜಿಪಿಎಸ್ ಅನ್ನು ಹೊಂದಿದೆ.

ಇದರೊಂದಿಗೆ, ವೈಯಕ್ತಿಕ ಫಿಟ್ ನೆಸ್ ಮಟ್ಟಕ್ಕೆ ತಕ್ಕಂತೆ ಹೊಂದಿಕೊಳ್ಳುವ ಎಐ ಚಾಲಿತ ರನ್ನಿಂಗ್ ಕೋಚ್ ಸೌಲಭ್ಯವನ್ನೂ ನೀಡಲಾಗಿದೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

07/05/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER



# ‘ಪ್ರತಿ ಮನೆಗೂ ಶುದ್ಧ ನೀರು ತಲುಪಲಿ’

ಕುಣಿಗಲ್

ಗ್ರಾಮೀಣ ಭಾಗದ ಪ್ರತಿಯೊಂದು ಕುಟುಂಬಕ್ಕೂ ಸಕಾಲದಲ್ಲಿ ಶುದ್ಧ ಕುಡಿಯುವ ನೀರು ಒದಗಿಸುವುದು ಅಧಿಕಾರಿಗಳ ಆದ್ಯ ಕರ್ತವ್ಯವಾಗಬೇಕು. ನೀರಿನ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಶಾಸಕ ಡಾ. ಎಚ್.ಡಿ. ರಂಗನಾಥ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕುಡಿಯುವ ನೀರಿನ ಸಮಸ್ಯೆ ಕುರಿತ ‘ಪ್ರಗತಿ ಪರಿಶೀಲನಾ ಸಭೆ’ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೂರು ಬಂದರೆ ಕಠಿಣ ಕ್ರಮ: “ತಾಲ್ಲೂಕಿನ 36 ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಆಯಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಎಚ್ಚರ ವಹಿಸಬೇಕು. ನೀರಿನ ಲಭ್ಯತೆ ಮತ್ತು ವಿತರಣೆಯ ಬಗ್ಗೆ ನಿಖರ ಮಾಹಿತಿ ಹೊಂದಿರಬೇಕು. ಸಾರ್ವಜನಿಕರಿಂದ ಕುಡಿಯುವ ನೀರಿಗೆ ಸಂಬಂಧಿಸಿದಂತೆ ದೂರುಗಳು ಬಂದರೆ ಅಂತಹ ಅಧಿಕಾರಿಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು,” ಎಂದು ಶಾಸಕರು ಎಚ್ಚರಿಸಿದರು.

ತುರ್ತು ಕ್ರಮಕ್ಕೆ ಸೂಚನೆ: ಬೇಸಿಗೆ ಅಥವಾ ಇತರ ಸಂದರ್ಭಗಳಲ್ಲಿ ನೀರಿನ ಅಭಾವ ಸೃಷ್ಟಿಯಾಗದಂತೆ ತುರ್ತು ಕ್ರಮಗಳನ್ನು ಕೈಗೊಳ್ಳಲು ಸಿದ್ಧರಿರಬೇಕು. ಪ್ರತಿ ಹಳ್ಳಿಯಲ್ಲೂ ಶುದ್ಧ ಕುಡಿಯುವ ನೀರಿನ ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು. ಜನರ ಮೂಲಭೂತ ಅವಶ್ಯಕತೆಯಾದ ನೀರಿನ ವಿಷಯದಲ್ಲಿ ವಿಳಂಬ ಧೋರಣೆ ತೋರುವುದನ್ನು ಸಹಿಸುವುದಿಲ್ಲ ಎಂದು ಅವರು ಸಭೆಯಲ್ಲಿ ತಿಳಿಸಿದರು.“ತಾಲ್ಲೂಕಿನ 36 ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಆಯಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಎಚ್ಚರ ವಹಿಸಬೇಕು. ನೀರಿನ ಲಭ್ಯತೆ ಮತ್ತು ವಿತರಣೆಯ ಬಗ್ಗೆ ನಿಖರ ಮಾಹಿತಿ ಹೊಂದಿರಬೇಕು. ಸಾರ್ವಜನಿಕರಿಂದ ಕುಡಿಯುವ ನೀರಿಗೆ ಸಂಬಂಧಿಸಿದಂತೆ ದೂರುಗಳು ಬಂದರೆ ಅಂತಹ ಅಧಿಕಾರಿಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು,” ಎಂದು ಶಾಸಕರು ಎಚ್ಚರಿಸಿದರು.

ಬೇಸಿಗೆ ಅಥವಾ ಇತರ ಸಂದರ್ಭಗಳಲ್ಲಿ ನೀರಿನ ಅಭಾವ ಸಿದ್ಧರಿರಬೇಕು. ಪ್ರತಿ ಹಳ್ಳಿಯಲ್ಲೂ ಶುದ್ಧ ಕುಡಿಯುವ ನೀರಿನ ನೋಡಿಕೊಳ್ಳಬೇಕು. ಜನರ ಮೂಲಭೂತ ಅವಶ್ಯಕತೆಯಾದ ನೀರಿನ ವಿಷಯದಲ್ಲಿ ವಿಳಂಬ ಧೋರಣೆ ತೋರುವುದನ್ನು ಸಹಿಸುವುದಿಲ್ಲ ಎಂದು ಅವರು ಸಭೆಯಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಸಂತ್ ಕುಮಾರ್, ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಕಾಂತರಾಜು, ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳ ಪಿಡಿಒಗಳು ಹಾಜರಿದ್ದರು.

# ಗ್ರಾಮಗಳ ಹೆಸರು ಬದಲಾವಣೆಗೆ ಮನವಿ



ಬೂದಿಕೋಟೆ

ತಾಲ್ಲೂಕಿನ ಬೂದಿಕೋಟೆ ಹೋಬಳಿಯ ಚತ್ತಗುಟ್ಟಹಳ್ಳಿ ಹಾಗೂ ದೇವರಗುಟ್ಟಹಳ್ಳಿ ಗ್ರಾಮಗಳನ್ನು ಮಜರಾ ಗ್ರಾಮಗಳಿಂದ ಸ್ವತಂತ್ರ ‘ಕಂದಾಯ ಗ್ರಾಮ’ಗಳನ್ನಾಗಿ ಪರಿವರ್ತಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಪವಿಭಾಗಾಧಿಕಾರಿ (AC) ಜಂಬಗಿ ರೇಣುಕಾ ಪ್ರಸಾದ್ ದಿಲೀಪ್ ತಿಳಿಸಿದರು.

ಹೋಬಳಿಯ ಗಡಿ ಭಾಗದ ಕನಮನಳ್ಳಿ ಗ್ರಾಮದಲ್ಲಿ ಗ್ರಾಮಸ್ಥರ ಸಮ್ಮುಖದಲ್ಲಿ ಮಹಜರು ಪ್ರಕ್ರಿಯೆ ನಡೆಸಿ ಅವರು ಮಾತನಾಡಿದರು. ಈ ಭಾಗದ ಜನರು ಮಜರಾ ಗ್ರಾಮಗಳಾಗಿರುವುದರಿಂದ ಮೂಲಭೂತ ಸೌಕರ್ಯ ಹಾಗೂ ದಾಖಲೆಗಳ ವಿಚಾರದಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ ಎಂದರು.

ಗ್ರಾಮಗಳ ಕಂದಾಯ ಗ್ರಾಮ ರಚನೆಗೆ ಪೂರಕವಾಗಿ ಜಮೀನು ಹಕ್ಕು ಪತ್ರಗಳ ಸ್ಥಿತಿಗತಿ ಹಾಗೂ ಅಗತ್ಯ ದಾಖಲೆಗಳನ್ನು ಕಂದಾಯ ಇಲಾಖೆಯ ಅಧಿಕಾರಿಗಳಿಂದ ಸಂಗ್ರಹಿಸಲಾಯಿತು. ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ಎಸಿ ಅವರ ಮುಂದೆ ಮಂಡಿಸಿದ್ದು, ಇದಕ್ಕೆ ಸ್ಪಂದಿಸಿದ ಅವರು, “ಕಂದಾಯ ಗ್ರಾಮ ರಚನೆಯ ಪ್ರಕ್ರಿಯೆಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಲಾಗಿದೆ” ಎಂದು ತಿಳಿಸಿದರು. ಮಹಜರು ಸಂದರ್ಭದಲ್ಲಿ ಗ್ರಾಮಸ್ಥರು ಗ್ರಾಮದ ಹೆಸರನ್ನು ಬದಲಾವಣೆ ಮಾಡಬೇಕೆಂದು ಎಸಿ ಅವರಿಗೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಉಪವಿಭಾಗಾಧಿಕಾರಿಗಳು, ಈ ಕುರಿತು ಗ್ರಾಮಸ್ಥರು ಅಧಿಕೃತವಾಗಿ ಮನವಿ ಪತ್ರ ಸಲ್ಲಿಸಿದರೆ ನಿಯಮಾನುಸಾರ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಸುಜಾತ, ಉಪತಹಶೀಲ್ದಾರ್ ಸುರೇಶ್, ಕಂದಾಯ ನಿರೀಕ್ಷಕ ಪವನ್ ಕುಮಾರ್, ಪಿಡಿಒ ಭಾಸ್ಕರ್, ಗ್ರಾ.ಪಂ. ಕಾರ್ಯದರ್ಶಿ ರವಿ, ಗ್ರಾಮ ಆಡಳಿತ ಅಧಿಕಾರಿಗಳಾದ ಶರಣಪ್ಪ ಇದ್ದರು.

# 7ರಿಂದ ಬೆಸ್ಕಾಂ ಮುಂದೆ ಅಹೋರಾತ್ರಿ ಧರಣಿಗೆ ಸಜ್ಜಾದ ರೈತರು

ತಿಪಟೂರು

ಕೃಷಿ ಚಟುವಟಿಕೆಗಳಿಗೆ ಸರ್ಕಾರ ನಿಗದಿಪಡಿಸಿರುವ 7ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡದೆ ಬೆಸ್ಕಾಂ ಇಲಾಖೆ ರೈತರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಆರೋಪಿಸಿರುವ ತಾಲ್ಲೂಕಿನ ವಿವಿಧ ರೈತ ಸಂಘಟನೆಗಳು, ಇದೇ 7ರಿಂದ ನಗರದ ಬೆಸ್ಕಾಂ ಕಚೇರಿ ಎದುರು ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ನಿರ್ಧರಿಸಿವೆ.



ನಗರದಲ್ಲಿ ನಡೆದ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಾಂತ ರೈತ ಸಂಘದ ಮುಖಂಡ ಚನ್ನಬಸವಣ್ಣ, “ಸರ್ಕಾರದ ಆದೇಶದಂತೆ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು 3 ಹಾಗೂ ರಾತ್ರಿ 4 ಗಂಟೆ ಸೇರಿ ಒಟ್ಟು 7ಗಂಟೆ ವಿದ್ಯುತ್ ನೀಡಬೇಕು. ಆದರೆ ಅಧಿಕಾರಿಗಳ ಬೇಜವಾಬ್ದಾರಿಯಿಂದ ಕೇವಲ 1 ರಿಂದ 2ಗಂಟೆ ಮಾತ್ರ ವಿದ್ಯುತ್ ಸಿಗುತ್ತಿದೆ. ಇದರಿಂದ ಕೈಗೆ ಬಂದ ಬೆಳೆಗಳು ಕಣ್ಣೆದುರೇ ಒಣಗುತ್ತಿವೆ,” ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿಫಲವಾದ 72 ಗಂಟೆಗಳ ಗಡುವು: ವಿದ್ಯುತ್ ಪರಿವರ್ತಕಗಳು (ಟ್ರಾನ್ಸ್‌ಫಾರ್ಮರ್) ಕೆಟ್ಟು ಹೋದಾಗ 72 ಗಂಟೆಯೊಳಗೆ ಬದಲಿಸಿಕೊಡಬೇಕೆಂಬ ನಿಯಮವನ್ನು ಬೆಸ್ಕಾಂ ಗಾಳಿಗೆ ತೂರಿದೆ. ರೈತರೇ ಹಣ ಹಾಕಿಕೊಂಡು ರಿಪೇರಿ ಮಾಡಿಸಿಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ. ಇಲಾಖೆಯ ಈ ನಿರ್ಲಕ್ಷ್ಯ ಧೋರಣೆ ಮುಂದುವರಿದರೆ ಅಧಿಕಾರಿಗಳು ತಕ್ಕ ಶಾಸ್ತಿ ಅನುಭವಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ಪ್ರಿಪೇಡ್ ಮೀಟರ್‌ಗೆ ರೆಡ್ ಸಿಗ್ನಲ್: ಇದೇ ವೇಳೆ ಮಾತನಾಡಿದ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಬಸ್ತಿಹಳ್ಳಿ ರಾಜಣ್ಣ, “ರೈತರಿಗೆ ಮಾರಕವಾಗಿರುವ ಪ್ರಿಪೇಡ್ ಮೀಟರ್‌ಗಳನ್ನು ಅಳವಡಿಸಲು ಅಧಿಕಾರಿಗಳು ಮುಂದಾಗಬಾರದು. ಒಂದು ವೇಳೆ ಸರ್ಕಾರ ಹಠಕ್ಕೆ ಬಿದ್ದರೆ ರಾಜ್ಯವ್ಯಾಪಿ ಪ್ರತಿಭಟನೆ ನಡೆಸಲಾಗುವುದು. ಶಾಸಕರ ಅಧ್ಯಕ್ಷತೆಯಲ್ಲಿ ನಡೆಯಬೇಕಾದ ಗ್ರಾಹಕರ ಸಂವಾದ ಸಭೆಗಳು ಕೇವಲ ನಾಮಕಾವಸ್ಥೆಯಾಗಿವೆ,” ಎಂದು ದೂರಿದರು.

ಪ್ರಮುಖ ಬೇಡಿಕೆಗಳು:

ನಿರಂತರ 7 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಬೇಕು.

ಕೆಟ್ಟ ಟ್ರಾನ್ಸ್‌ಫಾರ್ಮರ್‌ಗಳನ್ನು ನಿಗದಿತ ಅವಧಿಯಲ್ಲಿ ಇಲಾಖೆಯೇ ಬದಲಿಸಬೇಕು.

ಪ್ರಿಪೇಡ್ ಮೀಟರ್ ಅಳವಡಿಕೆ ಯೋಜನೆಯನ್ನು ಕೈಬಿಡಬೇಕು.

ರೈತ ಸಂಪರ್ಕ ಸಭೆಗಳನ್ನು ನಡೆಸಿ ರೈತರ ಸಮಸ್ಯೆಗಳಿಗೆ ನೇರ ಸ್ಪಂದನೆ ಸಿಗಬೇಕು.

ಸುದ್ದಿಗೋಷ್ಠಿಯಲ್ಲಿ ಸೌಹಾರ್ದ ಸಂಘದ ಅಲ್ಲಾಬಕಾಷ್, ರೇಣುಕಮೂರ್ತಿ, ಶಿವಪ್ರಕಾಶ್, ಮಲ್ಲಿಕಾರ್ಜುನ್, ಸುಂದರೇಶ್, ಶ್ರೀನಿವಾಸ್, ನಾಗರಾಜು ಸೇರಿದಂತೆ ಹಲವು ಪ್ರಗತಿಪರ ಸಂಘಟನೆಗಳ ಮುಖಂಡರು ಸೇರಿದಂತೆ ಹಲವರು ಹಾಜರಿದ್ದರು.

# ಕಾಂಗ್ರೆಸ್ ದುರಾಡಳಿತಕ್ಕೆ ಜನ ಪಾಠ ಕಲಿಸಲಿದ್ದಾರೆ: ಅನಿಲ್‌ಕುಮಾರ್

ಕೊರಟಗೆರೆ

ಪ್ರಧಾನಿ ನರೇಂದ್ರ ಮೋದಿ ಅವರ ದಕ್ಷ ಆಡಳಿತ ಹಾಗೂ ಜನಪರ ಯೋಜನೆಗಳಿಂದಾಗಿ ದೇಶದಾದ್ಯಂತ ಬಿಜೆಪಿ ಅಲೆ ಬೀಸುತ್ತಿದೆ. ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ಮುಂದುವರಿದ ಭಾಗವಾಗಿ ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲೂ ಬಿಜೆಪಿ ಸರ್ಕಾರ ರಚನೆಯಾಗುವುದು ಖಚಿತ ಎಂದು ಮಾಜಿ ಐಎಎಸ್ ಅಧಿಕಾರಿ ಹಾಗೂ ಬಿಜೆಪಿ ಮುಖಂಡ ಬಿ.ಎಚ್. ಅನಿಲ್‌ಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.



ಪಟ್ಟಣದ ಮುಖ್ಯ ಬಸ್ ನಿಲ್ದಾಣದ ಆವರಣದಲ್ಲಿ ತಾಲ್ಲೂಕು ಬಿಜೆಪಿ ಮಂಡಲ ವತಿಯಿಂದ ಆಯೋಜಿಸಲಾಗಿದ್ದ ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ‘ವಿಜಯೋತ್ಸವ’ದಲ್ಲಿ ಭಾಗವಹಿಸಿ ಮಾತನಾಡಿದರು.

ಮೋದಿ ಅಲೆಗೆ ಧೂಳೀಪಟವಾದ ಭದ್ರಕೋಟೆಗಳು: “ಸುಮಾರು 30 ವರ್ಷಗಳಿಂದ ಭದ್ರಕೋಟೆಯಾಗಿದ್ದ ಪಶ್ಚಿಮ ಬಂಗಾಳದಂತಹ ರಾಜ್ಯಗಳಲ್ಲೇ ಇಂದು ಕಮಲ ಅರಳುತ್ತಿದೆ. ಅಸ್ಸಾಂ ಮತ್ತು ಪುದುಚೇರಿಯಲ್ಲೂ ಬಿಜೆಪಿ ಭರ್ಜರಿ ಜಯ ದಾಖಲಿಸಿ ಸರ್ಕಾರ ರಚಿಸುತ್ತಿದೆ. ಮೋದಿಯವರ ಕಾರ್ಯವೈಖರಿಯನ್ನು ಮೆಚ್ಚಿ ದೇಶದ ಜನ ಬಿಜೆಪಿಯನ್ನು ಬೆಂಬಲಿಸುತ್ತಿದ್ದಾರೆ. ಇದೇ ಗಾಳಿ ಕರ್ನಾಟಕದಲ್ಲೂ ಬೀಸಲಿದ್ದು, ಇಲ್ಲಿನ ಕಾಂಗ್ರೆಸ್ ಸರ್ಕಾರದ ದುರಾಡಳಿತಕ್ಕೆ ಜನರು ತಕ್ಕ ಪಾಠ ಕಲಿಸಲಿದ್ದಾರೆ,” ಎಂದು ಅವರು ಭವಿಷ್ಯ ನುಡಿದರು.

ಬಿಜೆಪಿ ತಾಲ್ಲೂಕು ಮಂಡಲ ಅಧ್ಯಕ್ಷ ರುದ್ರೇಶ್ ಮಾತನಾಡಿ, “ದೇಶದ ಈಗಾಗಲೇ 19 ರಾಜ್ಯಗಳಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ಈಗ ಪಂಚರಾಜ್ಯಗಳ ಚುನಾವಣೆಯಲ್ಲಿ ಮೋದಿಯವರ ಮಂತ್ರ ಕೆಲಸ ಮಾಡಿದ್ದು, ದಕ್ಷಿಣ ಭಾರತದಲ್ಲೂ ಬಿಜೆಪಿ ತನ್ನ ಪ್ರಾಬಲ್ಯವನ್ನು ವಿಸ್ತರಿಸಿಕೊಳ್ಳುತ್ತಿದೆ,” ಎಂದರು.

ಮಾಜಿ ಅಧ್ಯಕ್ಷ ಡಾ. ಕೆ.ಎಲ್. ದರ್ಶನ್ ಮಾತನಾಡಿ, ಬಿಜೆಪಿ ಗೆಲ್ಲುವುದಿಲ್ಲ ಎನ್ನುವ ಕ್ಷೇತ್ರಗಳಲ್ಲೂ ಮತದಾರರು ಮೋದಿಯವರ ಮೇಲೆ ವಿಶ್ವಾಸವಿಟ್ಟು ಜಯ ತಂದುಕೊಟ್ಟಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿ ದಾಸಲುಕುಂಟೆ ರಾಘು, ಮುಖಂಡರಾದ ಸ್ವಾಮಿ, ಗೋವಿಂದರಾಜು, ಮಂಜುನಾಥ್, ಪ್ರದೀಪ್, ರೂಪಶ್ರೀ, ದಯಾಮಣಿ, ರಂಗರಾಜು, ಮೂರ್ತಿ, ಚೇತನ್, ಅರುಣ್, ದಯಾನಂದ್, ಆನಂದ್, ರಂಜಿತ್, ನಟರಾಜ್, ನಂಜುಂಡಪ್ಪ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ‘ಗೆಲುವಿನ ಗಾಳಿ ರಾಜ್ಯಕ್ಕೂ ಬೀಸಲಿದೆ’

ಬಳ್ಳಾರಿ

ಪಶ್ಚಿಮ ಬಂಗಾಳ, ಪಾಂಡಿಚೇರಿ, ಅಸ್ಸಾಂನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಇಲ್ಲಿನ ಬಿಜೆಪಿ ಕಾರ್ಯಕರ್ತರು ನಗರದ ಹೃದಯ ಭಾಗ ರಾಯಲ್ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸೋಮವಾರ ವಿಜಯೋತ್ಸವ ಆಚರಿಸಿದರು.



ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೊಕ ಅವರು ಮಾತನಾಡಿ, ಪಂಚರಾಜ್ಯಗಳ ಚುನಾವಣೆಯಲ್ಲಿ ಅಸ್ಸಾಂ, ಪಾಂಡಿಚೇರಿ, ವಿಶೇಷವಾಗಿ ಪಶ್ಚಿಮ ಬಂಗಾಳ ನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ. ಈ ಗೆಲುವಿನ ಗಾಳಿ ರಾಜ್ಯಕ್ಕೂ ಬೀಸಲಿದೆ. ಇದು ದೇಶದ ಕಾರ್ಯಕರ್ತರ ಗೆಲುವಾಗಿದೆ. ಈ ಫಲಿತಾಂಶ ಗಮನಿಸಿದರೆ, ಇಡೀ ದೇಶ ಬಿಜೆಪಿ ಪರವಾಗಿದೆ, ಈ ಶಕ್ತಿ ರಾಜ್ಯ ಹಾಗೂ ಜಿಲ್ಲೆಯಲ್ಲಿ ಅಪ್ಪಳಿಸಲಿದೆ ಎಂದರು.

ಮಾಜಿ ಸಂಸದ ಸಣ್ಣ ಫಕೀರಪ್ಪ, ಬಿಜೆಪಿ ರಾಜ್ಯ ಕಾರ್ಯದರ್ಶಿ ಕೆ.ಎಸ್.ದಿವಾಕರ್, ಬುಡಾ ಮಾಜಿ ಅಧ್ಯಕ್ಷ ಮಾರುತಿ ಪ್ರಸಾದ್ ಸರ್ವಶೆಟ್ಟಿ, ಪಾಲಿಕೆ ಸದಸ್ಯರಾದ ಸುರೇಖಾ ಮಲ್ಲನಗೌಡ, ಕೆ.ಹನುಮಂತಪ್ಪ, ಗುಡಿಗಂಟೆ ಹನುಮಂತಪ್ಪ, ಬಿಜೆಪಿ ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ಹಂಪಿ ರಮಣ, ಡಾ.ಅರುಣಾ ಕಾಮಿನೇನಿ ಸೇರಿದಂತೆ ಅನೇಕ ಗಣ್ಯರು, ನೂರಾರು ಕಾರ್ಯಕರ್ತರು ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಧುರೀಣರಾದ ಕೆ.ರಾಮಲಿಂಗಪ್ಪ, ಯುವ ಮುಖಂಡರಾದ ಅಡವಿಸ್ವಾಮಿ, ಓಂ ಪ್ರಕಾಶ್, ಮಲ್ಲೇಶ್ ಕುಮಾರ್, ಎಚ್. ಓಬಳೇಶ್, ಹನುಮೇಶ ಉಪ್ಪಾರ, ಹಲಕುಂದಿ ವೀರನಗೌಡ, ಶಂಕ್ರಪ್ಪ, ರಾಘವೇಂದ್ರ ಎಸ್.ಚಲುವಾದಿ, ಹನುಮಂತಪ್ಪ ಕೋಳೂರು, ಎರಂಗಳಿ ತಿಮ್ಮಾರೆಡ್ಡಿ, ಶರಣು ಆರ್.ಸೋಮನಗೌಡ, ಮಹಿಳಾ ಮುಖಂಡರಾದ ರಬಿಯಾ, ಡಾ.ರೇಣುಕಾ ಸೇರಿದಂತೆ ವಿವಿಧ ಗಣ್ಯರು, ನೂರಾರು ಕಾರ್ಯಕರ್ತರು ಇದ್ದರು.

# ನಗರೀಕರಣದ ಅಬ್ಬರಕ್ಕೆ ಪ್ರಕೃತಿ ಬಲಿ: ಶಿವಕುಮಾರ್ ಕಳವಳ

ಕೆಜಿಎಫ್

ಪ್ರಕೃತಿಯು ಸಕಲ ಜೀವರಾಶಿಗಳನ್ನು ತನ್ನ ಮಡಿಲಲ್ಲಿ ಹೊತ್ತು ಸಲಹುತ್ತಿದೆ. ಆದರೆ ಇಂದು ಮನುಷ್ಯನ ಅತಿಯಾದ ಸ್ವಾರ್ಥ, ನಗರೀಕರಣ ಮತ್ತು ಅಭಿವೃದ್ಧಿಯ ಹೆಸರಿನಲ್ಲಿ ಪ್ರಕೃತಿಯ ಮಡಿಲು ಬರಿದಾಗುತ್ತಿದೆ. ದಿನೇ ದಿನೇ ಏರುತ್ತಿರುವ ಜಾಗತಿಕ ತಾಪಮಾನವು ಮಾನವ ಸಂಕುಲಕ್ಕೆ ಕಳವಳಕಾರಿ ವಿಷಯವಾಗಿದೆ ಎಂದು 3ನೇ ಅಪರ ಜಿಲ್ಲಾ ಸತ್ರ ನ್ಯಾಯಾಧೀಶರಾದ ಶಿವಕುಮಾರ್ ಅಭಿಪ್ರಾಯಪಟ್ಟರು.



ತಾಲ್ಲೂಕಿನ ಟಿ.ಗೊಲ್ಲಹಳ್ಳಿಯಲ್ಲಿ ‘ಗುಡ್ ಡೀಡ್ಸ್ ಡೇ’ ಅಂಗವಾಗಿ ಬೆಳಕು ಟ್ರಸ್ಟ್ ತಂಬರ್ಲಹಳ್ಳಿ ಹಾಗೂ ಟಿ.ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೆರೆ ಅಂಗಳದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ಉಳಿದರೆ ಮಾತ್ರ ಭವಿಷ್ಯ: ಹಸಿರೇ ಉಸಿರು ಎಂಬ ಸತ್ಯವನ್ನು ಅರಿತು ಪ್ರತಿಯೊಬ್ಬರೂ ಸಸಿಗಳನ್ನು ನೆಟ್ಟು ಪೋಷಿಸಬೇಕು. ಇಂದು ಅರಣ್ಯ ನಾಶ ಹಾಗೂ ಮಾಲಿನ್ಯದಿಂದಾಗಿ ಅನೇಕ ಜೀವ ಸಂಕುಲಗಳು ಅಳಿವಿನಂಚಿಗೆ ತಲುಪಿವೆ. ಭವಿಷ್ಯದ ದೃಷ್ಟಿಯಿಂದ ನಾವು ಪರಿಸರ ಮಾತೆಯ ರಕ್ಷಣೆ ಮಾಡುವುದು ಅನಿವಾರ್ಯವಾಗಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಿವಿಲ್ ನ್ಯಾಯಾಧೀಶೆ ಶಮಿದಾ ಅವರು ಮಾತನಾಡಿ, “ಕೆಜಿಎಫ್ ಪೊಲೀಸ್ ಜಿಲ್ಲಾ ವ್ಯಾಪ್ತಿಯಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ಸಣ್ಣಪುಟ್ಟ ಭೂಮಿ ವಿಚಾರಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರುವ ಬದಲು, ಸಾರ್ವಜನಿಕರು ಉದ್ವೇಗಕ್ಕೆ ಒಳಗಾಗದೆ ಶಾಂತಿಯುತವಾಗಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು,” ಎಂದು ಕಿವಿಮಾತು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಎಸ್.ಎನ್. ರಾಜಗೋಪಾಲಗೌಡ ಮಾತನಾಡಿ, ಜಿಲ್ಲೆಯ 3600 ಕೆರೆಗಳಲ್ಲಿ ಹೂಳು ತುಂಬಿದ್ದು, ಅಂತರ್ಜಲ ಮಟ್ಟ ಕುಸಿಯುತ್ತಿದೆ. ಜಿಲ್ಲಾಡಳಿತವು ಕೆರೆಗಳ ಪುನಶ್ಚೇತನಕ್ಕೆ ಆದ್ಯತೆ ನೀಡಬೇಕು. ಈ ನಿಟ್ಟಿನಲ್ಲಿ ಬೆಳಕು ಸಂಸ್ಥೆಯು ಒಂದು ಲಕ್ಷ ಗಿಡಗಳನ್ನು ನೆಡುವ ಮೂಲಕ ಪರಿಸರಕ್ಕೆ ಬೆಳಕಾಗುತ್ತಿರುವುದು ಶ್ಲಾಘನೀಯ ಎಂದರು.

ಅಪರ ಹಿರಿಯ ಸಿವಿಲ್ ನ್ಯಾಯಾಧೀಶ ಮುಜಫರ್ ಎ ಮಂಜರಿ, ಅಪರ ಹಿರಿಯ ನ್ಯಾಯಾಧೀಶೆ ಜಯಲಕ್ಷ್ಮಿ ಸಮಾಜಮುಖಿ ಕಾರ್ಯಗಳ ಬಗ್ಗೆ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಜೆ.ಜೆ. ನಾಗರಾಜ್, ಲೋಕೇಶ್, ಆನಂದ್, ವೃತ್ತ ನಿರೀಕ್ಷಕ ರಂಗಶಾಮಯ್ಯ, ಪಿಡಿಒ ಶ್ರೀನಿವಾಸಮೂರ್ತಿ ಹಾಗೂ ಬೆಳಕು ಸಂಸ್ಥೆಯ ರಾಧಾಮಣಿ ಉಪಸ್ಥಿತರಿದ್ದರು.

# ಹನ್ನೊಂದು ಬಾಲ ಕಾರ್ಮಿಕರ ರಕ್ಷಣೆ

ದೇವನಹಳ್ಳಿ

ಇಲ್ಲಿನ ಹೊಸಕೋಟೆ ತಾಲ್ಲೂಕಿನ ಸೂಲಿಬೆಲೆ ಹೋಬಳಿ ವ್ಯಾಪ್ತಿಯಲ್ಲಿ ಖಾಸಗಿ ಕಂಪನಿಗೆ ಸೇರಿದ ಗೋಡೌನ್ ಒಂದರಲ್ಲಿ ರಾತ್ರಿ ಪಾಳಿಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರು ದುಡಿಮೆ ಮಾಡುತ್ತಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಮೇ 4 ರಂದು ಕಾರ್ಮಿಕ ಇಲಾಖೆ ಜಂಟಿ ಕಾರ್ಯಾಚರಣೆ ನಡೆಸಿ 11 ಮಕ್ಕಳ ರಕ್ಷಣೆ ಮಾಡಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಹರ್ಷವರ್ಧನ್ ತಿಳಿಸಿದ್ದಾರೆ.

ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನೆ, ಹೊಸಕೋಟೆ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ರವರು ಜಂಟಿ ತಪಾಸಣೆ ಕೈಗೊಂಡು ರಕ್ಷಿಸಲಾಗಿದೆ.

ರಕ್ಷಿಸಿದ ಬಾಲ ಮತ್ತು ಕಿಶೋರ ಕಾರ್ಮಿಕನನ್ನು ಮಕ್ಕಳ ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿಯ ಮೌಖಿಕ ಆದೇಶದ ಮೇರೆಗೆ ದೇವನಹಳ್ಳಿ ತಾಲ್ಲೂಕಿನ ಸರ್ಕಾರಿ ಬಾಲಕರ ಬಾಲಮಂದಿರಕ್ಕೆ ದಾಖಲಿಸಲಾಗಿದೆ, ಮಾಲೀಕರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಕ್ರಮ ವಹಿಸಲಾಗಿದೆ.

ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದ್ದು 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿದಲ್ಲಿ ಅಂತಹವರಿಗೆ ಕನಿಷ್ಠ 6 ತಿಂಗಳಿಗಿಂತ ಕಡಿಮೆ ಇಲ್ಲದಂತೆ ಮತ್ತು ಗರಿಷ್ಠ 2 ವರ್ಷದವರೆಗೂ ಜೈಲು ಶಿಕ್ಷೆ ಹಾಗೂ 50,000 ಸಾವಿರದವರೆಗು ದಂಡ ವಿಧಿಸಲಾಗುತ್ತದೆ. 18 ವರ್ಷದೊಳಗಿನ ಯಾವುದೇ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಿರುವುದು ಕಂಡುಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಮತ್ತು ಪೋಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ 112 ಕರೆ ಮಾಡಿ ಮಾಹಿತಿ ನೀಡಿ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಬಾಲಕಾರ್ಮಿಕ ಯೋಜನೆ ಸೊಸೈಟಿಯ ಯೋಜನಾ ನಿರ್ದೇಶಕರಾದ ಗಣೇಶಮೂರ್ತಿ ಎ. ಎಸ್, ಹೊಸಕೋಟೆ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕ ಯತೀಶ್ ಕುಮಾರ್, ಇತರೆ ಸಿಬ್ಬಂದಿ ಇದ್ದರು.

# ಮಳೆ ಹಾನಿ ಪ್ರದೇಶಕ್ಕೆ ಜಿಲ್ಲಾಧಿಕಾರಿ ಭೇಟಿ



ತಿಪಟೂರು

ತಾಲೂಕಿನಲ್ಲಿ ಮಂಗಳವಾರ ಸಂಜೆ ಮತ್ತು ರಾತ್ರಿ ಸುರಿದ ಬಾರಿ ಮಳೆ ಹಾಗೂ ಗಾಳಿಗೆ ತೀವ್ರ ಹಾನಿಯಾಗಿದ್ದು ಅವರಿಗೆ ಜಿಲ್ಲಾ ಉಸ್ತವಾರಿ ಹಾಗೂ ಗೃಹಸಚಿವರ ಆದೇಶದಂತೆ ಶೀಘ್ರವೇ ಎನ್.ಡಿ.ಆರ್ ಪರಿಹಾರ ನಿಧಿಯಿಂದ ಪರಿಹಾರ ದೊರಕಿಸಲಾಗುವುದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.

ಮಂಗಳವಾರ ತಾಲ್ಲೂಕಿನ ಕಿಬ್ಬನಹಳ್ಳಿ ಹೋಬಳಿಯಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಕ್ಕೆ ಭೇಟಿ ನೀಡಿ ಮಾತನಾಡಿದ ಅವರು ಜಿಲ್ಲೆಯಲ್ಲಿ 2.8 ಸೆಂ.ಮೀ ಮಳೆಯಾಗಿದ್ದು, ಇಲ್ಲಿ ಸುಮಾರು 4 ಸೆಂ.ಮೀ ಮಳೆಯಾಗಿದ್ದು ಇದರ ಜೊತೆಗೆ ಭೀಕರವಾಗಿ ಗಾಳಿ ಬೀಸಿದ ಪರಿಣಾಮ ಇಷ್ಟೆಲ್ಲಾ ಅನಾಹುತವಾಗಿದೆ. ಈಗಾಗಲೇ ನಮ್ಮ ಸಿಬ್ಬಂದಿಗಳು ಅಂದರೆ ಕೃಷಿ, ತೋಟಗಾರಿಕೆ, ಕಂದಾಯ ಇಲಾಖೆ ಹಾನಿಯಾದ ಪ್ರದೇಶಕ್ಕೆ ತೆರಳಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಎನ್.ಡಿ.ಆರ್ ನಿಂದ ಪರಿಹಾರ ದೊರಕಿಸುವ ಪ್ರಯತ್ನಮಾಡುತ್ತೇವೆ. ಯಾವ ರೈತರ ಒಟ್ಟು ಆಸ್ತಿಯಲ್ಲಿ ಶೇಕಡ 33% ಹಾನಿಯಾಗಿರುವವರಿಗೆ ಪರಿಹಾರ ಬರುತ್ತದೆ. ಹೆಚ್ಚಿನ ಮಾಹಿತಿಗೆ ಸ್ಥಳೀಯ ಇಲಾಖೆಗಳನ್ನು ಸಂಪರ್ಕಿಸಿ ಮಾಹಿತಿ ನೀಡಿ ಇಲ್ಲ ಕರೆಮಾಡಿದರೆ ಅವರೇ ಬರುತ್ತಾರೆ ಎಂದು ತಿಳಿಸಿದರು ಇದೇ ಸಂದರ್ಭದಲ್ಲಿ ಕೃಷಿಹೊಂಡಕ್ಕೆ ಬೇಲಿ ಇಲ್ಲದ್ದನ್ನು ಗಮನಿಸಿ ಸೂಕ್ತ ಬೇಲಿಹಾಕಿ ಎಂದು ರೈತರಿಗೆ ಎಚ್ಚರಿಸಿದರು.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹಾಲುಗೋಣಕ್ಕೂ ಬೇಟಿ ನೀಡಿದರು, ಈ ಸಂದರ್ಭದಲ್ಲಿ ತಹಸೀದ್ದಾರ್ ಮೋಹನ್‌ಕುಮಾರ್ ತೋಟಗಾರಿಕಾ ಸಹಾಯಕ ನಿರ್ದೇಶಕ ಚಂದ್ರಶೇಖರ್, ಚಿಕ್ಕನಾಯಕನಹಳ್ಳಿ ತಹಸೀಲ್ದಾರ್ ಮಮತ ಮತ್ತಿತ ಅಧಿಕಾರಿಗಳು ಭಾಗವಹಿಸಿದ್ದರು.

# ಕಟ್ಟಡ ಕಾರ್ಮಿಕರಿಗೆ

## ಮಧ್ಯಾಹ್ನದ ವಿಶ್ರಾಂತಿ ಕಡ್ಡಾಯ

ಕೋಲಾರ

ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ಅತೀ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕಟ್ಟಡ ಕಾರ್ಮಿಕರಿಗೆ ಮಧ್ಯಾಹ್ನ 1 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿಶ್ರಾಂತಿ ನೀಡುವುದು ಗುತ್ತಿದಾರರ, ಮಾಲೀಕರ ಜವಾಬ್ದಾರಿಯಾಗಿದೆ ಎಂದು ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಟ್ಟಡ ಕಾಮಗಾರಿ ಸ್ಥಳಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಂಭವ ಇರುವುದರಿಂದ, ಕಾರ್ಮಿಕರ ಆರೋಗ್ಯದ ಹಿತದೃಷ್ಟಿ ಹಿನ್ನೆಯಲ್ಲಿ ಮಧ್ಯಾಹ್ನದ ವೇಳೆ ವಿಶ್ರಾಂತಿಗೆ ಅವಕಾಶ ನೀಡುವಂತೆ ಹಾಗೂ ಕಾರ್ಮಿಕರ ಆರೋಗ್ಯವನ್ನು ರಕ್ಷಿಸಿಕೊಳ್ಳಲು ಕೆಲವು ಮಾರ್ಗಸೂಚಿಗಳನ್ನು ಅನುಸರಿಸಲು ಸೂಚಿಸಿದ್ದಾರೆ.

ಕಾರ್ಮಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ ಮತ್ತು ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆಯನ್ನು ನೀಡುವುದು ಗುತ್ತಿಗೆದಾರರ, ಮಾಲೀಕರ ಜವಾಬ್ದಾರಿಯಾಗಿದ್ದು, ಈ ಬಗ್ಗೆ ಸೂಕ್ತ ಕ್ರಮವಹಿಸಬೇಕು. ಈ ಕುರಿತು ಯಾವುದೇ ಅಹಿತಕರ ಘಟನೆಗಳು ನಡೆದಲ್ಲಿ ಸಂಬಂಧಿಸಿದ ಗುತ್ತಿಗೆದಾರರು, ಮಾಲೀಕರುಗಳೇ ನೇರ ಹೊಣೆಗಾರರಾಗಿರುತ್ತಾರೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ರಾಜಕಾರಣಿಗಳಿಗೆ ಕನ್ನಡ ಸಾಹಿತ್ಯ, ಸಂಸ್ಕೃತಿ ಬೇಕಾಗಿಲ್ಲ’

ತುಮಕೂರು

ಹಿಂದೆ ರಾಜಾಶ್ರಯದಲ್ಲಿ ಸಾಹಿತ್ಯ ರಚನೆ ಆಗುತ್ತಿತ್ತು. ರಾಜಮಹಾರಾಜರು ಸಾಹಿತ್ಯ, ಸಾಹಿತಿಗಳನ್ನು ಪ್ರೋತ್ಸಾಹಿಸುತ್ತಿದ್ದರು. ಈಗ ಅಂತಹ ಪ್ರೋತ್ಸಾಹ ಸಿಗುತ್ತಿಲ್ಲ. ಸರ್ಕಾರ ಪುಸ್ತಕಗಳನ್ನು ಖರೀದಿಸಿ ನಾಲ್ಕು ವರ್ಷಗಳಾಗಿವೆ. ಯಾವ ಸರ್ಕಾರಗಳೂ ಸಾಹಿತ್ಯವನ್ನು ಪ್ರೋತ್ಸಾಹಿಸುತ್ತಿಲ್ಲ ಈಗಿನ ರಾಜಕಾರಣಿಗಳಿಗೆ ಸಾಹಿತ್ಯ, ಸಂಸ್ಕೃತಿ ಬೇಕಾಗಿಲ್ಲ ಎಂದು ಸಾಹಿತಿ ಡಾ. ಕರೀಗೌಡ ಬೀಚನಹಳ್ಳಿ ವಿಷಾದಿಸಿದರು.



ನಗರದ ಕನ್ನಡ ಭವನದಲ್ಲಿ ಮಂಗಳವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ನಡೆದ ಸಂಸ್ಥಾಪನಾ ದಿನಾಚರಣೆ ಹಾಗೂ ವಿವಿಧ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಶಾಲಾಕಾಲೇಜು ಮಕ್ಕಳು ಪುಸ್ತಕ ಓದಬೇಕು. ಪುಸ್ತಕಗಳಲ್ಲಿ ಸಿಗುವ ಜ್ಞಾನ ಮೊಬೈಲ್‌ಗಳಲ್ಲಿ ಸಿಗುವುದಿಲ್ಲ, ಪುಸ್ತಕಗಳಲ್ಲಿ ಬಹುಮುಖಿ ಜ್ಞಾನ ದೊರೆಯುತ್ತದೆ ಎಂದರು.

ಕನ್ನಡ ಭಾಷೆ ಸಾಹಿತ್ಯ, ಸಂಸ್ಕೃತಿ ಬೆಳೆಸಲು ಮೈಸೂರು ಮಹಾರಾಜರು 112 ವರ್ಷಗಳ ಹಿಂದ ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪನೆಯಾಗಲು ಕಾರಣರಾದರು. ಅಂದಿನಿಂದ ಇಂದಿನವರೆಗೆ ಪರಿಷತ್ತು ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಪುಸ್ತಕ ಸಂಸ್ಕೃತಿ ಬೆಳೆಸುವ ಚಟುವಟಿಕೆ ನಡೆಸಿಕೊಂಡು ಬರುತ್ತಿದೆ. ಸರ್ಕಾರ ಹಾಗೂ ದಾನಿಗಳು ಪರಿಷತ್ತಿನ ಕಾರ್ಯಚಟುವಟಿಕೆಗಳಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ಮಾತನಾಡಿ, ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳು ನಿಲ್ಲಬಾರದು, ನಿರಂತರವಾಗಿ ಮುನ್ನಡೆಯಬೇಕು ಎಂದರು. ಜಿಲ್ಲಾ ಕಸಾಪ ಚಟುವಟಿಕೆಗಳಿಗೆ ಅನೇಕ ದಾನಿಗಳು ಸಹಾಯಾಸ್ತ ನೀಡುತ್ತಾ ಬಂದಿದ್ದಾರೆ. ಹಲವು ಮಹನೀಯರು ದತ್ತಿನಿಧಿ ಇಟ್ಟು ಪ್ರೋತ್ಸಾಹಿಸುತ್ತಿದ್ದಾರೆ. ಪರಿಷತ್ತಿಗೆ ಸಹಾಯ ಮಾಡುವವರ ಸಂಖ್ಯೆ ಮತ್ತಷ್ಟು ಹೆಚ್ಚಲಿ ಎಂದು ಹೇಳಿದರು. ಈ ವೇಳೆ ದೇವಪ್ರಕಾಶ್ ಮಾತೃಶ್ರೀ ಭಾಗೀರಥಮ್ಮ ದತ್ತಿ ಪ್ರಶಸ್ತಿಯನ್ನು ಸುಶೀಲ ಸದಾಶಿವಯ್ಯ ಅವರಿಗೆ ಪ್ರವಾಸ ಸಾಹಿತ್ಯಕ್ಕಾಗಿ, ಮಕ್ಕಳ ಸಾಹಿತ್ಯದ ಶಾಂಪುರ ಭಾಗೀರಥಮ್ಮ ನೆನಪಿನ ಪ್ರಶಸ್ತಿಯನ್ನು ಪ.ನಾ. ಹಳ್ಳಿ ಹರೀಶ್‌ಕುಮಾರ್ ಅವರಿಗೆ, ದೇವಪ್ರಕಾಶ್ ಹಾಸ್ಯ ಸಾಹಿತ್ಯ ಪ್ರಶಸ್ತಿಯನ್ನು ತುರುವೇಕೆರೆ ಮಂಜೇಶ್ ಅವರಿಗೆ ಹಾಗೂ ದೇವಪ್ರಕಾಶ್ ಮಾಧ್ಯಮ ಪ್ರಶಸ್ತಿಯನ್ನು ಹಿರಿಯ ಪತ್ರಿಕಾ ಛಾಯಾಗ್ರಾಹಕರಾದ ಟಿ.ಆರ್. ರೇಣುಕಾಪ್ರಸಾದ್ ಹಾಗೂ ಟಿ.ಹೆಚ್. ಸುರೇಶ್ ಅವರಿಗೆ ಪ್ರದಾನ ಮಾಡಲಾಯಿತು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷೆ ಬಾ.ಹ. ರಮಾಕುಮಾರಿ, ಕೈಗಾರಿಕೋದ್ಯಮಿ ಹೆಚ್.ಜಿ ಚಂದ್ರಶೇಖರ್, ಸರ್ವೋದಯ ಶಿಕ್ಷಣ ಸಂಸ್ಥೆ ಜಂಟಿ ಕಾರ್ಯದರ್ಶಿ ಕೆ.ವಿ. ಸುಬ್ಬರಾವ್, ಇತಿಹಾಸ ಸಂಶೋಧಕ ಡಾ. ಡಿ.ಎನ್. ಯೋಗೀಶ್ವರಪ್ಪ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಕಂಟಲಗೆರೆ ಸಣ್ಣಹೊನ್ನಯ್ಯ, ಕೋಶಾಧ್ಯಕ್ಷ ಎಂ.ಹೆಚ್. ನಾಗರಾಜು ಭಾಗವಹಿಸಿದ್ದರು.

ಭಾರತ ಸಾರಥಿ
07/05/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ಜನನ ಮರಣ ನೋಂದಣಿಯನ್ನು ಶೇಕಡ ನೂರರಷ್ಟು ಸಾಧಿಸಿ’

ರಾಮನಗರ

ಜಿಲ್ಲೆಯಲ್ಲಿ ಜನನ – ಮರಣ ನೋಂದಣಿಯನ್ನು ಶೇ. 100ರಷ್ಟು ಸಾಧಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸೂಚಿಸಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನನ ಮರಣ ನೋಂದಣಿ ಕುರಿತು ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾನತಾಡಿದರು.

ಜನನ, ಮರಣ ಘಟನೆಗಳನ್ನು ಘಟಿಸಿದ 21 ದಿನಗಳೊಳಗಾಗಿ ವಿಳಂಬಕ್ಕೆ ಆಸ್ಪದವಿಲ್ಲದಂತೆ ನೋಂದಾಯಿಸಿಕೊಳ್ಳಲು



ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದವರು ತಾಕೀತು ಮಾಡಿದರು.

ಜಿಲ್ಲೆಯಲ್ಲಿ 2024ರ ಸಾಲಿನಲ್ಲಿ 9,493 ಜನನ ಘಟನೆಗಳು 10,486 ಮರಣ ಘಟನೆಗಳು 2025 ಸಾಲಿನಲ್ಲಿ 10,207 ಜನನ ಘಟನೆಗಳು, 10,514 ಮರಣ ಘಟನೆಗಳು ಹಾಗೂ 2026ರ ಜನವರಿಯಿಂದ ಏಪ್ರಿಲ್ ಮಾಹೆಯವರೆಗೆ 3,153 ಜನನ ಘಟನೆಗಳು, 3,393 ಮರಣ ಘಟನೆಗಳಾಗಿವೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಸುನೀಲ್ ಕುಮಾರ್ ಅವರು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 2025ನೇ ಸಾಲಿನಲ್ಲಿ 1,722 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೆ 312 ಜನನ ಘಟನೆಗಳು ತಡವಾಗಿ ನೋಂದಣಿಯಾಗಿದೆ. 2025ನೇ ಸಾಲಿನಲ್ಲಿ 3,378 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೂ 674 ಮರಣ ಘಟನೆಗಳು ತಡವಾಗಿ ನೋಂದಣಿ ಆಗಿವೆ. ಜನನ–ಮರಣ ಘಟನೆಗಳು ತಡವಾಗಿ ನೋಂದಣಿಯಾಗದಂತೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ, ಗ್ರಾಮ ಲೆಕ್ಕಾಧಿಕಾರಿಗಳು, ಸಾಂಖಿಕ ನಿರೀಕ್ಷಕರು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಯವರು ಸೂಚಿಸಿದರು.

ಸರ್ಕಾರಿ ಆಸ್ಪತ್ರೆಗಳು, ಖಾಸಗಿ ಆಸ್ಪತ್ರೆಗಳ ವೈದ್ಯಾಧಿಕಾರಿಗಳು ತಮ್ಮ ಆಸ್ಪತ್ರೆಗಳಲ್ಲಿ ಘಟಿಸುವ ಜನನ, ಮರಣ ಘಟನೆಗಳನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ಅಗತ್ಯ ಕ್ರಮವಹಿಸಬೇಕು, ಈ ಸಂದರ್ಭದಲ್ಲಿ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆ ವಹಿಸಬೇಕು, ಜಿಲ್ಲೆಯ ಎಲ್ಲಾ ತಹಶೀಲ್ದಾರರು ಜನನ–ಮರಣ ಘಟನೆಗಳ ನೋಂದಣಿಯ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಗಳನ್ನು ನಿಯಮಿತವಾಗಿ ನಡೆಸುವಂತೆ ಸೂಚಿಸಿದರು.

ಮಾಗಡಿ ತಾಲೂಕು ಯೋಜನಾಧಿಕಾರಿ ವೆಂಕಟರಾಮು, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕರಾದ ಮಹೇಶ್, ಕಾವ್ಯ, ಸಂಬಂಧಿಸಿದ ಅಧಿಕಾರಿಗಳು ಸಭೆಯಲ್ಲಿದ್ದರು.

# ಕೆಟ್ಟು ನಿಂತ ಶುದ್ಧ ಕುಡಿಯುವ ನೀರಿನ ಘಟಕ



ಬೇತಮಂಗಲ

ಟಿ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಂದ್ರ ಗ್ರಾಮದಲ್ಲಿ ಕಳೆದ ಮೂರು ವರ್ಷಗಳಿಂದ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿದ್ದು, ಶುದ್ಧ ನೀರಿಗಾಗಿ ಗ್ರಾಮಸ್ಥರು ಮೈಲುಗಟ್ಟಲೆ ಅಲೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಜನಪ್ರತಿನಿಧಿಗಳ ಭರವಸೆಗಳು ಹುಸಿಯಾಗಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಐಸಂದ್ರ ಗ್ರಾಮದಲ್ಲಿ 200ಕ್ಕೂ ಹೆಚ್ಚು ಮನೆಗಳಿದ್ದು, ಸಾವಿರಾರು ಜನಸಂಖ್ಯೆ ಇದೆ. ಗ್ರಾಮದಲ್ಲಿ ಲಭ್ಯವಿರುವ ನೀರು ಫ್ಲೋರೈಡ್ ಮಿಶ್ರಿತವಾಗಿದ್ದು, ಇದನ್ನು ಕುಡಿದ ವೃದ್ಧರು ಹಾಗೂ ಮಕ್ಕಳು ಪದೇ ಪದೇ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಈ ಬಗ್ಗೆ ಪಂಚಾಯಿತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಜನರು ಅಳಲು ತೋಡಿಕೊಂಡಿದ್ದಾರೆ.

ಗ್ರಾಮದಲ್ಲಿ ಶುದ್ಧ ನೀರಿನ ಘಟಕ ಇಲ್ಲದ ಕಾರಣ, ನಿವಾಸಿಗಳು ಪ್ರತಿದಿನ ಪಕ್ಕದ ಕದಿರೇಗೌಡನಕೋಟೆ ಹಾಗೂ ರೆಡ್ಡಿಹಳ್ಳಿಯಂತಹ ಗ್ರಾಮಗಳಿಗೆ ಹೋಗಿ ನೀರು ತರುವಂತಾಗಿದೆ. “ಚುನಾವಣೆಯ ಸಮಯದಲ್ಲಿ ಮಾತ್ರ ವೋಟು ಕೇಳಲು ಬರುವ ನಾಯಕರು, ಗೆದ್ದ ಮೇಲೆ ನಮ್ಮ ಕಷ್ಟ ಕೇಳಲು ಬರುತ್ತಿಲ್ಲ” ಎಂದು ಗ್ರಾಮಸ್ಥರು ಕಿಡಿ ಕಾರಿದ್ದಾರೆ.

ಅಂಬೇಡ್ಕರ್ ಯುವ ವೇದಿಕೆಯ ಕೋಲಾರ ಜಿಲ್ಲಾ ಅಧ್ಯಕ್ಷ ಐಸಂದ್ರ ಗೋವಿಂದಪ್ಪ ಮಾತನಾಡಿ, “ರಾಜ್ಯದ ಇತರೆ ಕ್ಷೇತ್ರಗಳ ಶಾಸಕರು ಪ್ರತಿ ಪಂಚಾಯಿತಿ ಮಟ್ಟದಲ್ಲಿ ಕುಂದುಕೊರತೆ ಸಭೆ ನಡೆಸಿ ಜನರ ಸಮಸ್ಯೆ ಆಲಿಸುತ್ತಿದ್ದಾರೆ. ಆದರೆ ನಮ್ಮ ಕ್ಷೇತ್ರದಲ್ಲಿ ಶಾಸಕರು ಚುನಾವಣೆಯಾದ ಮೇಲೆ ಗ್ರಾಮಕ್ಕೆ ಭೇಟಿ ನೀಡಿಲ್ಲ, ಸಾರ್ವಜನಿಕರ ಸಮಸ್ಯೆಗಳನ್ನು ಕೇಳುವ ಸಭೆಗಳೂ ನಡೆಯುತ್ತಿಲ್ಲ” ಎಂದು ಗಂಭೀರವಾಗಿ ಆರೋಪಿಸಿದರು.

ಪಂಚಾಯಿತಿ ಅಧಿಕಾರಿಗಳು ತಕ್ಷಣವೇ ಎಚ್ಚೆತ್ತು ಐಸಂದ್ರ ಗ್ರಾಮಕ್ಕೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸದಿದ್ದರೆ ಮುಂಬರುವ ದಿನಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಗ್ರಾಮಸ್ಥರು ಎಚ್ಚರಿಸಿದ್ದಾರೆ.

## ಬಿಎಸ್‌ವೈ ಅಭಿಮಾನೋತ್ಸವಕ್ಕೆ

# ಬಳ್ಳಾರಿ ಸಜ್ಜು



ಬಳ್ಳಾರಿ

ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರ ಜನಪರ ಆಡಳಿತ, ರೈತಪರ ಯೋಜನೆಗಳು ಹಾಗೂ ಪಕ್ಷ ಸಂಘಟನೆಗೆ ನೀಡಿದ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಆಯೋಜಿಸಿರುವ ‘ಬಿಎಸ್‌ವೈ ಅಭಿಮಾನೋತ್ಸವ’ ಕಾರ್ಯಕ್ರಮಕ್ಕೆ ಬಳ್ಳಾರಿ ಜಿಲ್ಲೆಯಿಂದ ಬಿಜೆಪಿಯ ಕಾರ್ಯಕರ್ತರು, ಅಭಿಮಾನಿಗಳು ಭಾಗವಹಿಸಲಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ತಿಳಿಸಿದರು.

ಮೋಕಾ ರಸ್ತೆಯ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯ ರಾಜಕಾರಣದಲ್ಲಿ ಯಡಿಯೂರಪ್ಪ ಅವರು ವಿಶಿಷ್ಟ ಸ್ಥಾನ ಹೊಂದಿದ್ದಾರೆ. ಸಾಮಾನ್ಯ ಕಾರ್ಯಕರ್ತನಾಗಿ ರಾಜಕೀಯ ಪ್ರವೇಶಿಸಿ, ಮುಖ್ಯಮಂತ್ರಿ ಹುದ್ದೆಯವರೆಗೆ ಏರಿದ ಅವರ ಜೀವನ ಎಲ್ಲರಿಗೂ ಮಾದರಿಯಾಗಿದೆ. ರೈತಪರ ಯೋಜನೆಗಳು, ನೀರಾವರಿ ಅಭಿವೃದ್ಧಿ, ಗ್ರಾಮೀಣ ಭಾಗಗಳ ಪ್ರಗತಿ ಹಾಗೂ ಬಡವರ ಕಲ್ಯಾಣಕ್ಕಾಗಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವರ ಆಡಳಿತಾವಧಿಯಲ್ಲಿ ಕರ್ನಾಟಕದ ಅಭಿವೃದ್ಧಿಗೆ ಹೊಸ ದಿಕ್ಕು ದೊರೆತಿದೆ. ಬಿಜೆಪಿ ಪಕ್ಷವನ್ನು ರಾಜ್ಯದ ಪ್ರತಿಯೊಂದು ಹಳ್ಳಿಗೂ ತಲುಪಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ.

‘ಬಿ.ಎಸ್.ವೈ. ಅಭಿಮಾನೊತ್ಸವ’ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲು ಪಕ್ಷದ ವತಿಯಿಂದ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಎಲ್ಲ ತಾಲೂಕುಗಳು ಹಾಗೂ ಗ್ರಾಮೀಣ ಭಾಗಗಳಿಂದ ಸಾವಿರಾರು ಕಾರ್ಯಕರ್ತರು, ಮುಖಂಡರು ಹಾಗೂ ಅಭಿಮಾನಿಗಳು ಭಾಗವಹಿಸಲಿದ್ದಾರೆ. ಕಾರ್ಯಕ್ರಮ ಯಶಸ್ವಿಗೊಳಿಸಲು ಈಗಾಗಲೇ ವ್ಯಾಪಕ ತಯಾರಿ ನಡೆಯುತ್ತಿದೆ. ಈ ಕಾರ್ಯಕ್ರಮದಲ್ಲಿ ಬಿಜೆಪಿ ಹಿರಿಯ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಯುವ ಕಾರ್ಯಕರ್ತರು ಭಾಗವಹಿಸಲಿದ್ದು, ಪಕ್ಷದ ಬಲವರ್ಧನೆ ಹಾಗೂ ಸಂಘಟನೆ ಕುರಿತು ವಿಶೇಷ ಚರ್ಚೆಗಳು ನಡೆಯಲಿವೆ. ಯಡಿಯೂರಪ್ಪ ಅವರು ಅಪಾರ ಅನುಭವ ಹೊಂದಿದ ನಾಯಕರು. ಅವರ ಮಾರ್ಗದರ್ಶನದಲ್ಲಿ ಪಕ್ಷ ಇನ್ನಷ್ಟು ಬಲಿಷ್ಠವಾಗುತ್ತಿದ್ದು, ಮುಂದಿನ ದಿನಗಳಲ್ಲಿ ಬಿಜೆಪಿ ಸಂಘಟಿತವಾಗಿ ಕಾರ್ಯನಿರ್ವಹಿಸಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ಪಕ್ಷದ ಮುಖಂಡರಾದ ಕೆ.ರಾಮಾಂಜಿನಿ, ಅಡವಿಸ್ವಾಮಿ, ಗುತ್ತಿಗನೂರು ವಿರೂಪಾಕ್ಷಗೌಡ ಸೇರಿದಂತೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸುದ್ದಿಗೋಷ್ಠಿಯಲ್ಲಿ ಇದ್ದರು.

## ಪಂಚರಾಜ್ಯ ಫಲಿತಾಂಶಕ್ಕೆ

# ಕೇಸರಿ ಪಡೆ ಫಿದಾ



ವೈ.ಎನ್.ಹೊಸಕೋಟೆ

ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿ ವಿಧಾನಸಭಾ ಚುನಾವಣೆಗಳಲ್ಲಿ ಭಾರತೀಯ ಜನತಾ ಪಕ್ಷದ ಸಾಧನೆಯನ್ನು ಸ್ವಾಗತಿಸಿ, ವೈ.ಎನ್.ಹೊಸಕೋಟೆಯ ಬಿಜೆಪಿ ಕಾರ್ಯಕರ್ತರು ಪಟ್ಟಣದ ಗಾಂಧೀಜಿ ವೃತ್ತದಲ್ಲಿ ಅದ್ದೂರಿ ವಿಜಯೋತ್ಸವ ಆಚರಿಸಿದರು.

ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯುವ ಮೂಲಕ ಬಿಜೆಪಿ ರಾಜಕೀಯ ಇತಿಹಾಸ ಸೃಷ್ಟಿಸಿದೆ ಎಂದು ಹರ್ಷ ವ್ಯಕ್ತಪಡಿಸಿದ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಪರ ಘೋಷಣೆಗಳನ್ನು ಕೂಗಿದರು.

ಪಟ್ಟಣದ ಪ್ರಮುಖ ಕೇಂದ್ರವಾದ ಗಾಂಧೀಜಿ ವೃತ್ತದಲ್ಲಿ ಜಮಾಯಿಸಿದ ನೂರಾರು ಕಾರ್ಯಕರ್ತರು, ನಾಯಕರ ಭಾವಚಿತ್ರ ಹಾಗೂ ಪಕ್ಷದ ಬಾವುಟಗಳನ್ನು ಹಿಡಿದು ಮೆರವಣಿಗೆ ನಡೆಸಿದರು. ಈ ಗೆಲುವು ಪಕ್ಷದ ಜನಪರ ಆಡಳಿತಕ್ಕೆ ಸಂದ ಜಯ ಎಂದು ಕಾರ್ಯಕರ್ತರು ಸಂಭ್ರಮಿಸಿದರು.

ಗೆಲುವಿನ ಖುಷಿಯಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಾರ್ವಜನಿಕರಿಗೆ ಸಿಹಿ ಹಂಚಿದರು. ವಿಜಯೋತ್ಸವದಲ್ಲಿ ಭಾಗವಹಿಸಿದ್ದ ಹಿರಿಯ ಮುಖಂಡರು ಮಾತನಾಡಿ, ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ದೇಶಾದ್ಯಂತ ಪಕ್ಷವು ಬಲಿಷ್ಠವಾಗಿ ಬೆಳೆಯುತ್ತಿದೆ. ಈ ರಾಜ್ಯಗಳ ಫಲಿತಾಂಶವು ಮುಂಬರುವ ದಿನಗಳಲ್ಲಿ ದೇಶದ ರಾಜಕೀಯ ದಿಕ್ಸೂಚಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಬಿಜೆಪಿಯ ಹಿರಿಯ ಮುಖಂಡರು, ನೂರಾರು ಯುವ ಕಾರ್ಯಕರ್ತರು ಹಾಗೂ ಪಕ್ಷದ ಪದಾಧಿಕಾರಿಗಳು ಭಾಗವಹಿಸಿ ವಿಜಯದ ಸಂಭ್ರಮವನ್ನು ಹಂಚಿಕೊಂಡರು.

# ಮಾಲೂರು ಶಿಕ್ಷಕರ ಸಂಘಕ್ಕೆ ಅವಿರೋಧ ಆಯ್ಕೆ: ಶಾಸಕರ ಸೂಚನೆಯಂತೆ ಒಮ್ಮತದ ನಾಮಪತ್ರ ಸಲ್ಲಿಕೆ

ಮಾಲೂರು

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಲೂರು ತಾಲ್ಲೂಕು ಘಟಕದ ವಿವಿಧ ಪದಾಧಿಕಾರಿಗಳ ಹುದ್ದೆಗಳಿಗೆ ಮಂಗಳವಾರ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಎಲ್ಲಾ 9 ಸ್ಥಾನಗಳಿಗೆ ತಲಾ ಒಂದೊಂದು ನಾಮಪತ್ರ ಸಲ್ಲಿಕೆಯಾಗುವ ಮೂಲಕ ಚುನಾವಣೆ ‘ಅವಿರೋಧ’ದ ಹಾದಿ ಹಿಡಿದಿದೆ.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಚುನಾವಣಾಧಿಕಾರಿ ವೀರಭದ್ರಾಚಾರ್ಯ ಅವರಿಗೆ ವಿವಿಧ ಹುದ್ದೆಗಳ ಆಕಾಂಕ್ಷಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು. 14 ಮಂದಿ ನಿರ್ದೇಶಕ ಸ್ಥಾನಗಳಿಗೆ ಈಗಾಗಲೇ ಚುನಾವಣೆ ನಡೆದಿದ್ದು, ಈ ಪೈಕಿ ಸಂಘದ ಆಡಳಿತ ಮಂಡಳಿಯ ಪದಾಧಿಕಾರಿಗಳ ಆಯ್ಕೆಗಾಗಿ ಮಂಗಳವಾರ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿತ್ತು.

ನೂತನ ಪದಾಧಿಕಾರಿಗಳ ವಿವರ:

ಅಧ್ಯಕ್ಷರು: ಸಿ.ಎಂ. ನಾರಾಯಣಸ್ವಾಮಿ

ಉಪಾಧ್ಯಕ್ಷರು: ಜಿ. ಮುನಿಯಪ್ಪ (ಸಾಮಾನ್ಯ), ವಿ. ಕಾಂತಮ್ಮ (ಮಹಿಳಾ ಮೀಸಲು)

ತಾಲ್ಲೂಕು ಪ್ರಧಾನ ಕಾರ್ಯದರ್ಶಿ: ರವಿಕುಮಾರ್ ಕೆ.



ಸಹ ಕಾರ್ಯದರ್ಶಿ: ಶಶಿಧರ

ಖಜಾಂಚಿ: ಸುರೇಶ್ ಎಚ್.ಇ.

ಸಂಘಟನಾ ಕಾರ್ಯದರ್ಶಿ: ಶ್ರೀನಾಥ್ ಪಿ.

ಮಹಿಳಾ ಸಂಘಟನಾ ಕಾರ್ಯದರ್ಶಿ: ಕೆ. ಚಂದ್ರಕಲಾ (ಟೇಕಲ್) ಹಾಗೂ ಲಕ್ಷ್ಮಿ ಎನ್.

ಒಗ್ಗಟ್ಟಿನ ಪ್ರದರ್ಶನ: ಈ ಸಂದರ್ಭದಲ್ಲಿ ಮಾತನಾಡಿದ ಭಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಎಂ. ಮುನಿನಾರಾಯಣ, “ಶಾಸಕ ಕೆ.ವೈ. ನಂಜೇಗೌಡ ಹಾಗೂ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ವಿ. ಮುನೇಗೌಡ ಅವರ ಮಾರ್ಗದರ್ಶನದಂತೆ ಎಲ್ಲಾ 14 ಮಂದಿ ನಿರ್ದೇಶಕರು ಒಮ್ಮತದ ತೀರ್ಮಾನ ಕೈಗೊಂಡಿದ್ದೇವೆ. ಯಾವುದೇ ಪೈಪೋಟಿ ಇಲ್ಲದೆ ಒಗ್ಗಟ್ಟಿನಿಂದ 9 ಹುದ್ದೆಗಳಿಗೆ 9 ನಾಮಪತ್ರಗಳನ್ನು ಸಲ್ಲಿಸಲಾಗಿದೆ. ಕೇವಲ ಅಧಿಕೃತ ಘೋಷಣೆಯಷ್ಟೇ ಬಾಕಿ ಇದೆ” ಎಂದು ತಿಳಿಸಿದರು.

ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಲು ಕರೆ: ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದ ಹಿರಿಯ ಮುಖಂಡರು, ಸಂಘವು ಶಿಕ್ಷಕರ ಸಮಸ್ಯೆಗಳಿಗೆ ಕಾಲಕಾಲಕ್ಕೆ ಸ್ಪಂದಿಸಬೇಕು. ಇಲಾಖೆಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಸಂಘವನ್ನು ಕ್ರಿಯಾಶೀಲವಾಗಿ ಮುನ್ನಡೆಸಬೇಕು ಎಂದು ಆಶಿಸಿದರು.

ಮೇ 5 ರಂದು ನಾಮಪತ್ರ ಹಿಂಪಡೆಯಲು ಅವಕಾಶವಿದ್ದು, ಇದೇ 6ರಂದು ಚುನಾವಣಾಧಿಕಾರಿಗಳು ಅಧಿಕೃತವಾಗಿ ಫಲಿತಾಂಶ ಪ್ರಕಟಿಸಲಿದ್ದಾರೆ. ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಮುಖಂಡರಾದ ನಂದೀಶ್, ನಾಗರಾಜ್, ಎಂ. ರವಿ, ವೆಂಕಟೇಶ್ ಗೌಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 12ಕ್ಕೆ ಗಂಗಾತಾಯಿ ಜಾತ್ರಾ ಮಹೋತ್ಸವ

ವಿಜಯಪುರ

ಪಟ್ಟಣದ ಗ್ರಾಮದೇವತೆ ಗಂಗಾತಾಯಿ ದೇವಾಲಯದಲ್ಲಿ ಮೇ. 12ರಂದು ನಡೆಯಲಿರುವ 56ನೇ ವರ್ಷದ ಜಾತ್ರಾಮಹೋತ್ಸವದ ಹಿನ್ನೆಲೆಯಲ್ಲಿ ಮಂಗಳವಾರ ಗಂಗಾತಾಯಿ ದೇವಾಲಯದಲ್ಲಿ ಸಾಟಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಗಂಗಾದೇವಿ ದೇವಾಲಯದಲ್ಲಿ ಪ್ರಥಮ ದಿನದ ಪೂಜಾ ಕಾರ್ಯಕ್ರಮಗಳನ್ನು ನೆರವೇರಿಸಿದ ನಂತರ ಸಾಟಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಪುರಸಭೆ ಸದಸ್ಯ ಎಂ.ಸತೀಶ್ ಕುಮಾರ್ ಅವರು, ಪಟ್ಟಣದಲ್ಲಿ ಸಾಂಪ್ರದಾಯಿಕವಾಗಿ ನಡೆದುಕೊಂಡು ಬಂದಿರುವ, ಜಾತ್ರಾಮಹೋತ್ಸವದ ಆಚರಣೆಯಲ್ಲಿ, ಜಾತಿ, ಧರ್ಮದ ಹಂಗಿಲ್ಲದೆ, ಎಲ್ಲಾ ಸಮುದಾಯಗಳವರು ಭಾಗವಹಿಸುವುದು ಒಂದು ವಿಶೇಷ. ನಾವೆಲ್ಲರೂ ಒಂದೇ ಎನ್ನುವುದನ್ನು ಇದು ಸೂಚಿಸುತ್ತದೆ. ಇಂತಹ ಆಚರಣೆಗಳು ನಮ್ಮ ಧರ್ಮ ಮತ್ತು ಸಂಸ್ಕೃತಿಗೆ ಪ್ರತಿಬಿಂಬವಾಗಿವೆ ಎಂದರು.

ಜಾತ್ರಾ ಕಮಿಟಿಯ ಸದಸ್ಯ ಸಂಪತ್ ಕುಮಾರ್ ಮಾತನಾಡಿ, ಅನಾದಿಕಾಲದಿಂದಲೂ ಪ್ರತಿವರ್ಷದಂತೆ ಈ ವರ್ಷವೂ ಜಾತ್ರೆಯನ್ನು ಆಯೋಜನೆ ಮಾಡಲಾಗಿದ್ದು, ಪ್ರತಿದಿನವೂ ಒಂದೊಂದು ಕಾರ್ಯಕ್ರಮವನ್ನು ಆಯೋಜನೆಗೊಳಿಸಲಾಗಿದೆ. ಪಟ್ಟಣದಲ್ಲಿನ ಪ್ರತಿಯೊಂದು ಕುಟುಂಬದವರು, ಗ್ರಾಮದ ಹಬ್ಬದಲ್ಲಿ ಪಾಲ್ಗೊಳ್ಳಬೇಕು. ಇಂತಹ ಆಚರಣೆಗಳು ಗ್ರಾಮದ ಒಳಿತಿಗೆ ಪೂರಕವಾಗಿವೆ. ಇದನ್ನು ಶ್ರದ್ಧಾಭಕ್ತಿಯಿಂದ ಆಚರಣೆ ಮಾಡುವುದರಿಂದ ಪಟ್ಟಣದಲ್ಲಿ ಶಾಂತಿ ನೆಲೆಸಲಿದೆ ಎಂದರು.

ಗಂಗಾಮತಸ್ಥರ ಸಂಘದ ಅಧ್ಯಕ್ಷ ಉಪೇಂದ್ರಕುಮಾರ್ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ಸಹಾ ಅನ್ನದಾನ ಕಮಿಟಿಯಿಂದ 5 ಸಾವಿರ ಮಂದಿಗೆ ಅನ್ನದಾನದ ವ್ಯವಸ್ಥೆ ಮಾಡಿದ್ದೇವೆ. ಜಾತ್ರೆಗೆ ಬರುವ ಸಾವಿರಾರು ಮಂದಿ ಭಕ್ತರಿಗೆ ಯಾವ ತೊಂದರೆ ಆಗದಂತೆ ಅಗತ್ಯವಾಗಿರುವ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದೇವೆ. ಪಟ್ಟಣ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳಿಂದಲೂ ಭಕ್ತರು ಬಂದು ದೀಪಗಳನ್ನು ಬೆಳಗಿ ಹೋಗುತ್ತಾರೆ ಎಂದರು.

ಮುಖಂಡರಾದ ನಾಗರಾಜ್, ನಾರಾಯಣಸ್ವಾಮಿ, ರುದ್ರಮೂರ್ತಿ, ಮಾಜಿ ಪುರಸಭೆ ಅಧ್ಯಕ್ಷೆ ಅನ್ನಪೂರ್ಣಮ್ಮ, ಕೆ.ಎಂ. ಮಹೇಶ್ ಮಧು, ಕೆ.ಮುನಿರಾಜು, ನವೀನ್ ಕುಮಾರ್, ವಿಶ್ವನಾಥ್, ಮುನಿಆಂಜಿನಪ್ಪ ಮುಂತಾದವರು ಹಾಜರಿದ್ದರು.

# ಆಲಿಕಲ್ಲು ಮಳೆ ಹೊಡೆತಕ್ಕೆ ನೆಲಕಚ್ಚಿದ ಬೆಳೆ; ರೈತರು ಕಂಗಾಲು

ಬೇತಮಂಗಲ

ಶುಕ್ರವಾರ ರಾತ್ರಿ ಸಂಭವಿಸಿದ ಭೀಕರ ಬಿರುಗಾಳಿ ಹಾಗೂ ಅಲಿಕಲ್ಲು ಮಳೆಗೆ ಬೇತಮಂಗಲ ಹೋಬಳಿಯ ಸುಮಾರು 600 ಎಕರೆಗೂ ಅಧಿಕ ಪ್ರದೇಶದಲ್ಲಿ ಬೆಳೆದಿದ್ದ ಮಾವು ಹಾಗೂ ಬಾಳೆ ಬೆಳೆಗಳು ಸಂಪೂರ್ಣ ನಾಶವಾಗಿವೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿರುವ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕಣ್ಣೀರು ಹಾಕುತ್ತಿದ್ದಾರೆ.

ಹೋಬಳಿಯ ಕರಡಗೂರು, ಮಜರರೆಡ್ಡಿಹಳ್ಳಿ, ನಕ್ಕನಹಳ್ಳಿ, ಚಿಂಚಾಂಡ್ಲಾಹಳ್ಳಿ, ಏತೂರು, ಮರವೂರು, ಕೆಸಿರೆಡ್ಡಿಗಾಂಡ್ಲಹಳ್ಳಿ ಹಾಗೂ ಕಣ್ಣೂರು ಐವಾರಹಳ್ಳಿ ಗ್ರಾಮಗಳಲ್ಲಿ ಮಳೆಯ ಆರ್ಭಟಕ್ಕೆ ಬೆಳೆಗಳು ಮಣ್ಣು ಪಾಲಾಗಿವೆ.

ಬೆಳೆ ಹಾನಿಯ ಸುದ್ದಿ ತಿಳಿಯುತ್ತಿದ್ದಂತೆಯೇ ಸಮಾಜ ಸೇವಕ ಹಾಗೂ ಆರ್‌ಕೆ ಫೌಂಡೇಶನ್‌ನ ಮೋಹನ್ ಕೃಷ್ಣ ಅವರು ಬಾಧಿತ ಗ್ರಾಮಗಳಿಗೆ ಭೇಟಿ ನೀಡಿ ಹಾನಿಯನ್ನು ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಅವರು, “ರೈತ ಈ ದೇಶದ ಬೆನ್ನೆಲುಬು. ಆದರೆ ಪ್ರಕೃತಿಯ ವಿಕೋಪದಿಂದ ಇಂದು 600 ಎಕರೆ ಮಾವು ಹಾಗೂ ಬಾಳೆ ತೋಟಗಳು ನಾಶವಾಗಿವೆ. ಸರ್ಕಾರ ತಕ್ಷಣ ಎಚ್ಚೆತ್ತುಕೊಂಡು ಕಂದಾಯ ಮತ್ತು ಕೃಷಿ ಇಲಾಖೆ



ಅಧಿಕಾರಿಗಳ ಮೂಲಕ ಸಮೀಕ್ಷೆ ನಡೆಸಿ, ಸಂಕಷ್ಟದಲ್ಲಿರುವ ಪ್ರತಿ ರೈತನಿಗೂ ಸೂಕ್ತ ಪರಿಹಾರ ನೀಡಬೇಕು,” ಎಂದು ಒತ್ತಾಯಿಸಿದರು.

ಇದೇ ವೇಳೆ ಸ್ಥಳೀಯ ಶಾಸಕರ ವಿರುದ್ಧ ಕಿಡಿಕಾರಿದ ಅವರು, “ರೈತರ ಬಗ್ಗೆ ಮಾತನಾಡುವವರು ನಿಮ್ಮ ವೈಯಕ್ತಿಕವಾಗಿ ರೈತರಿಗೆ ತಲಾ 2 ಲಕ್ಷ ರೂ. ನೆರವು ನೀಡಬಾರದೇಕೆ?” ಎಂದು ಪ್ರಶ್ನಿಸಿದರು. ಇದೇ ವೇಳೆ ಅವರು ಸಂಸದ ಮಲ್ಲೇಶ್ ಬಾಬು ಅವರೊಂದಿಗೆ ದೂರವಾಣಿ ಮೂಲಕ ಚರ್ಚಿಸಿದ್ದು, ಸಂಸದರು ಅಧಿಕಾರಿಗಳೊಂದಿಗೆ ಮಾತನಾಡಿ ಶೀಘ್ರವೇ ಪರಿಹಾರ ಒದಗಿಸುವ ಭರವಸೆ ನೀಡಿದ್ದಾರೆ ಎಂದರು.

“ನಷ್ಟಕ್ಕೊಳಗಾದ ರೈತರಿಗೆ ಆರ್‌ಕೆ ಫೌಂಡೇಶನ್ ವತಿಯಿಂದಲೂ ವೈಯಕ್ತಿಕ ನೆರವು ನೀಡಲಾಗುವುದು. ಆದರೆ ಸರ್ಕಾರ ಒಂದು ವಾರದೊಳಗೆ ಬಾಳೆ ಬೆಳೆಗಾರರಿಗೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಬೇಕು. ಇಲ್ಲವಾದಲ್ಲಿ ರೈತಪರ ಸಂಘಟನೆಗಳೊಂದಿಗೆ ಸೇರಿ ಬೃಹತ್ ಪ್ರತಿಭಟನೆ ನಡೆಸಲಾಗುವುದು,” ಎಂದು ಮೋಹನ್ ಕೃಷ್ಣ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಕಷ್ಟಕ್ಕೀಡಾದ ನೂರಾರು ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕೆಜಿಎಫ್ ಪೊಲೀಸರಿಂದ ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಜಾರಿ

ಕೆ.ಜಿ.ಎಫ್

ಜಿಲ್ಲೆಯಲ್ಲಿ ಮನೆ ಕಳ್ಳತನಗಳನ್ನು ತಡೆಯಲು ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಅನ್ನು ಕೆ.ಜಿ.ಎಫ್. ಪೊಲೀಸ್ ಇಲಾಖೆ ಇಂದಿನಿಂದ ಜಾರಿಗೊಳಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಜಿಲ್ಲಾ ಪೊಲೀಸ್ ಕಛೇರಿ, ಕೋಲಾರ ಚಿನ್ನದಗಣಿ ಪ್ರದೇಶದಲ್ಲಿ ಎಲ್.ಬಿ.ಎಚ್.ಎಸ್ ಉಪಕ್ರಮದ ಅನುಷ್ಠಾನ ಮಾಡಲು ಇಲಾಖೆಯು ಸನ್ನದ್ಧವಾಗಿದೆ. ಇದು ಆಸ್ತಿ ಸಂಬಂಧಿತ ಅಪರಾಧಗಳನ್ನು ತಡೆಯಲು ಗಮನಾರ್ಹ ಸಾಧನವಾಗಿದ್ದು, ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಅಡಿ ಬೀಗ ಹಾಕಿದ ಮನೆಗಳಲ್ಲಿ ಕಳ್ಳತನ ಆಗದಂತೆ ತಡೆಗಟ್ಟುವುದು, ರಾತ್ರಿ ಗಸ್ತುಗಳನ್ನು ಹೆಚ್ಚು ಪರಿಣಾಮಕಾರಿಯಾಗಿಸುವುದು. ಅಪರಾಧ ತಡೆಗಟ್ಟುವಿಕೆಯಲ್ಲಿ ನಾಗರಿಕರ ಸಹಕಾರವನ್ನು ಹೆಚ್ಚಿಸುವುದು. ನೈಜ–ಸಮಯದ ಮಾಹಿತಿಯ ಆಧಾರದ ಮೇಲೆ ಉದ್ದೇಶಿತ ಕಣ್ಗಾವಲು ಇಟ್ಟುಕೊಳ್ಳುವುದಾಗಿದೆ.

ಈ ವ್ಯವಸ್ಥೆಯ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಈಗಾಗಲೇ ಕೆ.ಜಿ.ಎಫ್.ನ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಲಾಗಿದೆ. ನಾಗರಿಕರು ತಮ್ಮ ನಿವಾಸಗಳಿಂದ ತಾತ್ಕಾಲಿಕವಾಗಿ ಹೊರ ಹೋಗುವ ಸಂದರ್ಭಗಳಲ್ಲಿ ಸ್ವಯಂಪ್ರೇರಣೆಯಿಂದ ಪೊಲೀಸರಿಗೆ ಮಾಹಿತಿ ತಿಳಿಸಬೇಕು. ಅಂತಹ ವೇಳೆಯಲ್ಲಿ ಪೊಲೀಸರು ಬೀಗ ಹಾಕಿದ ಮನೆಗಳ ಮೇಲೆ ಕೇಂದ್ರೀಕೃತವಾದ ಕಣ್ಗಾವಲು ಇಡಲು ಅನುಕೂಲವಾಗುತ್ತದೆ. ಪೊಲೀಸರು ಇ–ಬೀಟ್ ವ್ಯವಸ್ಥೆಯನ್ನು ಬಳಸಿಕೊಂಡು ಠಾಣಾ ವ್ಯಾಪ್ತಿಯಲ್ಲಿನ ಬೀಗ ಹಾಕಿದ ಮನೆಗಳ ಕಡೆ ವ್ಯವಸ್ಥಿತ ಗಸ್ತು ನಡೆಸುವ ಮೂಲಕ, ಈ ಉಪಕ್ರಮವು ಮಾಲೀಕರಿಲ್ಲದ ಸಂದರ್ಭಗಳನ್ನು ಉಪಯೋಗಿಸಿಕೊಂಡು ಮಾಡಬಹುದಾದ ಕನ್ನ ಕಳವು ಅಪರಾಧಗಳನ್ನು ತಡೆದು ಮನೆಗಳಿಗೆ ಮಾಲೀಕರು ಹಿಂತಿರುಗುವವರೆಗೆ ಸುರಕ್ಷತೆಯನ್ನು ಒದಗಿಸುತ್ತದೆ.

ಲಾಕ್ಡ್ ಹೌಸ್ ಬೀಟ್ ಸಿಸ್ಟಮ್‌ಗೆ ನೋಡಲ್ ಅಧಿಕಾರಿಯನ್ನು ನೇಮಿಸಿದ್ದು, ಸಾರ್ವಜನಿಕರು ಈ ವ್ಯವಸ್ಥೆಯನ್ನು ಉಪಯೋಗಿಸಿಕೊಳ್ಳಲು ವಾಟ್ಸಪ್ ಮೊಬೈಲ್ ನಂ: 8277963743 ಅನ್ನು ಸಂರ್ಕಿಸಿ ತಮ್ಮ ಹೆಸರು, ವಿಳಾಸ, ಗೂಗಲ್ ಲೊಕೇಶನ್, ಮನೆಯಿಂದ ಹೊರ ಹೋಗಿ ಹಿಂತಿರುಗುವ ಅವಧಿ ಹಾಗೂ ಮೊಬೈಲ್ ಸಂಖ್ಯೆಯ ಮಾಹಿತಿ ನೀಡಬೇಕು. ಮೊಬೈಲ್ ಸಂಖ್ಯೆಯ ಜೊತೆಗೆ ಜಿಲ್ಲಾ ನಿಯಂತ್ರಣ ಕೊಠಡಿಯ ಮೊಬೈಲ್ ಸಂಖ್ಯೆ 9480802700 ನ್ನು ಸಂರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದು. ಈ ವ್ಯವಸ್ಥೆಯನ್ನು ಬಳಸಿಕೊಳ್ಳುವ ನಾಗರಿಕರ ಮಾಹಿತಿಯನ್ನು ಗೌಪ್ಯವಾಗಿಡಲಾಗುತ್ತದೆ ಎಂದು ಕೆ.ಜಿ.ಎಫ್. ಪೊಲೀಸ್ ಇಲಾಖೆ ತಿಳಿಸಿದೆ.

# ‘ಹಳ್ಳಿ ಜನರ ಪ್ರೋತ್ಸಾಹದಿಂದ ಜನಪದ ಕಲೆ ಜೀವಂತ’

ಬಳ್ಳಾರಿ

ಹಳ್ಳಿಯ ಜನರ ಪ್ರೋತ್ಸಾಹ, ಸಹಕಾರದಿಂದಲೇ ಇಂದಿಗೂ ಜನಪದ ಕಲೆ, ಸಂಸ್ಕೃತಿ ಜೀವಂತವಾಗಿ ಉಳಿಯಲು ಕಾರಣವಾಗಿದೆ. ಕಲೆಗಳ ಮೇಲಿನ ಅಭಿಮಾನ ಕಲಾವಿದರನ್ನು ಹುಟ್ಟುಹಾಕುವ, ಬೆಳೆಸುವ ಗುಣ ಇಂದಿಗೂ ಹಳ್ಳಿ ಜನರಲ್ಲಿದೆ. ಅವರಿಂದಾಗಿ ಉತ್ಸಾಹದಿಂದಲೇ ನಿರಂತರವಾಗಿ ಇಂತಹ ಸಂಸ್ಕೃತಿ ಕಾರ್ಯಕ್ರಮಗಳು ಜರುಗುತ್ತಿವೆ ಎಂದು ಕೆ.ಎಸ್. ಗಾದಿಲಿಂಗಪ್ಪ ಹೇಳಿದರು.

ತಾಲೂಕಿನ ಹಲಕುಂದಿ ಗ್ರಾಮದಲ್ಲಿ ಶ್ರೀ ಮಾರುತಿ ತೊಗಲುಗೊಂಬೆ ಕಲಾ ಟ್ರಸ್ಟ್ ಬಳ್ಳಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ವಿಶೇಷ ಘಟಕ ಯೋಜನೆಡಿಯಲ್ಲಿ ಹಮ್ಮಿಕೊಂಡ ಗ್ರಾಮೀಣ ಸಾಂಸ್ಕೃತಿಕ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮದ ಶ್ರೀ ಈಶ್ವರ ದೇವಸ್ಥಾನ ಆವರಣದ ಬಯಲು ರಂಗ ಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಳ್ಳಾರಿಯ ಸಹಾಯಕ ನಿರ್ದೇಶಕ ಬಿ ನಾಗರಾಜ್, ಪ್ರತಿ ವರ್ಷ ಗ್ರಾಮೀಣ ಭಾಗದ ಕಲೆ ಸಂಸ್ಕೃತಿ ಸಾಹಿತ್ಯ ಹಾಗೂ ಎಲ್ಲಾ ಕಲಾಪ್ರಕಾರಗಳನ್ನು ಉಳಿಸುವ ಬೆಳೆಸುವ ನಿಟ್ಟಿನಲ್ಲಿ ಇಲಾಖೆಯು ಪ್ರತಿವರ್ಷ ಸಾಮಾನ್ಯ, ವಿಶೇಷ ಘಟಕ, ಗಿರಿಜನ ಯೋಜನೆ ಅಡಿಯಲ್ಲಿ ಸಂಘ ಸಂಸ್ಥೆಗಳಿಗೆ ಧನ ಸಹಾಯ ನೀಡುತ್ತಿದೆ. ಇದರಿಂದ ಸಂಘ ಸಂಸ್ಥೆಗಳನ್ನು ಪ್ರೋತ್ಸಾಹಿಸುತ್ತಾ ಕಲೆ ಸಂಸ್ಕೃತಿ ಬೆಳವಣಿಗೆಗೆ ಸಹಕಾರವಾಗಲಿವೆ ಎಂದರು.

ಬಳ್ಳಾರಿ ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಯಲ್ಲನ ಗೌಡ ಶಂಕರ್‌ಬಂಡೆ, ಕಲೆ ಜನಪದ ಈ ನೆಲದ ಮೂಲ ಕಲೆಗಳಾಗಿವೆ. ಇವುಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಎಲ್ಲರಲ್ಲೂ ಒಂದಲ್ಲ ಒಂದು ರೀತಿಯ ಕಲೆ ಇರುತ್ತದೆ. ಅದನ್ನು ಸೂಕ್ತ ಸಮಯದಲ್ಲಿ ಗುರುತಿಸಿ ಪ್ರೋತ್ಸಾಹಿಸಿದಾಗ ಮಾತ್ರ ಒಳ್ಳೆ ಸಾಹಿತಿ, ಕಲಾವಿದ, ಸಂಗೀತಗಾರ, ಚಿತ್ರಕಲಾಕರ, ನಾಟಕಕಾರ ಉದಯಿಸಲು ಸಾಧ್ಯ. ಪೋಷಕರು ಮತ್ತು ಸಮಾಜದ ಜವಾಬ್ದಾರಿ ಇದ್ದು ಎಲ್ಲರೂ ಕಲೆ ಬಗ್ಗೆ ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸುವ ಕೆಲಸ ಮಾಡಬೇಕು. ಇದರಿಂದ ಮಕ್ಕಳು ಶೈಕ್ಷಣಿಕ ಜೊತೆಗೆ ಸಾಂಸ್ಕೃತಿಕವಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೆಚ್. ತಿಮ್ಮನಗೌಡ ವಹಿಸಿದ್ದರೆ, ಮುಖ್ಯ ಅತಿಥಿಗಳಾಗಿ ಎಚ್.ಆರ್ ಮಲ್ಲಿಕಾರ್ಜುನಗೌಡ, ಭೀಮರೆಡ್ಡಿ, ಚಂದ್ರಶೇಖರ್, ಕೇಶವ, ಪಿ.ಗವಿಸಿದ್ದಪ್ಪ, ಬಿ.ಎಂ ಪಾಟೀಲ್, ಯಲ್ಲಪ್ಪ ನಾಯಕ, ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪುರಸ್ಕೃತ ಎಸ್. ಕೆ. ಜಿಲಾನಿ ಭಾಷಾ, ಬಯಲಾಟ ಅಕಾಡೆಮಿ ಮಾಜಿ ಸದಸ್ಯ ಹೆಚ್.ತಿಪ್ಪೇಸ್ವಾಮಿ ಹಾಗೂ ಊರಿನ ಹಿರಿಯ ಮುಖಂಡರು ಗ್ರಾಮ ಪಂಚಾಯತ್ ಮಾಜಿ ಸದಸ್ಯರು ಭಾಗವಹಿಸಿದ್ದರು.

ವೇದಿಕೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜನಪದ ಗಾಯನ ಎಚ್.ಜಿ.ಸುಂಕಪ್ಪ ಎರಗುಡಿ ತಂಡ, ಸಮೂಹ ನೃತ್ಯ ಕುಮಾರಿ ಹೆಚ್. ಜೆ. ಸುಶ್ಮಿತಾ ಬಳ್ಳಾರಿ ತಂಡ, ಸುಗಮ ಸಂಗೀತ ದಳವಾಯಿ ಅಂಬಣ್ಣ ಸಿರುಗುಪ್ಪ ತಂಡ. ರಂಗಗೀತೆ ಅನ್ನಪೂರ್ಣ ಬಳ್ಳಾರಿ ತಂಡ ಮತ್ತು ಹಾಸ್ಯ ನಗೆ ನಾಟಕ ಹೆಚ್.ಹನುಮಂತಪ್ಪ ತಂಡದಿಂದ ದನ ಕಾಯೋರ ದೊಡ್ಡಾಟ ಎಂಬ ನಗೆ ನಾಟಕವು ನೆರೆದಿದ್ದ ಪ್ರೇಕ್ಷಕರನ್ನು ಹೊಟ್ಟೆ ಹುಣ್ಣಾಗಿಸುವಂತೆ ಮನರಂಜಿಸಿದವು.

ಶ್ರೀ ಮಾರುತಿ ತೊಗಲು ಗೊಂಬೆ ಕಲಾ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಸುಬ್ಬಣ್ಣ ನಿರ್ವಹಿಸಿದರೆ, ವೀರೇಶ್ ದಳವಾಯಿ ನಿರೂಪಿಸಿ, ಕಾರ್ಯಕ್ರಮ ನಡೆಸಿಕೊಟ್ಟರು.





ಸಚಿವ ಜಮೀರ್ ಅಹಮದ್ ಖಾನ್ ಅವರು ಕೇರಳದ ಮಲಪ್ಪುರಂನಲ್ಲಿ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಅಧ್ಯಕ್ಷರಾದ ಪಾಣಕ್ಕಾಡ್ ಸಾದಿಕ್ ಅಲಿ ಶಿಹಾಬ್ ತಂಗಲ್, ಪಿ.ಕೆ.ಕುನ್ಹಾಲಿಕುಟ್ಟಿ ಹಾಗೂ ಮುಸ್ಲಿಂ ಲೀಗ್ ಶಾಸಕರೊಂದಿಗೆ ಸಮಾಲೋಚನೆ ನಡೆಸಿದರು. ಮೌಲಾನಾ ಶಾಫಿ ಸಾದಿ, ನೌಫಲ್, ವಖ್ಫ್ ಬೋರ್ಡ್ ಮಾಜಿ ಅಧ್ಯಕ್ಷ ಅನ್ವರ್ ಬಾಷಾ, ಮುಖಂಡರಾದ ದೀಪಕ್ ಚಿಂಚೋರೆ ಉಪಸ್ಥಿತರಿದ್ದರು.

# ಪ್ಯಾಲಿಯೇಟಿವ್ ಕೇರ್ ಹೊಸ ಘಟಕಕ್ಕೆ ಚಾಲನೆ

ಬೆಂಗಳೂರು

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ಸರನಂ ಇಂಡಿಯಾ ಸಂಸ್ಥೆಯ ಸಹಯೋಗದೊಂದಿಗೆ ಮಲ್ಲೇಶ್ವರಂನ ಕೆ ಸಿ ಜನರಲ್ ಆಸ್ಪತ್ರೆಯಲ್ಲಿ ಪ್ಯಾಲಿಯೇಟಿವ್ ಕೇರ್ ಘಟಕವನ್ನು ಉದ್ಘಾಟಿಸಿದರು. ಈ ವೇಳೆ ರಾಜ್ಯಾದ್ಯಂತ ಇಂತಹ ಕೇಂದ್ರಗಳನ್ನು ವಿಸ್ತರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ತಿಳಿಸಿದರು.

ಪ್ಯಾಲಿಯೇಟಿವ್ ಕೇರ್ ಎಂದರೆ ಚಿಕಿತ್ಸೆ ನೀಡುವ ಕೇಂದ್ರವಲ್ಲ, ಚಿಕಿತ್ಸೆಗೆ ಸ್ಪಂದಿಸದ ಹಂತದಲ್ಲಿರುವ ರೋಗಿಗಳ ದೈಹಿಕ ನೋವು ಹಾಗೂ ಮಾನಸಿಕ ಒತ್ತಡವನ್ನು ಕಡಿಮೆ ಮಾಡುವ ಸೇವೆಯಾಗಿದ್ದು, ರೋಗಿಗಳು



ಮತ್ತು ಅವರ ಕುಟುಂಬದವರಿಗೆ ಇದು ಮಹತ್ವದ ನೆರವಾಗಲಿದೆ. ವಿಶೇಷವಾಗಿ ಕ್ಯಾನ್ಸರ್, ಮೂತ್ರಪಿಂಡ ವೈಫಲ್ಯ ಸೇರಿದಂತೆ ಇತರ ತೀವ್ರ ಕಾಯಿಲೆಗಳಿಂದ ಬಳಲುತ್ತಿರುವ ಅಂತಿಮ ಹಂತದ ರೋಗಿಗಳಿಗೆ ಇದು ಉಪಯುಕ್ತವಾಗಿದೆ.

ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಪ್ರಾಥಮಿಕವಾಗಿ ಐದು ಹಾಸಿಗೆಗಳ ವಿಶೇಷ ವಾರ್ಡ್ ನಿರ್ಮಿಸಲಾಗಿದ್ದು, ತೀವ್ರ ನೋವು, ಉಸಿರಾಟ ತೊಂದರೆ, ನರ ಸಂಬಂಧಿತ ಕಾಯಿಲೆಗಳು ಹಾಗೂ ಮಾನಸಿಕ ಅಸ್ವಸ್ಥತೆಯಿಂದ ಬಳಲುವ ರೋಗಿಗಳಿಗೆ ಸಮರ್ಪಿತ ಆರೈಕೆ ಒದಗಿಸಲಾಗುತ್ತದೆ. ಜೊತೆಗೆ ರೋಗಿಗಳ ಕುಟುಂಬದವರಿಗೆ ಅಗತ್ಯವಾದ ತರಬೇತಿಯನ್ನೂ ನೀಡಲಾಗುತ್ತದೆ.

ಈ ಘಟಕದಲ್ಲಿ ಹೊರರೋಗಿ ವಿಭಾಗ, ದಿನಕಾಲ ಆರೈಕೆ ಸೇವೆಗಳು, ಸುಸಜ್ಜಿತ ಒಳರೋಗಿ ವಿಭಾಗ ಮತ್ತು ಆಸ್ಪತ್ರೆಯಿಂದ ಐದು ರಿಂದ ಎಂಟು ಕಿಲೋಮೀಟರ್ ವ್ಯಾಪ್ತಿಯಲ್ಲಿ ಮನೆಗೆ ತೆರಳಿ ಆರೈಕೆ ನೀಡುವ ಮೊಬೈಲ್ ಘಟಕವೂ ಇರಲಿದೆ.

ಮಾನವೀಯತೆ ಆಧಾರಿತ ಈ ಸೇವೆಯನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಚಿವರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿಗಳು ಹಾಗೂ ಸರನಂ ಇಂಡಿಯಾ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಶೃಂಗೇರಿ ಮರುಎಣಿಕೆ ಮತಗಳನ್ನು ತಿದ್ದಲಾಗಿದೆ: ಡಿಸಿಎಂ

ಬೆಂಗಳೂರು

"ಶೃಂಗೇರಿ ಕ್ಷೇತ್ರದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಬಿದ್ದಿರುವ ಅಂಚೆ ಮತಗಳನ್ನು ತಿದ್ದುವ ಮೂಲಕ ಮರುಎಣಿಕೆಯಲ್ಲಿ ಅಸಿಂಧುಗೊಳಿಸಲಾಗಿದೆ. ಇಡೀ ದೇಶದಲ್ಲಿ ಇಂತಹ ಅಪರಾಧ ನಡೆದಿಲ್ಲ. ಇದರ ವಿರುದ್ಧ ಕಾನೂನು ಹೋರಾಟ ಮಾಡುತ್ತೇವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಸಿಎಂ ಗೃಹಕಚೇರಿ ಕೃಷ್ಣಾದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು.

ಶೃಂಗೇರಿ ಕ್ಷೇತ್ರದ ಮರುಎಣಿಕೆಯ ಬಗ್ಗೆ ಕೇಳಿದಾಗ, "ಚುನಾವಣೆ ಮತ ಎಣಿಕೆ ಸಮಯದಲ್ಲಿ ಪ್ರತಿ ಅಂಚೆ ಮತವನ್ನು ತೆರೆದು ಎರಡೂ ಪಕ್ಷಗಳ ಏಜೆಂಟರು ಹಾಗೂ ಅಧಿಕಾರಿಗಳಿಗೆ ತೋರಿಸಿ ಅದನ್ನು ಮಾನ್ಯ ಮಾಡಿ ಎಣಿಕೆ ಮಾಡಲಾಗಿರುತ್ತದೆ. ಈ ರೀತಿ ಮತ ಎಣಿಕೆ ಮಾಡಿದ ಬಳಿಕ ಬಿಜೆಪಿ ಅಭ್ಯರ್ಥಿ ಅಧಿಕಾರಿಗಳನ್ನು ದುರ್ಬಳಕೆ ಮಾಡಿಕೊಂಡು ಅಂಚೆ ಮತಗಳನ್ನು ತಿದ್ದಲಾಗಿದೆ. ಹೀಗಾಗಿಯೇ ಅವರು



ನಿರ್ದಿಷ್ಟ ಮತಗಳ ಬಂಡಲ್ ಅನ್ನೇ ಮರು ಎಣಿಕೆ ಮಾಡಿ ಎಂದು ಪಟ್ಟು ಹಿಡಿದಿದ್ದರು. ಅಧಿಕಾರಿಗಳು ಹಾಗೂ ಬಿಜೆಪಿ ಅಭ್ಯರ್ಥಿ ಈ ಅಕ್ರಮದಲ್ಲಿ ಭಾಗಿಯಾಗಿದ್ದು, ಗಂಭೀರವಾದ ತನಿಖೆ ನಡೆಯಬೇಕಿದೆ. ಚುನಾವಣಾ ಆಯೋಗವು ಈ ವಿಚಾರದಲ್ಲಿ ನ್ಯಾಯ ಒದಗಿಸಬೇಕಿದೆ.

ಇದು ದೇಶದಲ್ಲೇ ಅತಿ ದೊಡ್ಡ ಷಡ್ಯಂತ್ರವಾಗಿದೆ.

ಕರ್ನಾಟಕದಲ್ಲಿ ಬಿಜೆಪಿ ಇಂತಹ ಕೆಲಸದಲ್ಲಿ ಭಾಗಿಯಾಗಿದ್ದು, ನಾವು ಕಾನೂನಾತ್ಮಕ ಹೋರಾಟ ಮಾಡುತ್ತೇವೆ. ರಾಜಕೀಯ ಹೇಗೆ ಮಾಡಬೇಕು ಎಂದು ನಮಗೆ ಗೊತ್ತಿದೆ" ಎಂದು ಕಿಡಿಕಾರಿದರು.

# 'ಪ್ರಜಾಪ್ರಭುತ್ವ ಅಪಾಯದಲ್ಲಿದೆ'

ಬೆಂಗಳೂರು

"ಬಿಜೆಪಿಯ ಕೇಂದ್ರ ಸರ್ಕಾರ ಚುನಾವಣೆಗಳಲ್ಲಿ ತನ್ನ ಅಧಿಕಾರದ ಮೂಲಕ ರಾಜಕೀಯ ಯಂತ್ರಗಳನ್ನು ದುರ್ಬಳಕ್ಕೆ ಮಾಡಿಕೊಳ್ಳುತ್ತಿದ್ದು, ಈ ದುರ್ಬಳಕೆ ಪರಮಾವಧಿ ತಲುಪಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು.

ಅಸ್ಸಾಂ ಹಾಗೂ ಪಶ್ಚಿಮ ಬಂಗಾಳದಲ್ಲಿ ಮತಕಳ್ಳತನವಾಗಿದೆ ಎಂದು ರಾಹುಲ್ ಗಾಂಧಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ನಾನು ಬೆಂಬಲಿಸುತ್ತೇನೆ" ಎಂದರು.

ಬಿಜೆಪಿಯವರು ಕೇರಳ ಹಾಗೂ ಇತರೆ ರಾಜ್ಯಗಳನ್ನು ಪ್ರಶ್ನೆ ಮಾಡುತ್ತಿವೆ ಎಂದು ಕೇಳಿದಾಗ, "ಏನೆಲ್ಲಾ ನಡೆಯುತ್ತಿದೆ ಎಂದು ಮೊದಲಿನಿಂದಲು ನೋಡುತ್ತಿದ್ದೇವೆ. ಪಶ್ಚಿಮ ಬಂಗಾಳದಲ್ಲಿ 2.50 ಲಕ್ಷ ಕೇಂದ್ರ ಸಶಸ್ತ್ರ ಪಡೆ ಸಿಬ್ಬಂದಿ ನಿಯೋಜಿಸಿ ಭಯದ ವಾತಾವರಣ ಸೃಷ್ಟಿಸಲಾಗಿತ್ತು. ಅಸ್ಸಾಂ ಹಾಗೂ ಪಶ್ಚಿಮ ಬಂಗಾಳದಲ್ಲಿ ಮತಕಳ್ಳತನವಾಗಿದೆ ಎಂದು ರಾಹುಲ್ ಗಾಂಧಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ನಾನು ಬೆಂಬಲಿಸುತ್ತೇನೆ" ಎಂದರು.

ಬಿಜೆಪಿಯವರು ಕೇರಳ ಹಾಗೂ ಇತರೆ ರಾಜ್ಯಗಳನ್ನು ಪ್ರಶ್ನೆ ಮಾಡುತ್ತಿವೆ ಎಂದು ಕೇಳಿದಾಗ, "ಏನೆಲ್ಲಾ ನಡೆಯುತ್ತಿದೆ ಎಂದು ಮೊದಲಿನಿಂದಲು ನೋಡುತ್ತಿದ್ದೇವೆ. ಲಕ್ಷ ಕೇಂದ್ರ ಸಶಸ್ತ್ರ ಪಡೆ ಸಿಬ್ಬಂದಿ ನಿಯೋಜಿಸಿ ಭಯದ ವಾತಾವರಣ ಸೃಷ್ಟಿಸಲಾಗಿತ್ತು. ಕ್ಷೇತ್ರ ಮರುವಿಂಗಡಣೆಯಲ್ಲಿ ಅಲ್ಪಸಂಖ್ಯಾತರನ್ನು ಒಂದು ಕಡೆಗೆ ಹಾಕಲಾಗಿತ್ತು. ಇದರಿಂದ ದೇಶದ ರಾಜಕೀಯ ಭವಿಷ್ಯದ ಮೇಲೆ ಪರಿಣಾಮ ಬೀರಿದ್ದು, ಪ್ರಜಾಪ್ರಭುತ್ವ ವ್ಯವಸ್ಥೆ ಅಪಾಯದಲ್ಲಿದೆ" ಎಂದರು.

ನಾನು ಸೋತಿಲ್ಲ, ಹೀಗಾಗಿ ರಾಜೀನಾಮೆ ನೀಡುವುದಿಲ್ಲ ಎಂಬ ಮಮತಾ ಬ್ಯಾನರ್ಜಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಪ್ರಜಾಪ್ರಭುತ್ವದಲ್ಲಿ ನಾವು ಹೋರಾಟ ಮಾಡಬೇಕು" ಎಂದು ತಿಳಿಸಿದರು.



ಶಿವಾಜಿನಗರದ ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿತ ಪ್ರಕರಣ ದಲ್ಲಿ ಮೃತಪಟ್ಟ ಕೇರಳದ ಕೊಚ್ಚಿನ್ ನಿವಾಸಿಗಳ ಮನೆಗೆ ಭೇಟಿ ನೀಡಿದ್ದ ಸಚಿವ ಜಮೀರ್ ಅಹಮದ್ ಖಾನ್ ಅವರು ವೈಯಕ್ತಿಕ ವಾಗಿ ಸ್ಮಿತಾ ಹಾಗೂ ಲತಾ ಕುಟುಂಬಕ್ಕೆ ತಲಾ ಐದು ಲಕ್ಷ ರೂ. ಹಾಗೂ ಗಾಯಾಳುಗಳಾದ ಸಿಜಿ, ಮಾಯಾ, ಪ್ರೀತಿ ಕುಟುಂಬಕ್ಕೆ ತಲಾ ಒಂದು ಲಕ್ಷ ರೂ. ನೆರವಿನ ಚೆಕ್ ನೀಡಿದರು.

# ಜೀವನಶೈಲಿ ಕಾಯಿಲೆಗೆ ಹೋಮಿಯೋಪತಿ ಸಮಗ್ರ ಪರಿಹಾರ: ಗೆಹ್ಲೋಟ್

ಬೆಂಗಳೂರು

"ಭಾರತದಲ್ಲಿ ಹೋಮಿಯೋಪತಿ ಒಂದು ಶಕ್ತಿಶಾಲಿ ಮತ್ತು ಜನಪ್ರಿಯ ವೈದ್ಯಕೀಯ ಪದ್ಧತಿಯಾಗಿ ಸ್ಥಾಪಿಸಿಕೊಳ್ಳುತ್ತಿದೆ. ದೇಶಾದ್ಯಂತ ಲಕ್ಷಾಂತರ ಜನರು ಈ ಪದ್ಧತಿಯಿಂದ ಪ್ರಯೋಜನ ಪಡೆಯುತ್ತಿದ್ದಾರೆ. ಭಾರತ ಸರ್ಕಾರದ ಆಯುಷ್ ಸಚಿವಾಲಯವು ಈ ದಿಕ್ಕಿನಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸುತ್ತಿದೆ" ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಹೋಮಿಯೋಪತಿ ಫೌಂಡೇಶನ್ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ವಿಶ್ವ ಹೋಮಿಯೋಪತಿ ದಿನಾಚರಣೆಯಲ್ಲಿ ಅವರು ಮಾತನಾಡಿದರು.

"ಕರ್ನಾಟಕ ರಾಜ್ಯದಲ್ಲಿ, ಉತ್ತಮ ಗುಣಮಟ್ಟದ ವೈದ್ಯಕೀಯ ಶಿಕ್ಷಣ, ಸಮರ್ಪಿತ ವೈದ್ಯರು ಮತ್ತು ಸಂಶೋಧನಾ–ಆಧಾರಿತ ವಿಧಾನವು ಹೋಮಿಯೋಪತಿಯ ಬೆಳವಣಿಗೆಗೆ ಕಾರಂಅವಾಗಿದೆ" ಎಂದರು.

"ಮಹಾನ್ ವೈದ್ಯ ಡಾ. ಸ್ಯಾಮ್ಯುಯೆಲ್ ಹ್ಯಾನೆಮನ್ ಅವರ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ವಿಶ್ವ ಹೋಮಿಯೋಪತಿ ದಿನವನ್ನು ಪ್ರತಿ ವರ್ಷ ಏಪ್ರಿಲ್ 10 ರಂದು ಆಚರಿಸಲಾಗುತ್ತದೆ. ಅವರು ಮಾನವೀಯತೆಗೆ ರೋಗಗಳ ಚಿಕಿತ್ಸೆಗೆ ಸೀಮಿತವಾಗಿರದೆ ಇಡೀ ವ್ಯಕ್ತಿ, ಅವನ ದೇಹ, ಮನಸ್ಸು ಮತ್ತು ಆತ್ಮದ ಸಮತೋಲನಕ್ಕೆ ಪ್ರಾಮುಖ್ಯತೆಯನ್ನು ನೀಡುವ ವೈದ್ಯಕೀಯ ವ್ಯವಸ್ಥೆಯನ್ನು ನೀಡಿದರು. ಹೋಮಿಯೋಪತಿಯ ಮೂಲಭೂತ




ತತ್ವವೆಂದರೆ "ಚಿಕಿತ್ಸೆಯ ಹಾಗೆ ರೋಗಗಳಿಗೂ ಪರಿಹಾರಗಳು ಪ್ರಕೃತಿಯಲ್ಲೇ ಇವೆ ಎಂಬುದನ್ನು ಕಲಿಸುತ್ತದೆ" ಎಂದು ಹೇಳಿದರು.

"ಸರಿಯಾದ ಪ್ರಮಾಣದಲ್ಲಿ ನೀಡಲಾಗುವ ಔಷಧಿಗಳು ದೇಹದ ನೈಸರ್ಗಿಕ ರೋಗನಿರೋಧಕ ಶಕ್ತಿಯನ್ನು ಜಾಗೃತಗೊಳಿಸುತ್ತವೆ ಮತ್ತು ಅದು ತನ್ನನ್ನು ತಾನೇ ಗುಣಪಡಿಸಿಕೊಳ್ಳಲು ಉತ್ತೇಜಿಸುತ್ತವೆ. ಇಂದಿಗೂ, ವೈದ್ಯಕೀಯ ವಿಜ್ಞಾನವು ಬಹಳ ಮುಂದುವರಿದಿದ್ದರೂ, ಜೀವನಶೈಲಿ ಕಾಯಿಲೆಗಳು, ಮಾನಸಿಕ ಒತ್ತಡ ಮತ್ತು ದೀರ್ಘಕಾಲದ ಕಾಯಿಲೆಗಳು ಹೆಚ್ಚುತ್ತಿವೆ. ಅಂತಹ ಸಮಯದಲ್ಲಿ, ಹೋಮಿಯೋಪತಿಯ ಸಮಗ್ರ ವಿಧಾನವು ಸಮತೋಲಿತ ಮತ್ತು ಶಾಶ್ವತ ಆರೋಗ್ಯದ ಕಡೆಗೆ ನಮ್ಮನ್ನು ಕರೆದೊಯ್ಯುತ್ತದೆ" ಎಂದು ತಿಳಿಸಿದರು. ಜಯನಗರ ಶಾಸಕ ಸಿ.ಕೆ. ರಾಮಮೂರ್ತಿ ಮಾತನಾಡಿ, ಹೋಮಿಯೋಪತಿ ಪದ್ಧತಿಯ ಮೇಲೆ ಜನರ ವಿಶ್ವಾಸ ಉಳಿದಿದೆ. ಅದನ್ನು ಬೆಳೆಸಿಕೊಳ್ಳುವುದು ವೈದ್ಯರ ಹೊಣೆಗಾರಿಕೆ. ಅನೇಕ ಸಂದರ್ಭಗಳಲ್ಲಿ ವೈದ್ಯರ ಮಾತುಗಳೇ ಔಷಧಿಯಂತೆ ಕೆಲಸ ಮಾಡುತ್ತವೆ ಆದ್ದರಿಂದ ರೋಗಿಗಳೊಂದಿಗೆ ಸ್ನೇಹ, ಸಹಾನುಭೂತಿ ಮತ್ತು ಕರುಣೆಯಿಂದ ವರ್ತಿಸಬೇಕು ಎಂದು ಹೇಳಿದರು.

ಕರ್ನಾಟಕ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್ ಮಾತನಾಡಿದರು. ಕುಲಸಚಿವರಾದ ಅರ್ಜುನ್ ಒಡೆಯರ್, ಮೌಲ್ಯಮಾಪನ ಕುಲಸಚಿವರಾದ ಡಾ. ರಿಯಾಜ್ ಭಾಷ ಎಸ್. ಹಣಕಾಸು ಅಧಿಕಾರಿ ಬಿ.ಕೆ. ಗಂಗಾಧರ ಉಪಸ್ತಿತರಿದ್ದರು. ಕಾರ್ಯಕ್ರಮದಲ್ಲಿ ಅಧ್ಯಾಪಕರು, ವಿದ್ಯಾರ್ಥಿಗಳು ಹಾಗೂ ವೈದ್ಯರು ಭಾಗವಹಿಸಿದ್ದರು.

# 'ಪ್ರಮಾಣವಚನ ಬೋಧಿಸಲು ತಡ ಮಾಡಿದರೆ ಸ್ಪೀಕರ್ ವಿರುದ್ಧ ಹೋರಾಟ'

ಬೆಂಗಳೂರು

ಶೃಂಗೇರಿ ಶಾಸಕ ಡಿ.ಎನ್.ಜೀವರಾಜ್ ಅವರಿಗೆ ಸ್ಪೀಕರ್ ಯು.ಟಿ.ಖಾದರ್ ಪ್ರಮಾಣವಚನ ಬೋಧಿಸಲು ತಡ ಮಾಡುತ್ತಿದ್ದಾರೆ. ಆದ್ದರಿಂದ ರಾಜ್ಯಪಾಲರೇ ನೇರವಾಗಿ ಪ್ರಮಾಣವಚನ ಬೋಧಿಸಲು ಕೋರಿದ್ದೇವೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ರಾಜ್ಯಪಾಲರನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೃಂಗೇರಿ ವಿಧಾನಸಭಾ ಕ್ಷೇತ್ರದ ಮತ ಮರು ಎಣಿಕೆಯಲ್ಲಿ ಬಿಜೆಪಿಯ ಡಿ.ಎನ್.ಜೀವರಾಜ್ ಶಾಸಕರು ಎಂಬ ಫಲಿತಾಂಶ ಬಂದಿದೆ. ಚುನಾವಣಾ ಆಯೋಗದಿಂದ ಎಲ್ಲ ಶಾಸಕರಿಗೆ ಪ್ರಮಾಣ ಪತ್ರ ನೀಡುವಂತೆ ಇವರಿಗೂ ಪ್ರಮಾಣಪತ್ರ ಸಿಕ್ಕಿದೆ.

ರಾಜ್ಯ ಸರ್ಕಾರದ ರಾಜ್ಯಪತ್ರದ ಆದೇಶವೂ ಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಎಲ್ಲ ಶಾಸಕರು ಇದೇ ರೀತಿ ಶಾಸಕರು ಎನಿಸಿಕೊಳ್ಳುತ್ತಾರೆ. ಈ ಕುರಿತು ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಫೋನ್ ಕರೆ ಮಾಡಿ ಮಾತಾಡಲು ಯತ್ನಿಸಿದರೆ ಬೇಕೆಂದೇ ಕರೆ ಸ್ವೀಕರಿಸಲಿಲ್ಲ. ಈಗ ಭೇಟಿ ಮಾಡಿದರೆ ನನಗೆ ಕಾನೂನಿನ ಬೋಧನೆ ಮಾಡುತ್ತಿದ್ದಾರೆ. ಸ್ಪೀಕರ್ ಕೂಡ ಇದೇ ರೀತಿ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಹಾಗೆ ಆಯ್ಕೆಯಾಗುವಾಗ ಅವರೇನೂ ಕೋರ್ಟ್‌ಗೆ ಹೋಗಿರಲಿಲ್ಲ. ಯಾವುದೇ ಶಾಸಕರ ವಿರುದ್ಧ ಕೋರ್ಟ್ ಗೆ ಹೋಗಲು 45 ದಿನಗಳ ಕಾಲಾವಕಾಶವಿದ್ದರೂ ಪ್ರಮಾಣವಚನಕ್ಕೆ ಅದು ಅಡ್ಡಿಯಾಗುವುದಿಲ್ಲ. ಆದರೆ ಸ್ಪೀಕರ್ ಯು.ಟಿ.ಖಾದರ್ ಮಾತ್ರ ಪ್ರಮಾಣವಚನಕ್ಕೆ ಅವಕಾಶ ಮಾಡಿಕೊಡದೆ ಹೊಸ ಸಂಪ್ರದಾಯ ಆರಂಭಿಸಿದ್ದಾರೆ ಎಂದು ದೂರಿದರು.

ಜೀವರಾಜ್ ಅವರ ವಿರುದ್ಧದ ದೂರಿಗೆ



ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ ಹಾಕಿದೆ. ಕಾಂಗ್ರೆಸ್ ನವರೇ ದೊಡ್ಡ ಡಕಾಯಿತಿ ಮಾಡುತ್ತಾರೆ. ಮತ ಎಣಿಕೆ ವೇಳೆ ಚುನಾವಣಾಧಿಕಾರಿಗೆ ಸಿದ್ದರಾಮಯ್ಯ ಅಥವಾ ಡಿ.ಕೆ.ಶಿವಕುಮಾರ್ ಕರೆ ಮಾಡಿ ಒತ್ತಡ ಹೇರಿದ್ದಾರೆಯೇ ಎಂದು ಸಿಬಿಐ ತನಿಖೆ ಆಗಬೇಕಿದೆ. ಫಲಿತಾಂಶವನ್ನು ಕೋರ್ಟ್‌ಗೆ ಸಲ್ಲಿಸಿ ಎಂದು ಎಲ್ಲೂ ಹೇಳಿಲ್ಲ.

ಫಲಿತಾಂಶವನ್ನು ಕೂಡಲೇ ಪ್ರಕಟಿಸಿ ಎಂಬ ಸೂಚನೆ ಇದೆ. ಇಲ್ಲಿ ಸ್ಪೀಕರ್ ಭೇಟಿಯಾಗಿ ಕೇಳಿದರೆ, ನಾಳೆ ಬಾ ನೋಡೋಣ, ಕಾನೂನು ಸಲಹೆ ಪಡೆಯಬೇಕಿದೆ ಎನ್ನುತ್ತಾರೆ. ಹಾಗಿದ್ದರೆ 224 ಶಾಸಕರ ಬಗ್ಗೆಯೂ ಕಾನೂನು ಸಲಹೆ ಪಡೆಯಬೇಕಿತ್ತು ಎಂದರು.

ಸಂವಿಧಾನದ ವಿಧಿ 188 ಪ್ರಕಾರ, ಪ್ರಮಾಣವಚನವನ್ನು ರಾಜ್ಯಪಾಲರು ಬೋಧಿಸುತ್ತಾರೆ. ಸ್ಪೀಕರ್ ಇಲ್ಲವಾದರೆ ಬೇರೆಯವರ ಹೆಸರು ಸೂಚಿಸುವ ಅಧಿಕಾರ ರಾಜ್ಯಪಾಲರಿಗಿದೆ. ಆದ್ದರಿಂದ ಸ್ಪೀಕರ್ ಬದಲು ನೀವೇ ಪ್ರಮಾಣವಚನ ಬೋಧಿಸಿ ಎಂದು ರಾಜ್ಯಪಾಲರಿಗೆ ಮನವಿ ಮಾಡಿದ್ದೇವೆ. ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಸರ್ಕಾರ ಹೀಗೆ ಮಾಡಿದಾಗ ಇಬ್ಬರು ಬಿಜೆಪಿ ಶಾಸಕರು ರಾಜ್ಯಪಾಲರಿಗೆ ಕೋರಿದ್ದರು. ಅದೇ ರೀತಿ ನಾವು ಕೂಡ ಕೋರಿದ್ದೇವೆ. ಈ ಪ್ರಕ್ರಿಯೆ ನಡೆಯದೇ ಇದ್ದಲ್ಲಿ ಸ್ಪೀಕರ್ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕೈ ಕೆಳಗಿನ ಅಧಿಕಾರಿಗಳು ಪೇಮೆಂಟ್ ಗಿರಾಕಿಗಳು ಅಂದಮೇಲೆ ಅವರೇ ಟ್ಯಾಂಪರ್ ಮಾಡಲು ಹೇಗೆ ಸಾಧ್ಯ? ಜೀವರಾಜ್ ಸೋತು ಎಂಟು ವರ್ಷವಾಗಿರುವಾಗ ಅವರ ಮಾತನ್ನು ಅಧಿಕಾರಿಗಳು ಕೇಳಲು ಸಾಧ್ಯವೇ? ಅಧಿಕಾರಿಗಳು ಮುಖ್ಯಮಂತ್ರಿಯ ಮಾತನ್ನು ಕೇಳುತ್ತಾರೆ.

ಶೃಂಗೇರಿ ಕ್ಷೇತ್ರ ವೋಟ್ ಚೋರಿಗೆ ಉದಾಹರಣೆಯಾಗಿದ್ದು, ಇಡೀ ಸರ್ಕಾರ ವಜಾ ಮಾಡಬೇಕಿದೆ. ಎಲ್ಲ ಕಡೆ ಮತಗಳ್ಳತನ ಆಗುತ್ತಿದೆ ಎಂದರೆ ಸರ್ಕಾರದ ಎಲ್ಲ ಅಧಿಕಾರಿಗಳು ಡಕಾಯಿತರು ಎನ್ನಬೇಕಾಗುತ್ತದೆ. ಎಲ್ಲ ಕಡೆ ಸಿಸಿಟಿವಿ ಕ್ಯಾಮರಾ ಇರುವಾಗ ಕಳ್ಳತನವಾಗಲು ಸಾಧ್ಯವಿಲ್ಲ ಎಂದರು.

# ಕೇಂದ್ರ ಸಂಪುಟ ಅನುಮೋದನೆ

ಬೆಂಗಳೂರು

ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಇದರ ಅಂಗೀಕಾರವು ನ್ಯಾಯಾಧೀಶರ ಸಂಖ್ಯೆಯನ್ನು 37ಕ್ಕೆ ಹೆಚ್ಚಿಸುತ್ತದೆ. ಈ ಸರ್ಕಾರದ ನಿರ್ಧಾರವು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳ ವಿಲೇವಾರಿಗೆ ಅನುಕೂಲವಾಗಲಿದೆ. ಸುಪ್ರೀಂ ಕೋರ್ಟ್ ಪ್ರಸ್ತುತ ದೊಡ್ಡ ಪ್ರಮಾಣದ ಪ್ರಕರಣಗಳನ್ನು ಎದುರಿಸುತ್ತಿದೆ. ಇದು ನ್ಯಾಯಾಂಗ ಪ್ರಕ್ರಿಯೆಯಲ್ಲಿ ವಿಳಂಬಕ್ಕೆ ಕಾರಣವಾಗುತ್ತದೆ.

ನ್ಯಾಯಾಧೀಶರ ಸಂಖ್ಯೆ ಕಾಯ್ದೆ, 1956 ಅನ್ನು ಮೂಲತಃ ಮುಖ್ಯ ನ್ಯಾಯಾಧೀಶರನ್ನು ಹೊರತುಪಡಿಸಿ 10 ನ್ಯಾಯಾಧೀಶರಿಗೆ ಒದಗಿಸಲಾಗಿತ್ತು ಎಂಬುದು ಗಮನಾರ್ಹ. 1960ರಲ್ಲಿ ಇದನ್ನು 13ಕ್ಕೆ ಹೆಚ್ಚಿಸಲಾಯಿತು, ನಂತರ 17ಕ್ಕೆ ಹೆಚ್ಚಿಸಲಾಯಿತು. 1986ರಲ್ಲಿ ನ್ಯಾಯಾಧೀಶರ ಸಂಖ್ಯೆಯನ್ನು 25ಕ್ಕೆ ಹೆಚ್ಚಿಸಲಾಯಿತು. 2009ರಲ್ಲಿ ಅದನ್ನು 30ಕ್ಕೆ ಹೆಚ್ಚಿಸಲಾಯಿತು. ನ್ಯಾಯಾಂಗವನ್ನು ಬಲಪಡಿಸುವ ನಿಟ್ಟಿನಲ್ಲಿ ಸಚಿವ ಸಂಪುಟದ ನಿರ್ಧಾರವು ಮಹತ್ವದ ಹೆಜ್ಜೆಯನ್ನು ಸೂಚಿಸುತ್ತದೆ.

ಸುಪ್ರೀಂ ಕೋರ್ಟ್‌ನಲ್ಲಿರುವ ಒಟ್ಟು ನ್ಯಾಯಾಧೀಶರ ಸಂಖ್ಯೆಯನ್ನು ಭಾರತೀಯ ಸಂವಿಧಾನದಲ್ಲಿ ನಿಗದಿಪಡಿಸಲಾಗಿಲ್ಲ ಎಂಬುದು ಗಮನಾರ್ಹ. ಸಂವಿಧಾನದ 124(1) ನೇ ವಿಧಿಯ ಅಡಿಯಲ್ಲಿ, ಮುಖ್ಯ ನ್ಯಾಯಾಧೀಶರನ್ನು ಹೊರತುಪಡಿಸಿ ನ್ಯಾಯಾಧೀಶರ ಸಂಖ್ಯೆಯನ್ನು ಸಂಸತ್ತು ನಿರ್ಧರಿಸುತ್ತದೆ. ಕಾಲಕಾಲಕ್ಕೆ ಹೆಚ್ಚುತ್ತಿರುವ ಪ್ರಕರಣಗಳ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು, ಇದನ್ನು ಹಲವಾರು ಬಾರಿ ಬದಲಾಯಿಸಲಾಗಿದೆ.

# 'ಬೆಂಗಳೂರನ್ನು ವಿಶ್ವದರ್ಜೆ ಪ್ರಗತಿಯ ಹಬ್ ಆಗಿ ಪರಿವರ್ತಿಸಲು ಒಡಂಬಡಿಕೆ'




ಬೆಂಗಳೂರು

ವಿಶ್ವದರ್ಜೆಯ ಪ್ರಗತಿಯ ಹಬ್ ಆಗಿ ಪರಿವರ್ತಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ಇದಕ್ಕೆ ಅಗತ್ಯವಿರುವ ಆರ್ಥಿಕ ಮಾಸ್ಟರ್ ಪ್ಲಾನ್ ರೂಪಿಸಲು ಸುಸ್ಥಿರ ಉದ್ಯೋಗ ಮತ್ತು ಅಭಿವೃದ್ಧಿ ದತ್ತಿ ಸಂಸ್ಥೆಯೊಂದಿಗೆ ಉದ್ದೇಶ ಪತ್ರಕ್ಕೆ ಸಹಿ ಹಾಕಲಾಗಿದೆ.

ವಿಧಾನಸೌಧದಲ್ಲಿ ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿ ನಾಥ್ ಹಾಗೂ ಖಖಇಉ ಯ ನಿರ್ದೇಶಕ ಡಾ. ಶಿರೀಶ್ ಸಂಖೆರವರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಸಮ್ಮುಖದಲ್ಲಿ ಪರಸ್ಪರ ಸಹಿ ಹಾಕಿ ಪತ್ರ ವಿನಿಮಯ ಮಾಡಿಕೊಂಡರು. ಈ ಸಂದರ್ಭದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಒಡಂಬಡಿಕೆ ಉದ್ದೇಶದ ಬಗ್ಗೆ ವಿವರಿಸಿ, ಸಲಹೆ ಸೂಚನೆ ನೀಡಿದರು.

"ಬೆಂಗಳೂರಿನಲ್ಲಿ ವಿಶ್ವದರ್ಜೆ ಪ್ರಗತಿ ಹಬ್ ಮಾಡಲು ಕಳೆದ ಮೂರು ವರ್ಷಗಳಿಂದ ಪ್ರಯತ್ನ ಮಾಡುತ್ತಲೇ ಇದ್ದೇವೆ. ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ದಾಖಲೆ ಪ್ರಮಾಣದಲ್ಲಿ ಆರ್ಥಿಕ ಶಕ್ತಿ ನೀಡಿದ್ದೇವೆ. ಬೆಂಗಳೂರು ಮೆಟ್ರೋಪಾಲಿಟನ್ ಪ್ರದೇಶದಲ್ಲಿ ತಲಾದಾಯ 8.850 ಡಾಲರ್ ನಷ್ಟಿದೆ ಇದೆ. ರಾಜ್ಯದ ಸರಾಸರಿಗಿಂತ ದುಪ್ಪಟ್ಟಿದೆ. 8 ಸಾವಿರ ಚದರ ಕಿ.ಮೀಗಿಂತ ಹೆಚ್ಚು ಪ್ರದೇಶದಲ್ಲಿ ಬೆಂಗಳೂರು ನಗರ, ಗ್ರಾಮಾಂತರ ಹಾಗೂ ದಕ್ಷಿಣ ಜಿಲ್ಲೆಗಳು ಹರಡಿದ್ದು, 1.6 ಬಿಲಿಯನ್ ಜನ ಇಲ್ಲಿದ್ದಾರೆ. ಭಾರತದ ಸಾಫ್ಟ್ವೇರ್ ರಫ್ತಿನಲ್ಲಿ 42% ಕೊಡುಗೆ ಬೆಂಗಳೂರು ನೀಡುತ್ತಿದೆ. ಬೆಂಗಳೂರು ನಗರಕ್ಕೆ 500 ವರ್ಷಗಳು ಪೂರ್ಣಗೊಳ್ಳುತ್ತಿದ್ದು, ಈ ಸಂದರ್ಭದಲ್ಲಿ 2032ರಿಂದ 2037ರ ಅವಧಿಯಲ್ಲಿ ಕೈಗೊಳ್ಳಬೇಕಾದ ಆರ್ಥಿಕ ಮಾಸ್ಟರ್ ಪ್ಲಾನ್ ಅನ್ನು ರೂಪಿಸಲು ಚಿಂತನೆ ನಡೆಸಿದ್ದೇವೆ. ಹೀಗಾಗಿ ಬೆಂಗಳೂರಿಗೆ ಹೊಸ ರೂಪ, ಶಕ್ತಿ ನೀಡಬೇಕು ಎಂದು ತೀರ್ಮಾನಿಸಿದ್ದೇವೆ" ಎಂದು ತಿಳಿಸಿದರು.

"ಎಲ್ಲಿ ಉದ್ಯೋಗ ಸೃಷ್ಟಿಸಬೇಕು, ಎಲ್ಲಿ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಬೇಕು, ಎಲ್ಲಿ ವಸತಿ ಯೋಜನೆಗಳನ್ನು ತರಬೇಕು, ಸಂಚಾರ ದಟ್ಟಣೆ ನಿವಾರಣೆಗೆ ಸಂಬಂಧಿಸಿದಂತೆ ನಕ್ಷ ರೂಪಿಸಲಾಗುವುದು. ದಶದ ಇತರೆ ನಗರಗಳಾದ ಮುಂಬೈ, ದೆಹಲಿ, ಕೋಲ್ಕತ್ತಾಗಳಲ್ಲಿ ಇಲ್ಲಿಗಿಂತ ಹೆಚ್ಚು ಸಂಚಾರ ದಟ್ಟಣೆ ನೋಡಿದ್ದೇನೆ ಎಂದರು.

# ಜಮೀರ್ ಮನೆಯಲ್ಲಿ ಕಳ್ಳತನ: ಕಳ್ಳರ ಬಂಧನ

ಬೆಂಗಳೂರು

ಸಚಿವ ಜಮೀರ್ ಅಹ್ಮದ್ ಮನೆಗೆ ಕನ್ನ ಹಾಕಿ ಕೋಟಿ ಮೌಲ್ಯದ ಚಿನ್ನಾಭರಣ ಕದ್ದಿದ್ದ ಕಳ್ಳರನ್ನು ಬಂಧಿಸುವಲ್ಲಿ ಶಿವಾಜಿನಗರ ಪೊಲೀಸರು ಯಶಸ್ವಿಯಾಗಿದ್ದಾರೆ.

ಅಮೀರ್ ಅಹ್ಮದ್, ಅವೀನ್ ಬಂಧಿತ ಆರೋಪಿಗಳು. ಸಚಿವ ಜಮೀರ್ ಮನೆಯಲ್ಲಿ ಕಳೆದ ಮೂರು ವರ್ಷದಿಂದ ಹಂತ ಹಂತವಾಗಿ ಕೋಟಿ ಮೌಲ್ಯದ ಚಿನ್ನಾಭರಣ ಎಗರಿಸಿದ್ದರು. ಜಮೀರ್ ಆರೋಗ್ಯ ವಿಚಾರಿಸುವ ಸಲುವಾಗಿ ಪದೇ ಪದೇ ಮನೆಗೆ ಬರುತ್ತಿದ್ದ ಅಮೀರ್ 2023ರಿಂದ ನಿರಂತರವಾಗಿ 1 ಕೆಜಿ 200 ಗ್ರಾಂ ಚಿನ್ನಾಭರಣ ಎಗರಿಸಿದ್ದಾನೆ.

ಟ್ರಾವೆಲ್ಸ್ ಬ್ಯುಸಿನೆಸ್‌ನಲ್ಲಿ ಲಾಸ್ ಆಗಿದ್ದಕ್ಕೆ ಈ ಕೃತ್ಯ ಎಸಗಿದ್ದಾರೆ ಎಂದು ತಿಳಿದು ಬಂದಿದೆ. ಆ ಹಣ ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಿ ಲಾಭಕ್ಕೆ ಪ್ಲ್ಯಾನ್ ಮಾಡಿದ್ದರು. ಆದರೆ ಕಾಲ್ ಮಾಡಿದಾಗ ರಿಸೀವ್ ಮಾಡದಿದ್ದಾಗ ಇಬ್ಬರ ಮೇಲೆ ಅನುಮಾನ ವ್ಯಕ್ತವಾಗಿದ್ದು, ಬಳಿಕ ಪೊಲೀಸರು ವಿಚಾರಣೆ ನಡೆಸಿದಾಗ ಕೃತ್ಯ ಬಯಲಿಗೆ ಬಂದಿದೆ. ಸದ್ಯ ಜಮೀರ್ ಅಹ್ಮದ್ ತಾಯಿ ನೀಡಿದ ದೂರಿನ ಮೇರೆಗೆ ಶಿವಾಜಿನಗರ ಪೊಲೀಸರು ತನಿಖೆ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ.

# ಉತ್ತಮ ಆರೋಗ್ಯಕ್ಕಾಗಿ ಪ್ರಕೃತಿ, ಪರಿಸರ ಸಂರಕ್ಷಣೆ ಅತ್ಯಗತ್ಯ: ಈಶ್ವರಖಂಡ್ರೆ

ಜಮಖಂಡಿ

ಮಾಲಿನ್ಯದಿಂದ ರೋಗ ರುಜಿನ ಹೆಚ್ಚಳವಾಗುತ್ತಿದ್ದು, ಉತ್ತಮ ಆರೋಗ್ಯಕ್ಕಾಗಿ ಪ್ರತಿಯೊಬ್ಬರೂ ಪ್ರಕೃತಿ, ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಕರೆ ನೀಡಿದ್ದಾರೆ.

ನಗರದಲ್ಲಿಂದು ಜಿರಲಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದು ಕಾಡು, ಹಸಿರು ಹೊದಿಕೆ ಕ್ಷೀಣಿಸುತ್ತಿದ್ದು, ಆಹಾರ, ನೀರು, ವಾಯುವಿನಲ್ಲಿ ಮಾಲಿನ್ಯ ಹೆಚ್ಚಾಗುತ್ತಿದೆ. ಆಧುನಿಕ ಯುಗದಲ್ಲಿ ನಾವು ಒತ್ತಡದಲ್ಲಿ ಬದುಕುತ್ತಿದ್ದು, ಇವೆಲ್ಲವೂ ಕಾಯಿಲೆಯ ಮೂಲವಾಗಿದೆ, ಹೀಗಾಗಿ ಪ್ರಕೃತಿ ಪರಿಸರ ಉಳಿದಾಗ ಮಾತ್ರ ಮನುಷ್ಯ ನೆಮ್ಮದಿಯ ಬದುಕು ನಡೆಸಲು ಸಾಧ್ಯ ಎಂದರು.

ವೈದ್ಯಕೀಯ ಸೇವೆ ಇಂದು ದುಬಾರಿಯಾಗಿದೆ. ಲಕ್ಷಾಂತರ ರೂಪಾಯಿ



ವೆಚ್ಚ ಆಗುತ್ತಿದೆ. ಬಡ, ಮಧ್ಯಮವರ್ಗದವರಿಗೆ ಕೈಗೆಟಕುವ ದರದಲ್ಲಿ ಉತ್ತಮ ಗುಣಮಟ್ಟದ ಆರೋಗ್ಯ ಸೇವೆಯನ್ನು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗಳು ನೀಡಬೇಕು ಎಂದರು.

ಆಯುರ್ವೇದ ಜಗತ್ತಿನ ಪ್ರಾಚೀನ ವೈದ್ಯಪದ್ಧತಿಯಾಗಿದ್ದು, ಇದು ಭಾರತೀಯ ಋಷಿಮುನಿಗಳ ಕೊಡುಗೆಯಾಗಿದೆ. ನಮ್ಮ ಋಷಿಗಳಿಗೆ ಔಷಧೀಯ ಗಿಡಮೂಲಿಕೆಗಳ ಬಗ್ಗೆ ಅಪಾರ ಜ್ಞಾನ ಇತ್ತು. ಯಾವುದೇ ಅಡ್ಡ ಪರಿಣಾಮ ಇಲ್ಲದ ಆಯುರ್ವೇದದ ಬಗ್ಗೆ ಇತ್ತೀಚಿನ ದಿನಗಳಲ್ಲಿ ಜನರ ಒಲವು ಹೆಚ್ಚಾಗುತ್ತಿದೆ ಎಂದು ಹೇಳಿದರು.

ಭಾರತೀಯ ಸಂಸ್ಕೃತಿಯಲ್ಲಿ ರೋಗ ಗುಣಪಡಿಸುವ ಜೀವ ಉಳಿಸುವ ವೈದ್ಯರನ್ನು ದೇವರೆಂದು ಕಾಣುತ್ತಾರೆ. ವೈದ್ಯೋ ನಾರಾಯಣೋ ಹರಿಃ ಎನ್ನುತ್ತಾರೆ. ವೈದ್ಯರು ಕೂಡ ಸೇವಾ ಮನೋಭಾವದಿಂದ ಬಡ ಮತ್ತು ಮಧ್ಯಮವರ್ಗದ ರೋಗಿಗಳ ಪಾಲಿನ ಆಶಾಕಿರಣ ಆಗಬೇಕು ಎಂದರು.

ಜಮಖಂಡಿಗೂ ತಮಗೂ ಅವಿನಾಭಾವ ಸಂಬಂಧ ಇದೆ ಎಂದ ಖಂಡ್ರೆ, ಸಿದ್ದು ನ್ಯಾಮಗೌಡರು ಶಾಸಕರಾಗಿದ್ದಾಗ, ಹಲವು ಬಾರಿ ಜಮಖಂಡಿಗೆ ಬಂದಿದ್ದೆ. ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯಾಧ್ಯಕ್ಷನಾಗಿ ಉಪ ಚುನಾವಣೆಯ ಸಂದರ್ಭದಲ್ಲಿ ಉಸ್ತುವಾರಿಯಾಗಿ ಬಂದು, ಜಮಖಂಡಿಯ ಹಳ್ಳಿ ಹಳ್ಳಿಗಳಲ್ಲಿ ಪ್ರಚಾರ ಮಾಡಿದ್ದು, ಆಗ ಇಲ್ಲಿನ ಜನತೆ ತೋರಿದ ಪ್ರೀತಿ, ವಾತ್ಸಲ್ಯ, ವಿಶ್ವಾಸ, ಅಭಿಮಾನಕ್ಕೆ ತಾವು ಆಭಾರಿಯಾಗಿರುವುದಾಗಿ ಹೇಳಿದರು.

ಬಿಜೆಪಿ ಕಾರ್ಯಕಾಲದಲ್ಲಿ ಪ್ರವಾಹದಿಂದ ಸಂಕಷ್ಟ ಎದುರಾದ ಸಂದರ್ಭದಲ್ಲಿಯೂ ಇಲ್ಲಿಗೆ ಆಗಮಿಸಿ, ಜನರ ನೋವಿನಲ್ಲಿ ಭಾಗಿಯಾಗಿದ್ದೆ ಎಂದ ಅವರು, ಜನ, ಜಾನುವಾರ ಮೃತಪಟ್ಟ ಬಗ್ಗೆ ಅಧ್ಯಯನ ನಡೆಸಿ, ಪರಿಹಾರಕ್ಕಾಗಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾಗಿ ಅವರು ತಿಳಿಸಿದರು.

ಇಂದಿನ ಯುವಪೀಳಿಗೆ ನಮ್ಮ ಸಮಾಜದ ಆಧಾರಸ್ತಂಭವಾಗಿದ್ದು, ಅಧ್ಯಯನವೊಂದರ ಪ್ರಕಾರ ಶಂ.30ರಷ್ಟು ಯುವಜನರು ಮದ್ಯ, ಮಾದಕದ್ರವ್ಯ ವ್ಯಸನಿಗಳಾಗಿ ತಮ್ಮ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಇವರಿಗೆ ಮಾತೆಯರು, ಸೋದರಿಯರು, ಮಠಮಾನ್ಯಗಳು ಮಾರ್ಗದರ್ಶನ ನೀಡಿ, ಸರಿದಾರಿಗೆ ತರಬೇಕು ಎಂದರು.

ಈಶ್ವರ ಇಲ್ಲಿನ ಉದ್ಯಾನವನ ಇನ್ನೂ ಹೆಚ್ಚಿನ ಅಭಿವೃದ್ಧಿ ಆಗಬೇಕು. ಮಹಿಳೆಯರು, ಮಕ್ಕಳು, ವೃದ್ಧರು ಎಲ್ಲರಿಗೂ ಅನುಕೂಲಕರ ವಾತಾವರಣ ಇರಬೇಕು. ಇದಕ್ಕೆ ಅರಣ್ಯ ಸಚಿವನಾಗಿ ಅಗತ್ಯವಾದ ಅನುದಾನ ನೀಡುವುದಾಗಿ ಅರಣ್ಯ ಸಚಿವ ಈಶ್ವರ ಖಂಡ್ರೆ ಭರವಸೆ ನೀಡಿದರು.

07/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 1.85 ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ: ಪರಂ



ತುಮಕೂರು

ರಾಜ್ಯ ಸರ್ಕಾರಕ್ಕೆ ಮೂರು ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಮೇ 20ರಂದು ತುಮಕೂರಿನಲ್ಲಿ ಆಯೋಜಿಸಿರುವ ಬೃಹತ್ ಸಮಾವೇಶವು ಸಂಪೂರ್ಣವಾಗಿ ಸರ್ಕಾರಿ ಹಾಗೂ ಪಕ್ಷಾತೀತ ಕಾರ್ಯಕ್ರಮವಾಗಿದೆ ಎಂದು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ನಡೆದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತುಮಕೂರು ಜಿಲ್ಲೆಯಲ್ಲಿ ಅಭೂತಪೂರ್ವ ಅಭಿವೃದ್ಧಿ ಕಾರ್ಯಗಳು ನಡೆದಿರುವ ಕಾರಣ ಈ ಸಮಾವೇಶವನ್ನು ಇಲ್ಲಿಯೇ ಹಮ್ಮಿಕೊಳ್ಳಲಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿರುವ ಈ ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ವತಿಯಿಂದ 1.85 ಲಕ್ಷ ಫಲಾನುಭವಿಗಳಿಗೆ ಕಂದಾಯ ಗ್ರಾಮಗಳ ಹಕ್ಕುಪತ್ರ, ಪೌತಿಖಾತೆ ಸೇರಿದಂತೆ ವಿವಿಧ ಸವಲತ್ತುಗಳನ್ನು ವಿತರಿಸಲಾಗುವುದು. ಇದರೊಂದಿಗೆ ವಿವಿಧ ಇಲಾಖೆಗಳ ಯೋಜನೆಗಳಡಿ ಸುಮಾರು 80 ಸಾವಿರಕ್ಕೂ ಹೆಚ್ಚು ಮಂದಿಗೆ ಸವಲತ್ತುಗಳು ತಲುಪಲಿವೆ ಎಂದು ಸಚಿವರು ಮಾಹಿತಿ ನೀಡಿದರು.

ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಗೂ ಜಿಲ್ಲಾ ಮಟ್ಟದ ಸಾಧನೆಗಳನ್ನು ಬಿಂಬಿಸುವ ಬೃಹತ್ ವಸ್ತುಪ್ರದರ್ಶನವನ್ನು ಸಮಾವೇಶದಲ್ಲಿ ಏರ್ಪಡಿಸಲಾಗುತ್ತಿದೆ. ಇದೇ ವೇದಿಕೆಯಲ್ಲಿ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಿಲಾನ್ಯಾಸ ಹಾಗೂ ಲೋಕಾರ್ಪಣೆ ಕಾರ್ಯಕ್ರಮಗಳು ನೆರವೇರಲಿವೆ.

ಸಮಾವೇಶಕ್ಕೆ ಜಿಲ್ಲೆಯಾದ್ಯಂತ 2 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಆಗಮಿಸುವ ನಿರೀಕ್ಷೆಯಿದ್ದು, ಅವರಿಗೆ ಯಾವುದೇ ತೊಂದರೆಯಾಗದಂತೆ ಸಾರಿಗೆ ಹಾಗೂ ಊಟದ ವ್ಯವಸ್ಥೆ ಕಲ್ಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಶಿಷ್ಟಾಚಾರದಂತೆ ಎಲ್ಲಾ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗಿದ್ದು, ಎಲ್ಲರೂ ಪಕ್ಷಭೇದ ಮರೆತು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಪರಮೇಶ್ವರ್ ಮನವಿ ಮಾಡಿದರು.

ಕೆಎಸ್ಆರ್‌ಟಿಸಿ ಅಧ್ಯಕ್ಷ ಎಸ್.ಆರ್. ಶ್ರೀನಿವಾಸ್, ಶಾಸಕರಾದ ಕೆ. ಷಡಾಕ್ಷರಿ, ಸಿ.ಬಿ. ಸುರೇಶ್ ಬಾಬು, ಬಿ. ಸುರೇಶ್‌ಗೌಡ, ಜಿ.ಬಿ. ಜ್ಯೋತಿಗಣೇಶ್, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಎಸ್ಪಿ ಕೆ.ವಿ. ಅಶೋಕ್ ಹಾಗೂ ಜಿ.ಪಂ. ಸಿಇಒ ಬಿ.ವಿ. ಅಶ್ವಿಜ ಉಪಸ್ಥಿತರಿದ್ದರು.

# ಬಡವರ ಅಕ್ಕಿಗೆ ಕನ್ನ: ಓರ್ವನ ಬಂಧನ



ದೊಡ್ಡಬಳ್ಳಾಪುರ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಅನ್ನಭಾಗ್ಯ' ಯೋಜನೆಯಡಿ ಬಡವರಿಗೆ ವಿತರಿಸಬೇಕಾದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ದಾಸ್ತಾನು ಮಾಡಿದ್ದ ಬೃಹತ್ ದಂಧೆಯನ್ನು ಆಹಾರ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ಜಂಟಿ ಕಾರ್ಯಾಚರಣೆಯ ಮೂಲಕ ಭೇದಿಸಿದ್ದಾರೆ. ನಗರದ ಪ್ರಿಯದರ್ಶಿನಿ ಬಡಾವಣೆಯ ಗೋಡೌನ್ ಒಂದರ ಮೇಲೆ ದಾಳಿ ನಡೆಸಿ ಬರೋಬ್ಬರಿ 21.5 ಟನ್ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಗೋಡೌನ್ ಮಾಲೀಕ ತೂಬಗೆರೆ ಹರೀಶ್ ಎಂಬಾತನನ್ನು ಗ್ರಾಮಾಂತರ ಪೊಲೀಸರು ವಶಕ್ಕೆ ಪಡೆದಿದ್ದು, ತನಿಖೆ ಮುಂದುವರಿಸಿದ್ದಾರೆ. ನಗರದ ಹೊರವಲಯದ ಪ್ರಿಯದರ್ಶಿನಿ ಬಡಾವಣೆಯಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಂಗ್ರಹಿಸಿರುವ ಬಗ್ಗೆ ಖಚಿತ ಮಾಹಿತಿ ಪಡೆದ ತಹಶೀಲ್ದಾರ್ ಮಲ್ಲಪ್ಪ ಹಾಗೂ ಇನ್ಸ್‌ಪೆಕ್ಟರ್ ಸಾದಿಕ್ ಪಾಷಾ ನೇತೃತ್ವದ ತಂಡ ನಿನ್ನೆ ಸಂಜೆ ದಾಳಿ ನಡೆಸಿತು. ಈ ವೇಳೆ ಆರೋಪಿ ಹರೀಶ್ ನಿರೀಕ್ಷೆಗೂ ಮೀರಿ ಮೂರು ಪ್ರತ್ಯೇಕ ಸ್ಥಳಗಳಲ್ಲಿ ಅಕ್ಕಿಯನ್ನು ಬಚ್ಚಿಟ್ಟಿರುವುದು ಬೆಳಕಿಗೆ ಬಂದಿದೆ. ದಾಳಿಯಲ್ಲಿ 21.5 ಟನ್ ಅಕ್ಕಿ ಹಾಗೂ ಅಲ್ಪ ಪ್ರಮಾಣದ ರಾಗಿಯನ್ನು ಜಪ್ತಿ ಮಾಡಲಾಗಿದೆ. ರಾಜ್ಯದ ಆಹಾರ ಸಚಿವರ ಉಸ್ತುವಾರಿ ಜಿಲ್ಲೆಯಲ್ಲೇ ಇಷ್ಟೊಂದು ಬೃಹತ್ ಪ್ರಮಾಣದ ಪಡಿತರ ಅಕ್ಕಿ ಅಡ್ಡದಾರಿ ಹಿಡಿದಿರುವುದು ಸಾರ್ವಜನಿಕರಲ್ಲಿ ತೀವ್ರ ಆಶ್ಚರ್ಯ ಮೂಡಿಸಿದೆ. "ಸಚಿವರ ಜಿಲ್ಲೆಯಲ್ಲೇ ಹೀಗಾದರೆ, ರಾಜ್ಯದ ಉಳಿದ ಭಾಗಗಳ ಪರಿಸ್ಥಿತಿ ಏನು?" ಎಂಬ ಚರ್ಚೆಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ. ಯಶಸ್ವಿ ಕಾರ್ಯಾಚರಣೆಯಲ್ಲಿ ಚತಾಲ್ಲೂಕು ಆಹಾರ ನಿರೀಕ್ಷಕ ಅನಂತ ಕುಮಾರ್, ಪೊಲೀಸ್ ಠಾಣೆಯ ಪಿಎಸ್ಐ ಚಂದ್ರಕಲಾ, ಎಎಸ್ಐ ರಂಗಸ್ವಾಮಿ ಹಾಗೂ ಸಿಬ್ಬಂದಿ ಶ್ರೀನಿವಾಸ್ ಪಾಲ್ಗೊಂಡಿದ್ದರು. ಅಕ್ರಮ ದಂಧೆಗಳ ಬಗ್ಗೆ ಮಾಹಿತಿ ನೀಡುತ್ತಿರುವ ಜಾಗೃತ ನಾಗರಿಕರ ಕಾರ್ಯವನ್ನು ಅಧಿಕಾರಿಗಳು ಶ್ಲಾಘಿಸಿದ್ದಾರೆ.

# ಸಂಚಾರ ಮಾರ್ಗ ಬದಲಾವಣೆ

ತುಮಕೂರು

ನಗರದ ಹೃದಯಭಾಗದ ರಾಷ್ಟ್ರೀಯ ಹೆದ್ದಾರಿ–73 (ಬಿ.ಹೆಚ್. ರಸ್ತೆ) ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳು ಭರದಿಂದ ಸಾಗುತ್ತಿವೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ ಮತ್ತು ಸುಗಮ ಸಂಚಾರದ ಹಿತದೃಷ್ಟಿಯಿಂದ ಭಾರಿ ಹಾಗೂ ಮಧ್ಯಮ ಸರಕು ಸಾಗಾಣಿಕೆ ವಾಹನಗಳ ಸಂಚಾರ ಮಾರ್ಗವನ್ನು ಬದಲಾವಣೆ ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಆದೇಶ ಹೊರಡಿಸಿದ್ದಾರೆ.

ನಗರದ ಶೆಲ್ ಪೆಟ್ರೋಲ್ ಬಂಕ್‌ನಿಂದ ಬಟವಾಡಿವರೆಗೆ ರಸ್ತೆ ಕಾಮಗಾರಿ ಪ್ರಗತಿಯಲ್ಲಿದೆ. ಕಾಮಗಾರಿ ನಡೆಯುವ ಸ್ಥಳಗಳಲ್ಲಿ ಅಪಘಾತಗಳನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಈ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ಈ ಆದೇಶವು ಮೇ 1 ರಿಂದ ಜಾರಿಗೆ ಬಂದಿದ್ದು, ಕಾಮಗಾರಿ ಪೂರ್ಣಗೊಳ್ಳುವವರೆಗೆ ಅನ್ವಯವಾಗಲಿದೆ.

**ವಾಹನ ಸವಾರರಿಗೆ ನಿಗದಿಪಡಿಸಿದ ಪರ್ಯಾಯ ಮಾರ್ಗಗಳು ಹೀಗಿವೆ:**

ಕುಣಿಗಲ್‌ನಿಂದ ಮಧುಗಿರಿ, ಶಿರಾ ಕಡೆಗೆ: ಕುಣಿಗಲ್ ಜಂಕ್ಷನ್ ಮೂಲಕ ಬರುವ ಭಾರಿ ವಾಹನಗಳು ಗುಬ್ಬಿ ರಿಂಗ್ ರಸ್ತೆ ಜಂಕ್ಷನ್, ದಿಬ್ಬೂರು ಸರ್ಕಲ್ ಹಾಗೂ ಶಿರಾ ಗೇಟ್ 80 ಅಡಿ ರಸ್ತೆಯ ಮೂಲಕ ಸಾಗಬೇಕು.

ತಿಪಟೂರಿನಿಂದ ಮಧುಗಿರಿ, ಶಿರಾ ಕಡೆಗೆ: ತಿಪಟೂರು ಕಡೆಯಿಂದ ಬರುವ ವಾಹನಗಳು ಗುಬ್ಬಿ ರಿಂಗ್ ರಸ್ತೆ ಜಂಕ್ಷನ್, ದಿಬ್ಬೂರು ಸರ್ಕಲ್ ಮೂಲಕ ಶಿರಾ ಗೇಟ್ ತಲುಪಿ ಮುಂದೆ ಸಾಗಬೇಕು.

ಶಿರಾ ಮತ್ತು ಮಧುಗಿರಿ ಕಡೆಯಿಂದ ಬರುವ ಸರಕು ವಾಹನಗಳು ಶಿರಾ ಗೇಟ್ 80 ಅಡಿ ರಸ್ತೆ, ದಿಬ್ಬೂರು ಸರ್ಕಲ್ ಮೂಲಕ ಗುಬ್ಬಿ ರಿಂಗ್ ರಸ್ತೆ ಜಂಕ್ಷನ್ ತಲುಪಬೇಕು.

ಈ ಮಾರ್ಗದಲ್ಲಿ ಚಲಿಸುವ ವಾಹನಗಳು ಗುಬ್ಬಿ ರಿಂಗ್ ರಸ್ತೆ ಜಂಕ್ಷನ್, ಕುಣಿಗಲ್ ಜಂಕ್ಷನ್ ನಂತರ ಜಾಸ್ ಟೋಲ್ (NH 48) ರಸ್ತೆಯನ್ನು ಬಳಸಬೇಕು.

ನಗರದ ಪ್ರಮುಖ ಬಸ್ ನಿಲ್ದಾಣದಿಂದ ಬೆಂಗಳೂರು ಕಡೆಗೆ ಹೊರಡುವ ಕೆಎಸ್ಆರ್‌ಟಿಸಿ ಬಸ್‌ಗಳು ಅಶೋಕ ರಸ್ತೆ, ಕೋಡಿ ಸರ್ಕಲ್, ಕೋತಿ ತೋಪು ಹಾಗೂ ಹನುಮಂತಪುರ ರಸ್ತೆಯ ಮೂಲಕ ಸಂಚರಿಸಲು ಸೂಚಿಸಲಾಗಿದೆ.

"ಸಾರ್ವಜನಿಕರು ಹಾಗೂ ವಾಹನ ಚಾಲಕರು ಪೊಲೀಸ್ ಇಲಾಖೆಯ ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ನಿಯಮ ಉಲ್ಲಂಘಿಸುವ ವಾಹನಗಳ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುವುದು" ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

# 'ನಿಷ್ಠಾವಂತರನ್ನು ಕಡೆಗಣಿಸಬೇಡಿ, ಪಕ್ಷ ವಿರೋಧಿಗಳಿಗೆ ಮನ್ನಣೆ ನೀಡಬೇಡಿ'

ದೊಡ್ಡಬಳ್ಳಾಪುರ

ಜೆಡಿಎಸ್ ಪಕ್ಷದ 25ನೇ ವರ್ಷದ 'ಬೆಳ್ಳಿಹಬ್ಬ'ದ ಸಂಭ್ರಮದ ಸಮಾಲೋಚನಾ ಸಭೆಯಲ್ಲಿ ತಾಲ್ಲೂಕು ಜೆಡಿಎಸ್‌ನ ಒಳಗಿನ ಭಿನ್ನಾಭಿಪ್ರಾಯಗಳು ಬಹಿರಂಗಗೊಂಡಿವೆ. "ಪಕ್ಷಕ್ಕಾಗಿ ನಿಷ್ಠೆಯಿಂದ ದುಡಿಯುವವರನ್ನು ಕಡೆಗಣಿಸಿ, ಪಕ್ಷ ವಿರೋಧಿ ಚಟುವಟಿಕೆ ನಡೆಸುವವರಿಗೆ ಜಿಲ್ಲಾಧ್ಯಕ್ಷರು ಮನ್ನಣೆ ನೀಡುತ್ತಿರುವುದು ಸರಿಯಲ್ಲ" ಎಂದು ರಾಜ್ಯ ಜೆಡಿಎಸ್ ಪ್ರಮುಖರಾದ ಹುಸ್ಕೂರ್ ಆನಂದ್ ಅಸಮಾಧಾನ ವ್ಯಕ್ತಪಡಿಸಿದರು.

ದೊಡ್ಡಬೆಳವಂಗಲದ ಖಾಸಗಿ ಕಲ್ಯಾಣ ಮಂಟಪದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಪಕ್ಷ ಸಂಘಟನೆ ಸುಗಮವಾಗಿ ನಡೆಯಬೇಕಾದರೆ ಎಲ್ಲರನ್ನೂ ಒಟ್ಟಾಗಿ ತೆಗೆದುಕೊಂಡು ಹೋಗುವ ದೊಡ್ಡತನವನ್ನು ಜಿಲ್ಲಾ ನಾಯಕರು ತೋರಬೇಕು ಎಂದು ಒತ್ತಾಯಿಸಿದರು.

"ದೇವೇಗೌಡರ ತತ್ವ ಸಿದ್ಧಾಂತ ನಂಬಿ, ಯಾವುದೇ ಆಮಿಷಕ್ಕೆ ಬಲಿಯಾಗದೆ 30–35 ವರ್ಷಗಳಿಂದ ಪಕ್ಷ ಕಟ್ಟಿದ ಸಾವಿರಾರು ಕಾರ್ಯಕರ್ತರು ತಾಲ್ಲೂಕಿನಲ್ಲಿದ್ದಾರೆ. ಅಂತಹವರನ್ನು ಗುರುತಿಸಿ ಸ್ಥಾನಮಾನ ನೀಡಿದರೆ ಪಕ್ಷ ಪ್ರಬಲವಾಗಲಿದೆ. ಬಮೂಲ್ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ವಿರುದ್ಧ ಕೆಲಸ ಮಾಡಿದವರಿಗೆ ಇಂದು ಅಧಿಕಾರ ನೀಡಿರುವುದು ನಿಷ್ಠಾವಂತರಿಗೆ ನೋವುಂಟು ಮಾಡಿದೆ" ಎಂದು ವಕೀಲ ಸತೀಶ್ ಸೇರಿದಂತೆ ಹಲವು ಮುಖಂಡರು ಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು.



ತಾಲ್ಲೂಕಿನ ಪಕ್ಷ ಸಂಘಟನೆಯಲ್ಲಿರುವ ಲೋಪದೋಷಗಳ ಬಗ್ಗೆ ಈಗಾಗಲೇ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರ ಗಮನಕ್ಕೆ ತರಲಾಗಿದೆ. ಬೆಳ್ಳಿಹಬ್ಬದ ಕಾರ್ಯಕ್ರಮದ ನಂತರ ಎಲ್ಲವನ್ನೂ ಸರಿಪಡಿಸುವ ಭರವಸೆಯನ್ನು ಅವರು ನೀಡಿದ್ದಾರೆ ಎಂದು ಹುಸ್ಕೂರ್ ಆನಂದ್ ಮಾಹಿತಿ ನೀಡಿದರು.

ಮೇ 8ರಂದು ನಡೆಯಲಿರುವ ರಾಜ್ಯ ಮಟ್ಟದ ಬೆಳ್ಳಿಹಬ್ಬದ ಕಾರ್ಯಕ್ರಮದಲ್ಲಿ ತಾಲ್ಲೂಕಿನಿಂದ ಸಾವಿರಾರು ಸಂಖ್ಯೆಯಲ್ಲಿ ನಿಷ್ಠಾವಂತ ಕಾರ್ಯಕರ್ತರು ಭಾಗವಹಿಸುವ ಮೂಲಕ ಜೆಡಿಎಸ್ ಶಕ್ತಿ ಪ್ರದರ್ಶನ ಮಾಡಲಿದ್ದಾರೆ. ಭಿನ್ನಾಭಿಪ್ರಾಯಗಳಿದ್ದರೂ ಪಕ್ಷದ ಹಿತದೃಷ್ಟಿಯಿಂದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಯುವ ಜೆಡಿಎಸ್ ಮುಖಂಡ ಶ್ರೀನಿವಾಸ್ ಗೌಡ, ನಿರ್ಮಾಪಕ ಪುಟ್ಟರಾಜುಗೌಡ, ಸ್ಥಳೀಯ ಮುಖಂಡರಾದ ಹನುಮಂತರಾಜು, ಚನ್ನೇಗೌಡ, ರಾಜಣ್ಣ, ಸುರೇಶ್, ಮೂರ್ತಿ, ನಾರಾಯಣ ಸ್ವಾಮಿ ಸೇರಿದಂತೆ ದೊಡ್ಡಬೆಳವಂಗಲ ಹೋಬಳಿಯ ನೂರಾರು ಪ್ರಮುಖ ಕಾರ್ಯಕರ್ತರು ಉಪಸ್ಥಿತರಿದ್ದರು.

# ಪಂಚ ರಾಜ್ಯಗಳ ಚುನಾವಣಾ ಫಲಿತಾಂಶಕ್ಕೆ ಕಮಲ ಪಡೆ ಹರ್ಷ



ಬಾಗೇಪಲ್ಲಿ

ಐದು ರಾಜ್ಯಗಳ ವಿಧಾನಸಭಾ ಚುನಾವಣೆಯ ಪೈಕಿ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿದ ಹಿನ್ನೆಲೆಯಲ್ಲಿ, ಬಾಗೇಪಲ್ಲಿ ತಾಲ್ಲೂಕು ಬಿಜೆಪಿ ಘಟಕದ ವತಿಯಿಂದ ಪಟ್ಟಣದ ಡಾ. ಎಚ್.ಎನ್. ವೃತ್ತದಲ್ಲಿ ಭರ್ಜರಿ ವಿಜಯೋತ್ಸವ ಆಚರಿಸಲಾಯಿತು.

ಬಿಜೆಪಿ ಮಂಡಲಾಧ್ಯಕ್ಷ ಪ್ರತಾಪ್ ಅವರ ನೇತೃತ್ವದಲ್ಲಿ ಜಮಾಯಿಸಿದ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ಪರ ಘೋಷಣೆಗಳನ್ನು ಕೂಗುತ್ತಾ ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿ ವಿತರಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಂಡಲಾಧ್ಯಕ್ಷ ಪ್ರತಾಪ್, "ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಅಸ್ಸಾಂ ರಾಜ್ಯಗಳ ಫಲಿತಾಂಶ ಹೊರಬಿದ್ದಿದೆ. ಪಶ್ಚಿಮ ಬಂಗಾಳದ ಗೂಂಡಾ ಸರ್ಕಾರಕ್ಕೆ ಅಂತ್ಯ ಹಾಡುವ ಕಾಲ ಬಂದಿದೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರ ನಾಯಕತ್ವದಲ್ಲಿ ದೇಶಾದ್ಯಂತ ಜನಪರ ಸರ್ಕಾರಗಳು ಅಧಿಕಾರಕ್ಕೆ ಬರುತ್ತಿವೆ. ಇದರ ಪ್ರಭಾವ ಕರ್ನಾಟಕದ ಮೇಲೆಯೂ ಆಗಲಿದ್ದು, ಮುಂದಿನ ದಿನಗಳಲ್ಲಿ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಮುನಿರಾಜು ಅವರು ಜಯಗಳಿಸುವುದು ಖಚಿತ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪಕ್ಷದ ಮುಖಂಡರಾದ ವೆಂಕಟೇಶ್, ಗಂಗಿರೆಡ್ಡಿ ಹಾಗೂ ಮಂಜುಳಾ ಅವರು ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳು ಹಾಗೂ ಪಕ್ಷದ ಸಂಘಟನೆಯೇ ಈ ಗೆಲುವಿಗೆ ಕಾರಣ ಎಂದು ಅಭಿಪ್ರಾಯಪಟ್ಟರು. ವಿಜಯೋತ್ಸವದಲ್ಲಿ ಮುಖಂಡರಾದ ರೂಪಾ, ಗಂಗುಲಮ್ಮ, ಶಿವಪ್ಪ, ಕೆಟಿವಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡು ಸಂಭ್ರಮ ಹಂಚಿಕೊಂಡರು. ಐದು ರಾಜ್ಯಗಳ ವಿಧಾನಸಭಾ ಚುನಾವಣೆಯ ಪೈಕಿ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿದ ಹಿನ್ನೆಲೆಯಲ್ಲಿ, ಬಾಗೇಪಲ್ಲಿ ತಾಲ್ಲೂಕು ಬಿಜೆಪಿ ಘಟಕದ ವತಿಯಿಂದ ಪಟ್ಟಣದ ಡಾ. ಎಚ್.ಎನ್. ವೃತ್ತದಲ್ಲಿ ಭರ್ಜರಿ ವಿಜಯೋತ್ಸವ ಆಚರಿಸಲಾಯಿತು.

ವಿಜಯೋತ್ಸವದಲ್ಲಿ ಮುಖಂಡರಾದ ರೂಪಾ, ಗಂಗುಲಮ್ಮ, ಶಿವಪ್ಪ, ಕೆಟಿವಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡು ಸಂಭ್ರಮ ಹಂಚಿಕೊಂಡರು. ಐದು ರಾಜ್ಯಗಳ ವಿಧಾನಸಭಾ ಚುನಾವಣೆಯ ಪೈಕಿ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿದ ಹಿನ್ನೆಲೆಯಲ್ಲಿ, ಬಾಗೇಪಲ್ಲಿ ತಾಲ್ಲೂಕು ಬಿಜೆಪಿ ಘಟಕದ ವತಿಯಿಂದ ಪಟ್ಟಣದ ಡಾ. ಎಚ್. ಎನ್. ವೃತ್ತದಲ್ಲಿ ಭರ್ಜರಿ ವಿಜಯೋತ್ಸವ ಆಚರಿಸಲಾಯಿತು.

ಬಿಜೆಪಿ ಮಂಡಲಾಧ್ಯಕ್ಷ ಪ್ರತಾಪ್ ಅವರ ನೇತೃತ್ವದಲ್ಲಿ ಜಮಾಯಿಸಿದ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ಪರ ಘೋಷಣೆಗಳನ್ನು ಕೂಗುತ್ತಾ ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿ ವಿತರಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಂಡಲಾಧ್ಯಕ್ಷ ಪ್ರತಾಪ್, "ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಅಸ್ಸಾಂ ರಾಜ್ಯಗಳ ಫಲಿತಾಂಶ ಹೊರಬಿದ್ದಿದೆ. ಪಶ್ಚಿಮ ಬಂಗಾಳದ ಗೂಂಡಾ ಸರ್ಕಾರಕ್ಕೆ ಅಂತ್ಯ ಹಾಡುವ ಕಾಲ ಬಂದಿದೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರ ನಾಯಕತ್ವದಲ್ಲಿ ದೇಶಾದ್ಯಂತ ಜನಪರ ಸರ್ಕಾರಗಳು ಅಧಿಕಾರಕ್ಕೆ ಬರುತ್ತಿವೆ. ಇದರ ಪ್ರಭಾವ ಕರ್ನಾಟಕದ ಮೇಲೆಯೂ ಆಗಲಿದ್ದು, ಮುಂದಿನ ದಿನಗಳಲ್ಲಿ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಮುನಿರಾಜು ಅವರು ಜಯಗಳಿಸುವುದು ಖಚಿತ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪಕ್ಷದ ಮುಖಂಡರಾದ ವೆಂಕಟೇಶ್, ಗಂಗಿರೆಡ್ಡಿ ಹಾಗೂ ಮಂಜುಳಾ ಅವರು ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳು ಹಾಗೂ ಪಕ್ಷದ ಸಂಘಟನೆಯೇ ಈ ಗೆಲುವಿಗೆ ಕಾರಣ ಎಂದು ಅಭಿಪ್ರಾಯಪಟ್ಟರು.

ವಿಜಯೋತ್ಸವದಲ್ಲಿ ಮುಖಂಡರಾದ ರೂಪಾ, ಗಂಗುಲಮ್ಮ, ಶಿವಪ್ಪ, ಕೆಟಿವಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡು ಸಂಭ್ರಮ ಹಂಚಿಕೊಂಡರು.

# ರೇಷ್ಮೆಗೂಡು ಖರೀದಿಸಲು, ಕೆಎಸ್‌ಎಂಬಿ ಮಧ್ಯಪ್ರವೇಶ ಮಾಡಲು ಒತ್ತಾಯ

ವಿಜಯಪುರ

ಬೇಸಿಗೆಯ ಬಿಸಿಲಿನ ತಾಪಮಾನ ಏರಿಕೆಯ ನಡುವೆಯೂ, ಹೆಚ್ಚಿನ ಪ್ರಮಾಣದಲ್ಲಿ ರೇಷ್ಮೆಗೂಡು ಉತ್ಪಾದನೆ ಮಾಡುತ್ತಿರುವ ರೈತರು, ಮಾರುಕಟ್ಟೆಗೆ ತಂದಾಗ, ಗೂಡು ಖರೀದಿಗಾಗಿ ಕರ್ನಾಟಕ ರೇಷ್ಮೆ ಮಾರುಕಟ್ಟೆ ಮಂಡಳಿಯವರು ನೇರವಾಗಿ ಬಂದು ಖರೀದಿಸುವ ಮೂಲಕ ರೈತರಿಗೆ ಚೈತನ್ಯ ನೀಡಬೇಕಿದೆ.



ಮಾರುಕಟ್ಟೆಗೆ ಬರುತ್ತಿರುವ ಗೂಡಿನ ಆವಕ ಪ್ರಮಾಣ ಹೆಚ್ಚಾಗಿರುವ ಹಿನ್ನೆಲೆಯಲ್ಲಿ, ನೂಲು ಬಿಚ್ಚಾಣಿಕೆದಾರರು, ಸರಿಯಾಗಿ ಬೆಲೆ ಕೊಡುತ್ತಿಲ್ಲ. ರೇಷ್ಮೆನೂಲಿನ ದರ ಕಡಿಮೆಯಾಗದಿದ್ದರೂ, ಮಾರುಕಟ್ಟೆಯಲ್ಲಿ ರೈತರಿಗೆ ಉತ್ತಮ ಬೆಲೆ ಕೊಡುತ್ತಿಲ್ಲ. ಒಂದು ಕೆ.ಜಿ.ಗೂಡಿನ ಬೆಲೆ ಏಕಾಏಕಿ 200 ರೂಪಾಯಿ ಕಡಿಮೆಯಾಗಿದ್ದು, 100 ಕೆ.ಜಿ.ಗೂಡು ಬೆಳೆಯುವ ರೈತನಿಗೆ ಒಂದು ಬೆಳೆಗೆ 20 ಸಾವಿರ ಕಡಿಮೆಯಾಗುತ್ತಿದ್ದು, ಕರ್ನಾಟಕ ರೇಷ್ಮೆ ಮಾರುಕಟ್ಟೆ ಮಂಡಳಿಯವರು ಮಧ್ಯಪ್ರವೇಶ ಮಾಡಿ, ರೈತರಿಂದ ಗೂಡು ಖರೀದಿಸಿದರೆ ಮಾತ್ರವೇ ರೈತರಿಗೆ ನ್ಯಾಯ ಸಿಗಲು ಸಾಧ್ಯ.

> 20 ದಿನಗಳು ಕಷ್ಟಪಟ್ಟು ಗೂಡು ಬೆಳೆದರೂ, ಕೆ.ಜಿ.ಗೆ 200 ರೂಪಾಯಿ ನಷ್ಟವಾಗುತ್ತಿದೆ. ಇನ್ನು ಕಷ್ಟಪಟ್ಟು ಬೆಳೆಯುವುದು ಯಾಕೆ? ಸರಕಾರ ಮಧ್ಯಪ್ರವೇಶ ಮಾಡದಿದ್ದರೆ ಉದ್ಯಮದಿಂದ ಹೊರಹೋಗಬೇಕಾದಂತಹ ಅನಿವಾರ್ಯತೆ ಎದುರಾಗಿದೆ.
>
> \- ಚಂದ್ರಶೇಖರ್ ರೇಷ್ಮೆ ಬೆಳೆಗಾರ

ಕರ್ನಾಟಕ ರೇಷ್ಮೆ ಮಾರುಕಟ್ಟೆ ಮಂಡಳಿಯು, ಮಾರುಕಟ್ಟೆಗಳಲ್ಲಿ ರೈತರಿಗೆ ಸೂಕ್ತವಾದ ಬೆಲೆ ಸಿಗದೇ ಇದ್ದಾಗ, ಮಧ್ಯ ಪ್ರವೇಶ ಮಾಡಿ, ರೈತರಿಂದ ನೇರವಾಗಿ ಗೂಡು ಖರೀದಿಸಬೇಕು ಎನ್ನುವ ಉದ್ದೇಶದಿಂದಲೇ ಈ ಮಂಡಳಿಗಳನ್ನು ಸ್ಥಾಪನೆ ಮಾಡಿದ್ದರೂ ಸಹಾ, ಮಂಡಳಿಯು ಇದುವರೆಗೂ ಗೂಡು ಖರೀದಿಗೆ ಮುಂದಾಗಿಲ್ಲದ ಕಾರಣ, ನೂಲು ಬಿಚ್ಚಾಣಿಕೆದಾರರಿಗೆ ಪೈಪೋಟಿ ಇಲ್ಲದ ಕಾರಣ, ಅವರು ನೀಡಿದ ಬೆಲೆಗೆ ರೈತರು, ಗೂಡು ಮಾರಾಟ ಮಾಡಿ ಹೋಗಬೇಕಾದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸರಕಾರಕ್ಕೆ ಬರುವ ಆದಾಯವು ಕುಂಠಿತವಾಗುತ್ತಿದೆ.

ರೇಷ್ಮೆಗೂಡು ಬೆಳೆಯುತ್ತಿರುವ ರೈತರಿಗೆ, ಹುಳು ಮನೆ ಸ್ವಚ್ಛತೆ, ಹುಳುವಿನ ಖರೀದಿ, ಪೇಪರ್, ಔಷಧಿಗಳು, ಚಂದ್ರಿಕೆ, ಗೂಡು ಬಿಡಿಸುವ ಕೂಲಿ, ಗೂಡು ಸ್ವಚ್ಛಗೊಳಿಸುವ ಕೂಲಿ, ಮಾರುಕಟ್ಟೆಗೆ ಸಾಗಾಣಿಕೆ ಮಾಡಿಕೊಂಡು ಬರುವುದು, ಹಿಪ್ಪುನೇರಳೆ ಸೊಪ್ಪು, ಎಲ್ಲಾ ಸೇರಿ ಒಂದು ಕೆ.ಜಿ.ಗೂಡು ಬೆಳೆಯುವುದಕ್ಕೆ 550 ರೂಪಾಯಿ ಖರ್ಚು ಬರುತ್ತಿದೆ. ಮಾರುಕಟ್ಟೆಯಲ್ಲಿ ಈಗ ರೈತರಿಗೆ ಸಿಗುತ್ತಿರುವ ಬೆಲೆಯೂ ದುಡಿಮೆ ಬಂಡವಾಳಕ್ಕೆ ಸಮವಾಗುತ್ತಿದೆಯೇ ಹೊರತು, 20 ದಿನಗಳ ಕಾಲ, ರೇಷ್ಮೆಹುಳು ಸಾಕಾಣಿಕೆಯಲ್ಲಿ ರೈತರು ಪಡುತ್ತಿರುವ ಶ್ರಮಕ್ಕೆ ಬೆಲೆ ಸಿಗದಂತಾಗಿದೆ. ಕೆ.ಜಿ.ಗೂಡಿಗೆ ಕನಿಷ್ಟ 600 ರೂಪಾಯಿ ಬೆಲೆ ಸಿಕ್ಕಿದರೆ, 100 ಕೆ.ಜಿ.ಗೂಡು ಬೆಳೆಯುವ ರೈತನಿಗೆ ಕನಿಷ್ಟ ತಿಂಗಳಿಗೆ 10 ಸಾವಿರ ಲಾಭ ಸಿಗಲಿದೆ. ಆದರೂ ಅವರ ಶ್ರಮಕ್ಕೆ ತಕ್ಕಷ್ಟು ಪ್ರತಿಫಲ ಸಿಗುವುದಿಲ್ಲ.

ರೈತರು, ಬೆಳೆದ ಗೂಡನ್ನು ಹೆಚ್ಚು ದಿನಗಳ ಕಾಲ, ಮನೆಗಳಲ್ಲಿ ಇಟ್ಟುಕೊಳ್ಳುವುದಕ್ಕೂ ಸಾಧ್ಯವಾಗುವುದಿಲ್ಲ. 6–7 ದಿನಕ್ಕೆ ಮಾರುಕಟ್ಟೆಗೆ ತರಲೇಬೇಕು. ಆದರೆ, ನೂಲು ಬಿಚ್ಚಾಣಿಕೆದಾರರು, ಒಮ್ಮೆ ನೂಲು ಬಿಚ್ಚಾಣಿಕೆ ಮಾಡಿದರೆ, ಅದನ್ನು ಯಾವಾಗ ಬೇಕಾದರೂ ಮಾರಾಟ ಮಾಡುವುದಕ್ಕೆ ಅವರಿಗೆ ಅವಕಾಶವಿರುತ್ತದೆ. ಆದ್ದರಿಂದ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯು ಮಧ್ಯಪ್ರವೇಶ ಮಾಡಬೇಕಿದೆ.

ಪ್ರಸ್ತುತ ರೇಷ್ಮೆಗೂಡು ಮಾರುಕಟ್ಟೆಗಳಲ್ಲಿ ಮಿಶ್ರತಳಿಯ ರೇಷ್ಮೆಗೂಡಿನ ಬೆಲೆ ಕೆ.ಜಿ.ಗೆ 526 ರೂಪಾಯಿಗೆ ಮಾರಾಟವಾಗುತ್ತಿದೆ. ದ್ವಿತಳಿ ಗೂಡು 650 ರಿಂದ 700 ರೂಪಾಯಿವರೆಗೂ ಮಾರಾಟವಾಗುತ್ತಿದೆ.

# 7ರಂದು ಉಚಿತ ಆರೋಗ್ಯ ತಪಾಸಣಾ ಶಿಬಿರ

ವಿಜಯಪುರ

ಹೋಬಳಿಯ ಹಾರೋಹಳ್ಳಿ ಗ್ರಾ.ಪಂ. ವ್ಯಾಪ್ತಿಯ ದೊಡ್ಡಮುದ್ದೇನಹಳ್ಳಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ, ಇದೇ 7ರಂದು ಬೆಳಿಗ್ಗೆ 10 ಗಂಟೆಯಿಂದ 3ಗಂಟೆಯವರೆಗೆ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ಆಯೋಜನೆ ಮಾಡಲಾಗಿದೆ.

ಸತ್ಯ ಎಜುಕೇರ್ ಕಾಂಪಿಟೆನ್ಸಿ ಟ್ರಸ್ಟ್, ಮತ್ತು ಆಕಾಶ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಮಲ್ಲಿಗೆ ಚಿಲ್ಡ್ರನ್ಸ್ ಕ್ಲಿನಿಕ್ ಅಂಡ್ ಡಯಾಗ್ನೋಸ್ಟಿಕ್ ಸೆಂಟರ್ ವಿಜಯಪುರ, ಇವರ ಸಹಯೋಗದಲ್ಲಿ, ಕಣ್ಣಿನ ತಜ್ಞರು, ಸಾಮಾನ್ಯ ರೋಗ ತಜ್ಞರು, ಸ್ತ್ರೀ ರೋಗ ತಜ್ಞರು, ಮೂಳೆ ತಜ್ಞರು, ಸೇರಿದಂತೆ ವಿವಿಧ ತಜ್ಞರು ಶಿಬಿರದಲ್ಲಿ ಭಾಗವಹಿಸಲಿದ್ದಾರೆ.

# ಕುಡಿಯುವ ನೀರು ಪೂರೈಕೆ ಸ್ಥಗಿತ

ತುಮಕೂರು

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೇಮಾವತಿ ಕುಡಿವ ನೀರನ್ನು ಸರಬರಾಜು ಮಾಡುವ ಜಲಸಂಗ್ರಹಗಾರದ ತುರ್ತು ದುರಸ್ತಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಈ ಹಿನ್ನೆಲೆ ನಗರದ ವಿವಿಧ ವಾರ್ಡ್‌ಗಳಲ್ಲಿ ಇದೇ 5 ರಿಂದ 8ರವರೆಗೆ ಒಟ್ಟು 4 ದಿನಗಳ ಕಾಲ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

**ಯಾವೆಲ್ಲಾ ವಾರ್ಡ್‌ಗಳಲ್ಲಿ ವ್ಯತ್ಯಯ?**

ದುರಸ್ತಿ ಕಾರ್ಯದ ಅವಧಿಯಲ್ಲಿ ವಾರ್ಡ್ ಸಂಖ್ಯೆ 6, 10, 11, 12, 13, 14, 15, 17, 18, 24, 28, 29, 30 ಮತ್ತು 31ರಲ್ಲಿ ಹೇಮಾವತಿ ಕುಡಿಯುವ ನೀರು ಸರಬರಾಜು ಇರುವುದಿಲ್ಲ. ಕಾಮಗಾರಿಯನ್ನು ಸುಗಮವಾಗಿ ನಡೆಸಲು ವಾಟರ್ ಶೆಟ್‌ಡೌನ್ ಮಾಡುವುದು ಅನಿವಾರ್ಯವಾಗಿದ್ದು, ಸಾರ್ವಜನಿಕರು ಲಭ್ಯವಿರುವ ನೀರನ್ನು ಮಿತವಾಗಿ ಬಳಸಿ ಸಹಕರಿಸಬೇಕು ಎಂದು ಪಾಲಿಕೆಯ ಕಾರ್ಯಪಾಲಕ ಅಭಿಯಂತರರು ಕೋರಿದ್ದಾರೆ.

# ಕೆರೆಗಳನ್ನು ತ್ವರಿತವಾಗಿ ಗುರುತಿಸಿ, ಅಧಿಸೂಚನೆ ಹೊರಡಿಸಲು ಸೂಚನೆ



ತುಮಕೂರು

ಇಲ್ಲಿನ ಶಿರಾ ತಾಲ್ಲೂಕಿನಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿ ಮತ್ತು ರೈಲ್ವೆ ಕಾಮಗಾರಿಗಳಿಗೆ ಮಣ್ಣಿನ ಅವಶ್ಯಕತೆ ಹೆಚ್ಚಿದ್ದು, ಅಮೃತ್ ಸರೋವರ್ ಯೋಜನೆಯಡಿ ಕೆರೆಗಳನ್ನು ತ್ವರಿತವಾಗಿ ಗುರುತಿಸಿ ಅಧಿಸೂಚನೆ ಹೊರಡಿಸುವಂತೆ ನವದೆಹಲಿಯ ಕರ್ನಾಟಕ ರಾಜ್ಯ ವಿಶೇಷ ಪ್ರತಿನಿಧಿ ಹಾಗೂ ಶಿರಾ ಶಾಸಕ ಟಿ.ಬಿ. ಜಯಚಂದ್ರ ಅವರು ಗ್ರಾಮೀಣ ಅಭಿವೃದ್ಧಿ ಮತ್ತು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಲಯ ಸಭಾಂಗಣದಲ್ಲಿ ಸೋಮವಾರ ಅಮೃತ್ ಸರೋವರ್ ಯೋಜನೆ ಕುರಿತಂತೆ ಸಭೆ ನಡೆಸಿ ಅವರು ಮಾತನಾಡುತ್ತಾ, ಕೆರೆಗಳಲ್ಲಿನ ಮಣ್ಣು ಹಾಗೂ ಹೂಳೆತ್ತುವ ಕುರಿತು ಪ್ರಸ್ತಾವನೆಗಳನ್ನು ತಕ್ಷಣ ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದರು. ಇದರಿಂದ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ರಾಯಲ್ಟಿ ವಿನಾಯಿತಿ ದೊರೆಯಲಿದೆ ಎಂದು ತಿಳಿಸಿದರು.

"ಅಮೃತ್ ಸರೋವರ್ ಯೋಜನೆ"ಯಡಿ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಕೆರೆಗಳನ್ನು ಗುರುತಿಸಿ ಅಧಿಸೂಚನೆ ಹೊರಡಿಸುವುದು ಹಾಗೂ ರೈಲ್ವೆ ಮತ್ತು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಿಗೆ ಅಗತ್ಯವಿರುವ ಮಣ್ಣನ್ನು ಈ ಕೆರೆಗಳಿಂದ ಬಳಸುವ ಕುರಿತು ಸಂಬಂಧಿತ ಇಲಾಖೆಗಳಿಗೆ ನಿರ್ದೇಶನ ನೀಡಿದರು.

ಇದೇ ವೇಳೆ, ರಾಷ್ಟ್ರೀಯ ಹೆದ್ದಾರಿ ಹಾಗೂ ರೈಲ್ವೆ ಯೋಜನೆಗಳಿಗೆ ಅಗತ್ಯವಿರುವ ಮಣ್ಣನ್ನು ಕೆರೆಗಳಿಂದ ಪಡೆಯಲು ಸರ್ಕಾರದಿಂದ ಶೀಘ್ರ ಅನುಮತಿ ಹಾಗೂ ಅಮೃತ್ ಸರೋವರ ಯೋಜನೆ ಅಡಿಯಲ್ಲಿ ಶಿರಾ ಭಾಗದಲ್ಲಿ ಬರುವ 35 ಕೆರೆಗಳಿಗೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಬಗ್ಗೆ ಸದನದಲ್ಲಿಯೂ ಪ್ರಸ್ತಾಪ ಮಾಡಲಾಗಿದೆ ಎಂದು ತಿಳಿಸಿದರು.

ತುಮಕೂರು– ದಾವಣಗೆರೆ ರೈಲು ಮಾರ್ಗ ಯೋಜನೆಗೆ ಆರಂಭದಲ್ಲಿ 1801 ಕೋಟಿ ರೂ. ಮಂಜೂರು ಮಾಡಲಾಗಿದ್ದು, ಈಗಾಗಲೇ 1300 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಕೆರೆಗಳ ಹೂಳೆತ್ತುವ ಕಾರ್ಯಕ್ಕೆ ಸಂಬಂಧಿಸಿದ ಗ್ರಾಮ ಪಂಚಾಯಿತಿಗಳು ಹಾಗೂ ಸಣ್ಣ ನೀರಾವರಿ ಇಲಾಖೆಯಿಂದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅನುಮತಿ ಕೋರಿ ಪತ್ರ ಕಳುಹಿಸಲಾಗಿದ್ದು, ಜಿಲ್ಲಾ ಪಂಚಾಯಿತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಗೆ ಪತ್ರ ಸಲ್ಲಿಸುವಂತೆ ತಿಳಿಸಿ, ಜಿಲ್ಲಾಧಿಕಾರಿಗಳ ಕಚೇರಿಯಿಂದ ಸರ್ಕಾರಕ್ಕೆ ಅನುಮತಿ ಕೋರಿ ಪತ್ರ ರವಾನಿಸಲಾಗುವುದು ಎಂದು ಹೇಳಿದರು.

ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪ ನಿರ್ದೇಶಕರು ಮಾತನಾಡುತ್ತಾ, ರೈತರು ಕೆರೆಗಳ ಹೂಳೆತ್ತುವ ಕಾರ್ಯಕ್ಕೆ ಯಾವುದೇ ಅಭ್ಯಂತರವಿಲ್ಲ, ಆದರೆ ಮದರ್ ಸಾಯಿಲ್ ತೆಗೆಯಲು ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ., ಸಣ್ಣ ನೀರಾವರಿ ಜಿಲ್ಲಾ ಪಂಚಾಯತ್, ರೈಲ್ವೆ, ರಾಷ್ಟ್ರೀಯ ಹೆದ್ದಾರಿ ಇಲಾಖೆ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy